24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 67 | ನವದೆಹಲಿ | ಬೆಲೆ ₹10 | ಸೆಪ್ಟೆಂಬರ್ 2 2026 ಬುಧವಾರ

## ಒಳಪುಟಗಳಲ್ಲಿ

ಕೆಪಿಎಸ್‌ಸಿ ಪಶುವೈದ್ಯರ ನೇಮಕ ಅಕ್ರಮದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಪಾತ್ರ ಅಶೋಕ್ ಆರೋಪ- ಪು.2

ನೀಟ್ ಪ್ರತಿಭಟನೆ ಪ್ರಕರಣ: ಪ್ರತಿಭಟನಕಾರರ ವಿರುದ್ಧದ ಎಫ್‌ಐಆರ್ ರದ್ದು, ಹೊಸ ಪ್ರಕರಣಗಳಿಗೂ ಸುಪ್ರೀಂ ತಡೆ - ಪು.4

ಸಿಂಧೂ ಜಲ ಒಪ್ಪಂದ ಅಮಾನತು: ಹೇಗ್ ಕೋರ್ಟ್ ಅಸಮ್ಮತಿ- ಪು.8

# ಭಯೋತ್ಪಾದನೆ ವಿರುದ್ಧ ದ್ವಂದ್ವ ನೀತಿಗೆ ಅವಕಾಶವಿಲ್ಲ: ಪ್ರಧಾನಿ ಮೋದಿ

## ಉಗ್ರರ ವಿರುದ್ಧ ಕಾರ್ಯಾಚರಣೆ ಮಾತ್ರವಲ್ಲ, ಹಣಕಾಸು ನೆರವು, ಉಗ್ರರ ನೇಮಕಾತಿ, ಆಶ್ರಯ ನೀಡುವ ತಾಣಗಳೂ ನಾಶವಾಗಬೇಕು: ಪ್ರಧಾನಮಂತ್ರಿ ಪ್ರತಿಪಾದನೆ

**ಬಿಷ್ಕೆಕ್, ಸೆ.1: ಭಯೋತ್ಪಾದನೆ ವಿರುದ್ಧ ಹೋರಾಟದಲ್ಲಿ ಯಾವುದೇ ರೀತಿಯ ದ್ವಂದ್ವ ಮಾನದಂಡಗಳಿಗೆ ಅವಕಾಶ ನೀಡಬಾರದು ಎಂದು ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟ ಸಂದೇಶ ನೀಡಿದ್ದಾರೆ.**

ಕಿರ್ಗಿಸ್ತಾನದ ರಾಜಧಾನಿ ಬಿಷ್ಕೆಕ್‌ನಲ್ಲಿ ನಡೆದ ಶಾಂಘೈ ಸಹಕಾರ ಸಂಘಟನೆ ಶೃಂಗಸಭೆಯಲ್ಲಿ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಉಪಸ್ಥಿತಿಯಲ್ಲೇ ಮೋದಿ ಈ ಕಠಿಣ ನಿಲುವು ವ್ಯಕ್ತಪಡಿಸಿದರು. ಭಯೋತ್ಪಾದನೆ ಜಾಗತಿಕ ಶಾಂತಿ, ಸ್ಥಿರತೆ ಹಾಗೂ ಅಭಿವೃದ್ಧಿಗೆ ದೊಡ್ಡ ಬೆದರಿಕೆಯಾಗಿದೆ. ಹೀಗಾಗಿ ಭಯೋತ್ಪಾದನೆಯ ವಿರುದ್ಧ ಹೋರಾಟದಲ್ಲಿ ದೇಶಗಳು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಮೋದಿ ಕರೆ ನೀಡಿದರು. ಭಯೋತ್ಪಾದಕರ ವಿರುದ್ಧ ಕೇವಲ ಕಾರ್ಯಾಚರಣೆ ನಡೆಸುವುದಷ್ಟೇ



ಸಾಕಾಗುವುದಿಲ್ಲ. ಭಯೋತ್ಪಾದನೆಗೆ ಹಣಕಾಸು ಒದಗಿಸುವ ವ್ಯವಸ್ಥೆ, ಉಗ್ರರ ನೇಮಕಾತಿ, ಮೂಲಭೂತವಾದದ ಪ್ರಚಾರ ಹಾಗೂ ಉಗ್ರರಿಗೆ ಆಶ್ರಯ ನೀಡುವ ಸುರಕ್ಷಿತ ತಾಣಗಳನ್ನೂ ಸಂಪೂರ್ಣವಾಗಿ ನಾಶಪಡಿಸಬೇಕಾಗಿದೆ ಎಂದು ಪ್ರಧಾನಿ ಹೇಳಿದರು.

ಭಯೋತ್ಪಾದಕರನ್ನು ಬೆಂಬಲಿಸುವವರು, ಅವರಿಗೆ ಹಣಕಾಸು ನೆರವು ನೀಡುವವರು ಹಾಗೂ ಆಶ್ರಯ ಒದಗಿಸುವವರ ವಿರುದ್ಧವೂ ಕಠಿಣ ಕ್ರಮ ಕೈಗೊಳ್ಳಬೇಕಿದೆ. ಯಾವುದೇ ದೇಶ ಅಥವಾ ಸಂಘಟನೆ ಭಯೋತ್ಪಾದನೆಯನ್ನು ತನ್ನ ರಾಜಕೀಯ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಅವಕಾಶ ನೀಡಬಾರದು ಎಂಬ ಸಂದೇಶವನ್ನು ಮೋದಿ ನೀಡಿದರು. ಎಸ್‌ಸಿಒ ರಾಷ್ಟ್ರಗಳ ನಡುವೆ ಭದ್ರತೆ ಮತ್ತು ಭಯೋತ್ಪಾದನೆ ನಿಗ್ರಹದ ಸಹಕಾರ ಮತ್ತಷ್ಟು ಬಲಪಡಿಸುವ ಅಗತ್ಯವನ್ನೂ ಅವರು ಒತ್ತಿ ಹೇಳಿದರು. ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಆಯ್ದುಕೊಂಡು ಕ್ರಮ ಕೈಗೊಳ್ಳುವ ಬದಲು, ಎಲ್ಲ ರೀತಿಯ ಭಯೋತ್ಪಾದನೆಯನ್ನೂ ಒಂದೇ ಮಾನದಂಡದಲ್ಲಿ ಎದುರಿಸಬೇಕು ಎಂಬುದು ಭಾರತದ ನಿಲುವು ಎಂದು ಪ್ರಧಾನಿ ಪ್ರತಿಪಾದಿಸಿದರು.

### ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಭೇಟಿ

ಶಾಂಘೈ ಸಹಕಾರ ಸಂಘಟನೆ ಶೃಂಗಸಭೆಯ ಹಿನ್ನೆಲೆಯಲ್ಲಿ ಬಿಷ್ಕೆಕ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಮುಖಾಮುಖಿಯಾಗಿದ್ದು, ಉಭಯ ನಾಯಕರು ಹಸ್ತಲಾಘವ ಮಾಡಿ ಪರಸ್ಪರ ಮಾತುಕತೆ ನಡೆಸಿದರು.



ಎಸ್‌ಸಿಒ ಶೃಂಗಸಭೆಯಲ್ಲಿ ಹಲವು ರಾಷ್ಟ್ರಗಳ ನಾಯಕರು ಭಾಗವಹಿಸಿದ್ದು, ಪ್ರಧಾನಿ ಮೋದಿ ಅವರು ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಹಾಗೂ ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರೊಂದಿಗೆ ಸೌಹಾರ್ದಯುತವಾಗಿ ಹಸ್ತಲಾಘವ ಮಾಡಿದರು. ಮೋದಿ– ಭೇಟಿಯ ದೃಶ್ಯಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗಮನ ಸೆಳೆದಿವೆ. ಇದೇ ವೇಳೆ ಪ್ರಧಾನಿ ಮೋದಿ ಅವರು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರೊಂದಿಗೂ ಮಾತುಕತೆ ನಡೆಸಿದ್ದು, ಉಕ್ರೇನ್ ಯುದ್ಧಕ್ಕೆ ಅಂತ್ಯ ಹಾಡಿ ಶಾಂತಿ ಸ್ಥಾಪಿಸುವ ಅಗತ್ಯವನ್ನು ಪ್ರತಿಪಾದಿಸಿದರು. ಮಾನವೀಯ ದೃಷ್ಟಿಯಿಂದ ಯುದ್ಧ ಕೊನೆಗೊಳ್ಳಬೇಕು ಎಂಬುದು ಭಾರತದ ನಿಲುವು ಎಂದು ಮೋದಿ ಪುನರುಚ್ಚರಿಸಿದರು.



ದಕ್ಷಿಣ ಆಫ್ರಿಕಾದ ಕೇಪ್‌ಟೌನ್‌ನಲ್ಲಿ ಸೆ.13ರಿಂದ 19ರವರೆಗೆ ನಡೆಯಲಿರುವ 69ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನಕ್ಕೆ ಸಂಬಂಧಪಟ್ಟಂತೆ ನವದೆಹಲಿಯ ಸಂಸತ್ ಭವನದಲ್ಲಿ ಲೋಕಸಭಾ ಸ್ಪೀಕರ್ ಓಂಬಿರ್ಲಾ ಜತೆ ಕರ್ನಾಟಕದ ನಿಯೋಗವನ್ನು ಮುನ್ನಡೆಸಲಿರುವ ವಿಧಾನ ಸಭಾಧ್ಯಕ್ಷ ಜೆ.ಎಸ್.ಪಾಟೀಲ್ ವಿಧಾನ ಪರಿಷತ್ ಸಭಾಪತಿ ಎಂ.ಎ. ಸಲೀಂ ಅಹ್ಮದ್ ಅವರು ಮಂಗಳವಾರ ಮಹತ್ವದ ಚರ್ಚೆ ನಡೆಸಿದರು.

# ಕಾಂಗ್ರೆಸ್ ಸರ್ಕಾರ ಹೋಗುವವರೆಗೂ ಬಿಜೆಪಿ ಹೋರಾಟ ನಿಲ್ಲದು: ವಿಜಯೇಂದ್ರ

■ ಭ್ರಷ್ಟಾಚಾರ, ರೈತ, ದಲಿತ ಹಾಗೂ ಮಹಿಳಾ ವಿರೋಧಿ ಆಡಳಿತದ ವಿರುದ್ಧದ ಜನಾಂದೋಲನ: ಬಿ.ವೈ. ವಿಜಯೇಂದ್ರ

**ಲಿಂಗಸುಗೂರು, ಸೆ.1:** ಕರ್ನಾಟಕದ ರಾಜಕೀಯದ ದಿಕ್ಕನ್ನೇ ಬದಲಿಸುವ ಶಕ್ತಿ ಬಿಜೆಪಿಯ ಐತಿಹಾಸಿಕ ಪಾದಯಾತ್ರೆಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಲಿಂಗಸೂರಿನಿಂದ ಆರಂಭವಾದ ಬಿಜೆಪಿ ಪಾದಯಾತ್ರೆಗೆ ಮಂಗಳವಾರ ಚಾಲನೆ ನೀಡಿ ಮಾತನಾಡಿದ ಅವರು, ಇದು ಕೇವಲ ರಾಜಕೀಯ ಕಾರ್ಯಕ್ರಮವಲ್ಲ; ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ, ರೈತ ವಿರೋಧಿ, ದಲಿತ ವಿರೋಧಿ, ಬಡವರ ವಿರೋಧಿ, ಯುವಜನ ಹಾಗೂ ಮಹಿಳಾ ವಿರೋಧಿ ಆಡಳಿತದ ವಿರುದ್ಧದ ಜನಾಂದೋಲನ ಎಂದು ಹೇಳಿದರು.

ಬಿಜೆಪಿ ಯಾಕೆ ಪಾದಯಾತ್ರೆ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಪ್ರಶ್ನಿಸುತ್ತಿದ್ದಾರೆ. ನಿಮ್ಮ ಸರ್ಕಾರದ ವೈಫಲ್ಯಗಳೇ ನಮ್ಮ ಪಾದಯಾತ್ರೆಗೆ ಕಾರಣ. ರಾಜ್ಯದ ಜನರ ಹಕ್ಕು, ನ್ಯಾಯ ಮತ್ತು ಭವಿಷ್ಯಕ್ಕಾಗಿ ನಾವು ಬೀದಿಗಿಳಿದಿದ್ದೇವೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ದುರುಪಯೋಗ ಆರೋಪದ ಹಿನ್ನೆಲೆಯಲ್ಲಿ ಸಚಿವ ಬಿ.ನಾಗೇಂದ್ರ ರಾಜೀನಾಮೆ ನೀಡಿರುವುದು ಬಿಜೆಪಿ ಹೋರಾಟದ ಮೊದಲ ಜಯವಾಗಿದೆ. ದಲಿತರ ಅಭಿವೃದ್ಧಿಗೆ ಮೀಸಲಾದ ಸುಮಾರು 187 ಕೋಟಿ ರೂ. ಹಣದ ದುರುಪಯೋಗದ ಆರೋಪಕ್ಕೆ ಕಾಂಗ್ರೆಸ್ ಸರ್ಕಾರ ಉತ್ತರಿಸಬೇಕು. ಎಸ್‌ಸಿಪಿ–ಟಿಎಸ್‌ಪಿ ಯೋಜನೆಗಳ ಹಣ ಬೇರೆಡೆ ವರ್ಗಾವಣೆ ಮಾಡಿದ ಆರೋಪಗಳಿಗೂ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು. ಈ ಸರ್ಕಾರ ತೊಲಗುವವರೆಗೂ ಬಿಜೆಪಿ ಹೋರಾಟ ನಿರಂತರ ಎಂದರು.

ವಾಲ್ಮೀಕಿ ಸಮುದಾಯದ ಯುವಕನ ಹತ್ಯೆ ಸೇರಿದಂತೆ ಹಲವು ಘಟನೆಗಳಲ್ಲಿ ಸರ್ಕಾರ ಗಂಭೀರವಾಗಿ ಸ್ಪಂದಿಸಿಲ್ಲ ಎಂದು ಆರೋಪಿಸಿದ ಅವರು, ಸಂತ್ರಸ್ತ ಕುಟುಂಬಗಳಿಗೆ ಸರ್ಕಾರ ಮಾನವೀಯವಾಗಿ ನೆರವಾಗಬೇಕು ಎಂದು ಒತ್ತಾಯಿಸಿದರು. ರಾಜ್ಯದಲ್ಲಿ ಬರದ ಪರಿಸ್ಥಿತಿ ಗಂಭೀರವಾಗಿದ್ದರೂ ಸರ್ಕಾರ ಸಮರ್ಪಕ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ ವಿಜಯೇಂದ್ರ, ಸಾವಿರಾರು ರೈತ ಕುಟುಂಬಗಳು ಸಂಕಷ್ಟದಲ್ಲಿದ್ದು, ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇಲ್ಲ ಎಂದು ಟೀಕಿಸಿದರು. ಎರಡೂವರೆ ಲಕ್ಷ ಸರ್ಕಾರಿ ಹುದ್ದೆಗಳು ಖಾಲಿ ಇದ್ದರೂ ಸರ್ಕಾರ ಅವುಗಳನ್ನು ಭರ್ತಿ ಮಾಡುತ್ತಿಲ್ಲ. KPSC ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮಗಳ ಆರೋಪಗಳಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡು ಖಾಲಿ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು ಎಂದು ಆಗ್ರಹಿಸಿದರು.




### 2028ಕ್ಕೆ ಎನ್‌ಡಿಎ ಸರ್ಕಾರ: ಬಿಜೆಪಿಯ 6ನೇ ಗ್ಯಾರಂಟಿ

ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿಗಳ ಬಗ್ಗೆ ಮಾತನಾಡುತ್ತಿದೆ. ಆದರೆ ಬಿಜೆಪಿಯ ಆರನೇ ಗ್ಯಾರಂಟಿ – 2028ರ ವಿಧಾನಸಭೆ ಚುನಾವಣೆಯಲ್ಲಿ ಕರ್ನಾಟಕದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂಬುದಾಗಿದೆ. ಲಿಂಗಸೂರಿನಿಂದ ಆರಂಭವಾದ ಈ ಪಾದಯಾತ್ರೆ ಕರ್ನಾಟಕದ ರಾಜಕೀಯ ಬದಲಾವಣೆಗೆ ಮುನ್ನುಡಿಯಾಗಲಿದೆ. ಕಾಂಗ್ರೆಸ್ ಸರ್ಕಾರವನ್ನು ಅಧಿಕಾರದಿಂದ ಕಿತ್ತೊಗೆಯುವವರೆಗೂ ಬಿಜೆಪಿ ಹೋರಾಟ ಮುಂದುವರಿಯಲಿದೆ ಎಂದು ವಿಜಯೇಂದ್ರ ಘೋಷಿಸಿದರು.

### ರಾಜಕೀಯ ಅಸ್ತಿತ್ವಕ್ಕಾಗಿ ಬಿಜೆಪಿ ಪಾದಯಾತ್ರೆ: ಸಿಎಂ

ಹುಬ್ಬಳ್ಳಿಯಲ್ಲಿ ಮಾತನಾಡಿದ ಸಿಎಂ ಡಿ.ಕೆ. ಶಿವಕುಮಾರ್, ಬಿಜೆಪಿಯ ಪಾದಯಾತ್ರೆ ಅವರ ರಾಜಕೀಯ ಅಸ್ತಿತ್ವಕ್ಕಾಗಿಯೇ ಹೊರತು ರಾಜ್ಯದ ಮತ್ತು ರೈತರ ಹಿತಾಸಕ್ತಿಗಾಗಿ ಅಲ್ಲ. ಅವರು ಇಂತಹ ನೂರು ಯಾತ್ರೆ ಮಾಡಿದರೂ ಹೆದರಲ್ಲ. ಅದಕ್ಕೆ ಸೂಕ್ತ ಸಮಯದಲ್ಲಿ ಉತ್ತರಿಸುವೆ ಎಂದು ತಿರುಗೇಟು ನೀಡಿದ್ದಾರೆ. ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಗೆ ರಾಜಕಾರಣವೇ ಮುಖ್ಯವಾಗಿದೆ. ಸದನದಲ್ಲಿ ಯಾವ ವಿಷಯಕ್ಕೂ ಚರ್ಚೆಗೆ ಅವಕಾಶ ಮಾಡಲಿಲ್ಲ. ಮಾಜಿ ಸಚಿವ ಬಿ. ನಾಗೇಂದ್ರ ಪಕ್ಷಕ್ಕೆ ಮುಜುಗರ ಆಗಬಾರದೆಂದು ರಾಜೀನಾಮೆ ನೀಡಿದರು. ಆದರೆ, ಬಿಜೆಪಿಯವರು ರಾಜಕಾರಣಕ್ಕಾಗಿ ಪಾದಯಾತ್ರೆ ಮಾಡುತ್ತಿದ್ದಾರೆ. ರಾಹುಲ್ ಗಾಂಧಿ ಮೇಲೆ ಪ್ರಕರಣ ದಾಖಲು ಮಾಡಿದ್ದು ಸರಿಯಲ್ಲ. ಅವರೇನು ಪ್ರಕರಣದಲ್ಲಿ ಭಾಗಿಯಾಗಿದ್ದಾರೆಯೇ ಎಂದು ಹರಿಹಾಯ್ದರು.ಭಾರತ ಜೋಡೋದಲ್ಲಿ ನಾವು ಯಾರನ್ನು ಬಲವಂತ ಮಾಡಲ್ಲ. ಸ್ವಯಂ ಆಗಿ ಯುವ ಜನಾಂಗವು ಆಫ್‌ಲೈನ್‌ದಲ್ಲಿ ಪಾಲ್ಗೊಳ್ಳುತ್ತಿದ್ದಾರೆ ಎಂದು ಹೇಳಿದರು.

# ಕೇಂದ್ರದ ಮಾರ್ಗಸೂಚಿ ಪ್ರಕಾರವೇ ಬರ ಘೋಷಣೆ: ಸಿಎಂ

**ಗದಗ, ಸೆ.1:** ಪರಿಶೀಲನೆ ನಡೆಸಿ ಕೇಂದ್ರದ ಮಾರ್ಗಸೂಚಿ ಅನುಸಾರ ಬರ ಪೀಡಿತ ತಾಲ್ಲೂಕು ಘೋಷಣೆ ಮಾಡಲಾಗುವುದು ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ರೈತರಿಗೆ ಭರವಸೆ ನೀಡಿದರು.

ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕಿನ ಕದಾಂಪೂರ, ಹುಲಕೋಟಿ, ಕುರ್ತಕೋಟಿ ಗ್ರಾಮಗಳಲ್ಲಿ ರೈತರ ಜಮೀನಿಗೆ ಮಂಗಳವಾರ ಭೇಟಿನೀಡಿ ಸ್ಥಳೀಯ ರೈತರೊಂದಿಗೆ ಚರ್ಚೆ ನಡೆಸಿದರು.

ಈ ಬಾರಿ ಬರ ಪರಿಸ್ಥಿತಿಯಿಂದ ಬೆಳೆಗಳು ಹಾಳಾಗಿವೆ. ಗದಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳು ಬರದಿಂದ ತತ್ತರಿಸಿವೆ. ಹೀಗಾಗಿ ಬಾಕಿ ಇರುವ ಜಿಲ್ಲೆಯ ಆರು ತಾಲ್ಲೂಕನ್ನು ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡುವಂತೆ ರೈತರು ಮನವಿ ಮಾಡಿದರು.

ರೈತರ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು, ಬರ ಪರಿಸ್ಥಿತಿ ಬಗ್ಗೆ ಪರಿಶೀಲನೆ ಮಾಡುತ್ತಿದ್ದೇವೆ. ಮತ್ತಷ್ಟು ಪ್ರದೇಶಗಳಿಗೆ ಭೇಟಿನೀಡಿ ಪರಿಶೀಲನೆ ಮಾಡುತ್ತೇವೆ. ಪರಿಸ್ಥಿತಿ ಅಧ್ಯಯನ ಬಳಿಕ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಿ ಬರ ಪೀಡಿತ ತಾಲ್ಲೂಕು ಘೋಷಣೆ ಮಾಡಲಾಗುವುದು ಎಂದು ಭರವಸೆ ನೀಡಿದರು. ಕುರ್ತಕೋಟಿಯಲ್ಲಿ ರೈತ ಜಿ.ಎನ್. ಪಾಟೀಲ ಅವರ ಜಮೀನಿಗೆ ಭೇಟಿ ನೀಡಿ ಅವರ ಜಮೀನಿನ ಬದುಗಳಲ್ಲಿ ನೆಡಲಾಗಿರುವ ತೇಗದ ಮರಗಳನ್ನು ಪರಿಶೀಲಿಸಿ, ಸರ್ಕಾರ ಕೈಗೊಂಡಿರುವ ತೇಗದಸಿರಿ ಯೋಜನೆ ಬಗ್ಗೆ ಚರ್ಚೆ ನಡೆಸಿದರು. ಬಳಿಕ ಅಲ್ಲಿಗೆ ಬಂದಿದ್ದ ಕೃಷಿ ಕೂಲಿ ಕಾರ್ಮಿಕರನ್ನು ಭೇಟಿ ಮಾಡಿ ಚರ್ಚಿಸಿದರು. ಈ ವೇಳೆ ಕೂಲಿ ಕಾರ್ಮಿಕರು ನರೇಗಾ ಯೋಜನೆ ಇದ್ದಾಗ ಯೋಜನೆ ಅಡಿಯಲ್ಲಿ ನಾವು ಹೆಚ್ಚು ಕೆಲಸ ಪಡೆಯುತ್ತಿದ್ದೆವು. ಈಗ ವಿಬಿ ರಾಮ್ ಜಿ ಯೋಜನೆ ಅಡಿಯಲ್ಲಿ ಹೆಚ್ಚು ಕೆಲಸ ಸಿಗುವಂತೆ ಮಾಡಬೇಕು ಎಂದು ಮನವಿ ಮಾಡಿದರು.

**ಗ್ಯಾರಂಟಿ ಯೋಜನೆಗಳು ತಲುಪುತ್ತಿವೆಯೇ:** ಕೃಷಿ ಕಾರ್ಮಿಕರೊಂದಿಗೆ ಸಿಎಂ ಮಾತುಕತೆಗ್ಯಾರಂಟಿ ಯೋಜನೆಗಳು ಸರಿಯಾಗಿ ತಲುಪುತ್ತಿವೆಯೇ ಎಂದು ವಿಚಾರಿಸಿದರು. ಗೃಹಜ್ಯೋತಿ ಯೋಜನೆ ಮರುಪರಿಶೀಲನೆ ಮಾಡಲಾಗಿದೆಯೇ ಎಂದು ವಿಚಾರಿಸಿದರು. ಜೊತೆಗೆ ಗೃಹಲಕ್ಷ್ಮಿ ಯೋಜನೆ ಮರುಪರಿಶೀಲನೆ ಮಾಡಲಾಗುತ್ತಿದ್ದೂ, ನೀವು ನಿಮ್ಮ ದೂರವಾಣಿ ಸಂಖ್ಯೆಯನ್ನೇ ನೀಡಬೇಕು. ಮೂರನೇ ವ್ಯಕ್ತಿ ದೂರವಾಣಿ ಸಂಖ್ಯೆ ನೀಡಿದರೆ ಆಗುವುದಿಲ್ಲ ಎಂದು ಹೇಳಿದರು. ಈ ವೇಳೆ ಗ್ಯಾರಂಟಿ ಯೋಜನೆಗಳು ತಮ್ಮ ಬದುಕಿಗೆ ಹೇಗೆ ನೆರವಾಗಿದೆ ಎಂದು ಕೂಲಿಕಾರ್ಮಿಕರು ವಿವರಿಸಿದರು. ಕೂಲಿ ಕಾರ್ಮಿಕರು ಗ್ಯಾರಂಟಿ ಯೋಜನೆಗಳು ನೆರವಾಗಿದ್ದು, ಪ್ರತಿ ತಿಂಗಳು 10 ಕೆ.ಜಿ. ಅಕ್ಕಿ ಬರುತ್ತಿದೆ, ಗೃಹಲಕ್ಷ್ಮಿ ಯೋಜನೆ ಹಣ ಬರುತ್ತಿದೆ, ಗೃಹಜ್ಯೋತಿ ಮೂಲಕ ಉಚಿತ ವಿದ್ಯುತ್ ಸಿಗುತ್ತಿದ್ದೂ ಈ ಯೋಜನೆಗಳಿಂದ ನಮಗೆ ಕೂಲಿ ಸಿಗದಿದ್ದಾಗಲೂ ನೆಮ್ಮದಿ ಜೀವನ ನಡೆಸಬಹುದು ಎಂದು ತಿಳಿಸಿದರು.



ಸಿಎಂ ಡಿ.ಕೆ. ಶಿವಕುಮಾರ್ ಅವರು ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕಿನ ಕದಾಂಪುರ ಗ್ರಾಮದಲ್ಲಿ ರೈತರ ಜಮೀನಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಚಿವ ಬಸವರಾಜ ರಾಯರಡ್ಡಿ ಇದ್ದರು.

### ರಾಜ್ಯ ಮತ್ತು ಕೇಂದ್ರದ ವರದಿ ಹೊಂದಾಣಿಕೆ ಆಗಬೇಕು

ರಾಜ್ಯದ ವರದಿ ಕೇಂದ್ರದ ವರದಿ ಜತೆ ಹೊಂದಾಣಿಕೆ ಆಗಬೇಕು. ದೆಹಲಿಯಿಂದ ಬರುವ ಬರ ಅಧ್ಯಯನ ತಂಡಕ್ಕೆ ನಮ್ಮ ವರದಿ ಒಪ್ಪಿಗೆ ಆಗಬೇಕು. ಆಗ ಮಾತ್ರ ಕೇಂದ್ರ ಸರ್ಕಾರ ನೆರವು ನೀಡಲಿದೆ. ನಾವು ನಮ್ಮ ಕೈಲಾದ ಕ್ರಮ ಕೈಗೊಂಡಿದ್ದೇವೆ. ಕುಡಿಯುವ ನೀರಿನ ಪೂರೈಕೆ ಬಗ್ಗೆ ಸೂಚನೆ ನೀಡಲಾಗಿದೆ. ಕುಡಿಯುವ ನೀರಿಗೆ ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂ. ಅನುದಾನ ನೀಡಲಾಗಿದೆ. ಜಿಲ್ಲಾಧಿಕಾರಿಗಳ ಖಾತೆಯಲ್ಲಿ ಹೆಚ್ಚುವರಿ ಹಣ ಇಡಲಾಗಿದೆ ಎಂದು ಡಿ.ಕೆ. ಶಿವಕುಮಾರ್ ವಿವರಿಸಿದರು.

### ಪಂಚಾಯಿತಿ ಮಟ್ಟದಲ್ಲಿ ಗ್ಯಾರಂಟಿ ಸಮಿತಿ

ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಚುರುಕಾಗಬೇಕು, ಜನ ತಮ್ಮ ಸಮಸ್ಯೆಗಳಿಗೆ ಪರಿಹಾರಕ್ಕಾಗಿ ಅಲೆದಾಡುವುದನ್ನು ತಪ್ಪಿಸಲು ಪ್ರಜಾಸೇವಾ ಆಂದೋಲನ ಸೆ.5ರಿಂದ ಆರಂಭವಾಗುತ್ತಿದೆ. ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸರಿಯಾದ ರೀತಿಯಲ್ಲಿ ತಲುಪಬೇಕು. ದುರ್ಬಳಕೆ ಆಗಬಾರದು. ಅದಕ್ಕಾಗಿ ಮರುಪರಿಶೀಲನೆ ಹಾಗೂ ಪಂಚಾಯಿತಿ ಮಟ್ಟದ ಗ್ಯಾರಂಟಿ ಸಮಿತಿ ರಚಿಸುತ್ತಿದ್ದೇವೆ. ನಮ್ಮ ಸರ್ಕಾರ 100 ದಿನಗಳಲ್ಲಿ ಏನೆಲ್ಲಾ ಮಾಡಿದೆ, ಮುಂದೆ ಏನು ಮಾಡಲಿದೆ ಎಂಬ ವಿಚಾರವಾಗಿ ಅಧಿವೇಶನದಲ್ಲಿ ತಿಳಿಸಲು ನಿರ್ಧರಿಸಿದ್ದೆ. ಆದರೆ ಅದಕ್ಕೆ ವಿರೋಧ ಪಕ್ಷದವರು ಅವಕಾಶ ನೀಡಲಿಲ್ಲ. 100 ದಿನಗಳ ಕಾರ್ಯಕ್ರಮ ವೇಳೆ ಈ ವಿಚಾರವನ್ನು ತಿಳಿಸುತ್ತೇನೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

# ಮೇಕೆದಾಟು, ಕೃಷ್ಣಾ ಮೇಲ್ದಂಡೆ ಯೋಜನೆಗಳಿಗೆ ಅನುಮೋದನೆ: ಕೇಂದ್ರಕ್ಕೆ ಚಲುವರಾಯಸ್ವಾಮಿ ಒತ್ತಾಯ


**ನವದೆಹಲಿ, ಸೆ.1:** ಕರ್ನಾಟಕದ ಪ್ರಮುಖ ನೀರಾವರಿ ಯೋಜನೆಗಳಿಗೆ ಕೇಂದ್ರದ ಬಾಕಿ ಇರುವ ಅನುಮೋದನೆಗಳನ್ನು ತ್ವರಿತವಾಗಿ ನೀಡಬೇಕು ಎಂದು ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ನವದೆಹಲಿಯ ಸುಷ್ಮಾ ಸ್ವರಾಜ್ ಭವನದಲ್ಲಿ ಕೇಂದ್ರ ಜಲಶಕ್ತಿ ಸಚಿವಾಲಯ ಆಯೋಜಿಸಿರುವ ಎರಡು ದಿನಗಳ ರಾಷ್ಟ್ರೀಯ ಜಲ ಇಲಾಖಾ ಸಮಾವೇಶದಲ್ಲಿ ಸಚಿವರ ನೇತೃತ್ವದ ಕರ್ನಾಟಕದ ಉನ್ನತ ಮಟ್ಟದ ನಿಯೋಗ ಭಾಗವಹಿಸಿ ರಾಜ್ಯದ ನೀರಾವರಿ ಯೋಜನೆಗಳು, ಜಲ ನಿರ್ವಹಣೆ ಹಾಗೂ ಅಂತಾರಾಜ್ಯ ಜಲವಿವಾದಗಳ ಕುರಿತು ವಿವರವಾದ ಮಾಹಿತಿ ಮತ್ತು ವಾದ ಮಂಡಿಸಿತು.

**ಮೇಕೆದಾಟು ಯೋಜನೆಗೆ ಅನುಮೋದನೆ:** ಬೆಂಗಳೂರು ಸೇರಿದಂತೆ ಮಂಡ್ಯ, ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳ ಕುಡಿಯುವ ನೀರಿನ ಭದ್ರತೆ ಹಾಗೂ ಸಂಕಷ್ಟದ ಸಂದರ್ಭಗಳಲ್ಲಿ ನೀರಿನ ನಿರ್ವಹಣೆಗೆ ಮಹತ್ವದ್ದಾಗಿರುವ ಮೇಕೆದಾಟು ಸಮತೋಲನ ಜಲಾಶಯ ಯೋಜನೆಯ ಪರಿಷ್ಕೃತ ಡಿಪಿಆರ್‌ಗೆ ಕೇಂದ್ರ ಜಲ ಆಯೋಗವು ಶೀಘ್ರ ಅನುಮೋದನೆ ನೀಡಬೇಕು ಎಂದು ಚಲುವರಾಯಸ್ವಾಮಿ ಆಗ್ರಹಿಸಿದರು.

**130 ಟಿಎಂಸಿ ನೀರಿನ ಬಳಕೆಗೆ ಒತ್ತು:** ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರಡಿ ಕರ್ನಾಟಕಕ್ಕೆ ಹಂಚಿಕೆಯಾಗಿರುವ 130 ಟಿಎಂಸಿ ನೀರನ್ನು ಸದ್ಬಳಕೆ ಮಾಡಿಕೊಳ್ಳಲು ಕೃಷ್ಣಾ ಜಲವಿವಾದ ನ್ಯಾಯಾಧಿಕರಣ–2ರ ಅಂತಿಮ ತೀರ್ಪನ್ನು ಕೇಂದ್ರ ಸರ್ಕಾರ ಅಧಿಕೃತ ಗೆಜೆಟ್ನಲ್ಲಿ ಶೀಘ್ರ ಅಧಿಸೂಚನೆ ಹೊರಡಿಸಬೇಕು ಎಂದು ಮನವಿ ಮಾಡಲಾಯಿತು.

**ಕಳಸಾ–ಬಂಡೂರಿ, ಭದ್ರಾ ಮೇಲ್ದಂಡೆ:** ಹುಬ್ಬಳ್ಳಿ–ಧಾರವಾಡ ಸೇರಿದಂತೆ ಉತ್ತರ ಕರ್ನಾಟಕದ ಕುಡಿಯುವ ನೀರಿನ ಅಗತ್ಯಕ್ಕೆ ಸಂಬಂಧಿಸಿದ ಕಳಸಾ–ಬಂಡೂರಿ ನಾಲಾ ತಿರುವು ಯೋಜನೆಗಳಿಗೆ ಬಾಕಿ ಇರುವ ಅರಣ್ಯ ಮತ್ತು ವನ್ಯಜೀವಿ ಅನುಮೋದನೆಗಳನ್ನು ತ್ವರಿತವಾಗಿ ನೀಡಬೇಕು ಎಂದು ಕೋರಲಾಯಿತು. ಕೇಂದ್ರ ಬಜೆಟ್‌ನಲ್ಲಿ ಘೋಷಿಸಲಾದ ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ನೆರವು ಸೇರಿದಂತೆ ಪರಿಷ್ಕೃತ ಅಂದಾಜು ಮೊತ್ತಕ್ಕೆ ಸಾರ್ವಜನಿಕ ಹೂಡಿಕೆ ಮಂಡಳಿಯ ಶಿಫಾರಸು ಪ್ರಕ್ರಿಯೆ ಪೂರ್ಣಗೊಳಿಸಿ ಅನುದಾನ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಲಾಯಿತು.

### ರಾಷ್ಟ್ರೀಯ ಜಲ ಇಲಾಖಾ ಸಮಾವೇಶ-2026ದಲ್ಲಿ ನೀರಾವರಿ ಯೋಜನೆ, ಅಂತಾರಾಜ್ಯ ಜಲವಿವಾದಗಳ ಮಾಹಿತಿ ಮತ್ತು ವಾದ ಮಂಡನೆ



ನೀರಾವರಿ ಯೋಜನೆಗಳ ಅನುಷ್ಠಾನದಲ್ಲಿನ ವಿಳಂಬ ಕಡಿಮೆ ಮಾಡಲು ಕರ್ನಾಟಕ ಕೈಗೊಂಡಿರುವ ಹಲವು ಸುಧಾರಣಾ ಕ್ರಮಗಳನ್ನೂ ಸಮಾವೇಶದಲ್ಲಿ ವಿವರಿಸಲಾಯಿತು. ಯುಕೆಪಿ–3 ಮಾದರಿಯ ಒಪ್ಪಿಗೆ ಪರಿಹಾರ ದರ, ಲೋಕ ಅದಾಲತ್ ಮೂಲಕ ಭೂಸ್ವಾಧೀನ ವ್ಯಾಜ್ಯಗಳ ತ್ವರಿತ ಇತ್ಯರ್ಥ, ಎತ್ತೆತ್ತುವ ನೀರಾವರಿ ಯೋಜನೆಗಳ ಡಿಪಿಆರ್ ಪರಿಶೀಲನೆಗೆ ಅಂದಾಜು ಪರಿಶೀಲನಾ ಸಮಿತಿ ರಚನೆ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್ ಮೂಲಕ ಪಾರದರ್ಶಕ ಇ–ಟೆಂಡರಿಂಗ್ ಹಾಗೂ ಭೂಸ್ವಾಧೀನ ಕಡಿಮೆ ಮಾಡಲು ಪೈಪ್ಡ್ ನೀರಾವರಿ ವ್ಯವಸ್ಥೆ ಅಳವಡಿಕೆಯಂತಹ ಕ್ರಮಗಳನ್ನು ಪ್ರಸ್ತುತಪಡಿಸಲಾಯಿತು.

ಸಮಾವೇಶದ ಮೊದಲ ಅಧಿವೇಶನದಲ್ಲಿ ವಿವಿಧ ರಾಜ್ಯಗಳ ಜಲಸಂಪನ್ಮೂಲ ಮತ್ತು ಸಾರ್ವಜನಿಕ ಆರೋಗ್ಯ ಎಂಜಿನಿಯರಿಂಗ್ ಇಲಾಖೆಗಳ ಸಚಿವರು, ಕಾರ್ಯದರ್ಶಿಗಳು ಹಾಗೂ ನೀತಿ ನಿರೂಪಕರೊಂದಿಗೆ ದೇಶದ ಜಲಕ್ಷೇತ್ರದ ಸವಾಲುಗಳು ಮತ್ತು ಭವಿಷ್ಯದ ಕಾರ್ಯತಂತ್ರಗಳ ಕುರಿತು ಚರ್ಚೆ ನಡೆಯಿತು. ಜಲಸಂರಕ್ಷಣೆ, ಮಳೆನೀರು ಕೊಯ್ಲು, ಕುಡಿಯುವ ನೀರಿನ ಮೂಲಗಳ ಸುಸ್ಥಿರತೆ, ಗ್ರಾಮೀಣ ನೀರು ಸರಬರಾಜು ಜಾಲದ ಆಧುನೀಕರಣ ಮತ್ತು ಅಂತಾರಾಜ್ಯ ಜಲನಿರ್ವಹಣೆಯಲ್ಲಿ ಸಹಕಾರ ಸೇರಿದಂತೆ ಹಲವು ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಸಚಿವರು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರೊಂದಿಗೆ ಮಾತುಕತೆ ನಡೆಸಿ ಕರ್ನಾಟಕದ ಪ್ರಮುಖ ನೀರಾವರಿ ಯೋಜನೆಗಳ ಕುರಿತು ಪ್ರಾಥಮಿಕ ಸಮಾಲೋಚನೆ ನಡೆಸಿದರು. ಸಚಿವ ಈಶ್ವರ್ ಖಂಡ್ರೆ ಸೇರಿದಂತೆ ವಿವಿಧ ರಾಜ್ಯಗಳ ಸಚಿವರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಜಲಸಂಪನ್ಮೂಲ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಸೇರಿದಂತೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ನಿತ್ಯ ಪಂಚಾಂಗ 2.09.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ

ಬಾಗೇವಾಡಿ ಜಾತ್ರೆ, ತಲಕಾಡು ಬಾಲಕೃಷ್ಣಾಬಂದ ವರ್ಧಂತಿ ಸೋಂಡೂರು ಕುಮಾರಸ್ವಾಮಿ ವಿಶೇಷ ಪೂಜೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಗೂಟ ಹೊಡ್ಕೊಂಡ್ ಇರ್ತೀವಿ ಅನ್ನೋರಿಗೆ ಜನರೇ ಉತ್ತರ ಕೊಡ್ತಾರೆ: ಎಚ್‌ಡಿಕೆ



**ಬೆಂಗಳೂರು, ಸೆ.1:** ಮುಂದಿನ ಏಳೂವರೆ ವರ್ಷವೂ ನಾನೇ ಗೂಟ ಹೊಡೆದುಕೊಂಡು ಇರುತ್ತೇನೆ ಎನ್ನುವವರಿಗೆ ಜನರೇ ತಕ್ಕ ಉತ್ತರ ನೀಡುತ್ತಾರೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಪರೋಕ್ಷವಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ತಿರುಗೇಟು ನೀಡಿದ್ದಾರೆ. ರಾಜ್ಯ ರಾಜಕಾರಣಕ್ಕೆ ಮರಳುವ ಕುರಿತು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯ ರಾಜಕಾರಣಕ್ಕೆ ಖಂಡಿತ ಮರಳುತ್ತೇನೆ. ಆದರೆ ಈಗಲ್ಲ, 2028ರ ಸಾರ್ವತ್ರಿಕ ಚುನಾವಣೆಯ ಸಮಯದಲ್ಲಿ ಎಂದು ಹೇಳಿದರು. ದೇವೇಗೌಡರ ಕುಟುಂಬದ ಹೆಸರನ್ನು ಹಾಳುಮಾಡಲು ಏನೆಲ್ಲಾ ಹೇಳಿಕೆ ನೀಡಿದ್ದೀರೋ ಅದನ್ನೆಲ್ಲಾ ತಾಳ್ಮೆಯಿಂದ ಸಹಿಸಿಕೊಂಡಿದ್ದೇವೆ, ನಾವು ಯಾರಿಗೂ ಬೆದರಿಕೆ ಹಾಕಿಲ್ಲ. ರಾಜ್ಯದ ಆಸ್ತಿಯನ್ನು ಉಳಿಸಲು ರಾಜಿಯಾಗದೆ ಹೋರಾಟ ಮಾಡಿದ್ದನ್ನೇ ಧಮ್ಕಿ ಎಂದು ವ್ಯಾಖ್ಯಾನಿಸುತ್ತಿದ್ದಾರೆ ಎಂದು ಕಿಡಿಕಾರಿದರು.

ಕೆಪಿಎಸ್‌ಸಿ ವಿಚಾರದಲ್ಲಿ ತಮ್ಮ ಹೆಸರು ಪ್ರಸ್ತಾಪಿಸಿದ್ದ ಸಚಿವ ಪ್ರಿಯಾಂಕ್ ಖರ್ಗೆ ಆರೋಪಕ್ಕೆ ತಿರುಗೇಟು ನೀಡಿದ ಎಚ್‌ಡಿಕೆ, ಸರ್ಕಾರ ಮಾಡಿರುವ ಅಕ್ರಮಗಳನ್ನು ಎತ್ತಿ ತೋರಿಸಲು ದಾಖಲೆಗಳನ್ನು ಇಟ್ಟುಕೊಂಡಿರುವುದಾಗಿ ತಿಳಿಸಿದರು. ಹಿಂದೆ ಕೆಪಿಎಸ್‌ಸಿ ಅಧ್ಯಕ್ಷರಾಗಿದ್ದವರನ್ನು 53 ದಿನಗಳ ಕಾಲ ಜೈಲಿಗೆ ಕಳುಹಿಸಿದರೂ, ಅವರ ವಿರುದ್ಧ ಸೂಕ್ತ ಸಾಕ್ಷ್ಯ ನೀಡಲು ಸರ್ಕಾರ ವಿಫಲವಾಗಿದೆ ಎಂದು ನ್ಯಾಯಾಲಯದ ತೀರ್ಪನ್ನು ಉಲ್ಲೇಖಿಸಿ ಲೇವಡಿ ಮಾಡಿದರು.

# ಸರ್ಕಾರ ಅಧಿಕಾರದಿಂದ ಇಳಿಯುವವರೆಗೂ ಹೋರಾಟ: ಬಿ.ಎಸ್.ಯಡಿಯೂರಪ್ಪ



**ರಾಯಚೂರು, ಸೆ.1:** ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ನಡೆಸುತ್ತಿರುವ 'ಬಳ್ಳಾರಿ ಚಲೋ' ಪಾದಯಾತ್ರೆ ಇದೀಗ ರಾಜಕೀಯ ವಾಕ್ಸಮರಕ್ಕೆ ವೇದಿಕೆಯಾಗಿದೆ. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ಸರ್ಕಾರ ಅಧಿಕಾರದಿಂದ ಕೆಳಗಿಳಿಯುವವರೆಗೂ ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದು ಹೇಳಿದ್ದಾರೆ. ರಾಯಚೂರಿನಿಂದ ಬಳ್ಳಾರಿಯವರೆಗೆ ಪಾದಯಾತ್ರೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ನೇತೃತ್ವದಲ್ಲಿ ನಡೆಯುತ್ತಿದೆ. ಕಾಂಗ್ರೆಸ್ ಸರ್ಕಾರದ ಹತ್ತು ಹಲವು ಹಗರಣಗಳ ವಿರುದ್ಧ ಈ ಬಳ್ಳಾರಿ ಚಲೋ ಯಾತ್ರೆ ಶುರುವಾಗಿದೆ. ನಾವು 2028ರ ಚುನಾವಣೆಗಾಗಿ ಈ ಹೋರಾಟ ಪ್ರಾರಂಭಿಸಿಲ್ಲ. ಈ ಸರ್ಕಾರ ದರೋಡೆ, ಭ್ರಷ್ಟಾಚಾರದಲ್ಲಿ ತೊಡಗಿದೆ. ಭ್ರಷ್ಟ ಸರ್ಕಾರದ ವಿರುದ್ಧ ಜನಾಭಿಪ್ರಾಯ ಸಂಗ್ರಹಿಸಲು ಈ ಹೋರಾಟ ಮಾಡ್ತಿದ್ದೇವೆ. ಮುಂದೆ ಬಿಜೆಪಿ-ಜೆಡಿಎಸ್ ನೇತೃತ್ವದಲ್ಲಿ ಪೂರ್ಣ ಬಹುಮತದೊಂದಿಗೆ ಅಧಿಕಾರಕ್ಕೆ ಬರುತ್ತೇವೆ ಅನ್ನುವ ವಿಶ್ವಾಸವಿದೆ ಎಂದರು. ಜನಾಕ್ರೋಶಕ್ಕೆ ಮಣಿದು ಬಿ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದಾರೆ. ಆದರೆ ಈ ಹೋರಾಟ ಇಲ್ಲಿಗೆ ನಿಲ್ಲುವುದಿಲ್ಲ, ಈ ಸರ್ಕಾರ ಅಧಿಕಾರ ಬಿಟ್ಟು ತೊಲಗುವವರೆಗೆ ಹೋರಾಟ ಮುಂದುವರಿಯುತ್ತದೆ. ಈ ಸರ್ಕಾರದಲ್ಲಿ ಭ್ರಷ್ಟಾಚಾರದಲ್ಲಿ ಭಾಗಿಯಾಗಿರೋದು ನಾಗೇಂದ್ರ ಒಬ್ಬರೇ ಅಲ್ಲ. ಇನ್ನು ಅನೇಕ ಭ್ರಷ್ಟ ಸಚಿವರ ಬಗ್ಗೆ ಗಂಭೀರ ಆರೋಪಗಳಿವೆ. ಸರ್ಕಾರದ ವಿರುದ್ಧ ಆರೋಪಗಳಿವೆ. ಅದರ ವಿರುದ್ಧ ಹೋರಾಟ ಮಾಡಲಾಗುತ್ತೆ ಎಂದರು.ಸಿಎಂ ಡಿಕೆ ಶಿವಕುಮಾರ್ ಬರ ಅಧ್ಯಾಯನ ಬಗ್ಗೆ ಇನ್ನಾದರೂ ಜ್ಞಾನೋದಯ ಆಗಿ ಮನವರಿಕೆ ಆದ್ರೆ ಸಂತೋಷದ ಸಂಗತಿ. ಮೊದಲಿಗೆ ಸಿಎಂ ಡಿಕೆಶಿ ದೆಹಲಿಗೆ ಹೋಗೋದನ್ನು ನಿಲ್ಲಿಸಿ ಅಭಿವೃದ್ಧಿ ಕಡೆ ಗಮನ ಕೊಡಲಿ ಎಂದು ಸಲಹೆ ನೀಡಿದರು.

# ಕೆಪಿಎಸ್‌ಸಿ ಪಶುವೈದ್ಯರ ನೇಮಕ ಅಕ್ರಮದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಪಾತ್ರ: ಅಶೋಕ್ ಆರೋಪ



ಹೊಸಪೇಟೆ, ಸೆ.1: ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಪಶುವೈದ್ಯಾಧಿಕಾರಿ ನೇಮಕಾತಿಗೆ ಸಂಬಂಧಿಸಿದಂತೆ ನಡೆದ ಅಕ್ರಮದ ರೂವಾರಿಗಳನ್ನು ಇ.ಡಿ. ದಾಳಿ ಮೂಲಕ ಬೇಟೆಯಾಡುತ್ತಿದೆ. ಈ ಅಕ್ರಮದಲ್ಲಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ಪಾತ್ರವಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ.

ಲಿಂಗಸೂರಿನಿಂದ ಬಿಜೆಪಿ ಪಾದಯಾತ್ರೆ ಆರಂಭಿಸಿದ ಬಳಿಕ ಹೊಸಪೇಟೆ, ಲಿಂಗಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧಾರವಾಡದ ಜೆನ್‌ಜೀ ಹೋರಾಟಕ್ಕೆ ಸಂಪೂರ್ಣ ಬೆಂಬಲ ನೀಡುತ್ತೇನೆ. ನಾನು ಕೂಡ ಅದರಲ್ಲಿ ಭಾಗವಹಿಸುತ್ತೇನೆ. ಈ ಹಿಂದೆಯೂ ಧಾರವಾಡದಲ್ಲಿ ಉದ್ಯೋಗಾಕಾಂಕ್ಷಿಗಳಿಂದ ಹೋರಾಟ ನಡೆದಾಗ ಅಲ್ಲಿಗೂ ಹೋಗಿ ಭಾಗವಹಿಸಿದ್ದೆ. ಕೆಪಿಎಸ್‌ಸಿಯಲ್ಲಿ ಅಕ್ರಮ ನಡೆಸಿದ ಎಲ್ಲರನ್ನೂ ಬಂಧಿಸಿ ಶಿಕ್ಷೆ ನೀಡಬೇಕು. ಈ ಬಗ್ಗೆ ಮುಂದಿನ ವಿಧಾನಸಭಾ ಅಧಿವೇಶನದಲ್ಲಿ ಚರ್ಚೆ ಮಾಡುತ್ತೇವೆ. ಇಡೀ ವ್ಯವಸ್ಥೆಯಲ್ಲಿ ಸುಧಾರಣೆ ತರಬೇಕಿದೆ ಎಂದು ಹೇಳಿದರು.

### ರಾಯರಡ್ಡಿಯಿಂದ ಧರ್ಮಕ್ಕೆ ಅಪಮಾನ

ಸಚಿವ ಬಸವರಾಜ ರಾಯರೆಡ್ಡಿ ಅವರಿಗೆ ಹಿಂದೂ ಧರ್ಮ ತಾಯಿ ಇದ್ದಂತೆ. ಅಂತಹ ತಾಯಿಗೆ ದ್ರೋಹ ಬಗೆದು ಇಸ್ಲಾಂ ಶ್ರೇಷ್ಠ ಎಂದಿದ್ದಾರೆ. ಚುನಾವಣೆಯಲ್ಲಿ ಲಿಂಗಾಯತ ಎಂದು ಹೇಳಿಕೊಂಡು ನಂತರ ಇಸ್ಲಾಂ ಧರ್ಮವನ್ನು ಹೊಗಳುತ್ತಿದ್ದಾರೆ. ಮಠಗಳಿಗೆ ಹೋಗಲ್ಲ ಎಂದು ಧರ್ಮಕ್ಕೆ ಅಪಮಾನ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷ ಅವರ ವಿರುದ್ಧ ಕ್ರಮ ಕೈಗೊಂಡು ಸಚಿವ ಸ್ಥಾನದಿಂದ ವಜಾ ಮಾಡಬೇಕು ಅಥವಾ ಹಿಂದೂ ವಿರೋಧಿ ಎಂದು ಒಪ್ಪಿಕೊಳ್ಳಬೇಕು. ಅವರನ್ನು ಯಾವುದೇ ಕಾರಣಕ್ಕೂ ಕ್ಷಮಿಸುವುದಿಲ್ಲ ಎಂದು ಆರ್.ಅಶೋಕ್ ಎಚ್ಚರಿಸಿದರು.

### ಸಿದ್ದರಾಮಯ್ಯ ಅವಧಿಯಲ್ಲಿ ದರೋಡೆ, ಈಗ ಪಿಕ್‌ಪಾಕೆಟ್

ಹೋದೆಯಾ ಪಿಶಾಚಿ ಎಂದರೆ ಬಂದೆಯಾ ಗವಾಕ್ಷೀಲಿ ಎಂದಂತೆ ಸಿದ್ದರಾಮಯ್ಯನವರ ಸರ್ಕಾರ ಹೋಗಿ ಡಿ. ಕೆ.ಶಿವಕುಮಾರ್ ಸರ್ಕಾರ ಬಂದಿದೆ. ಸಿದ್ದರಾಮಯ್ಯನವರ ಸರ್ಕಾರದಲ್ಲಿ ದರೋಡೆ ಮಾಡುತ್ತಿದ್ದರೆ, ಡಿಕೆಶಿ ಸರ್ಕಾರ ಪಿಕ್ ಪಾಕೆಟ್ ಮಾಡುತ್ತಿದೆ. ಹಾಲು, ಆಲ್ಕೋಹಾಲ್, ಯೂರಿಯಾ ಮೊದಲಾದವುಗಳ ಮೇಲೆ ತೆರಿಗೆ ಹಾಕಿ ಪಿಕ್ ಪಾಕೆಟ್ ಮಾಡಲಾಗುತ್ತಿದೆ. 175 ತಾಲೂಕುಗಳಲ್ಲಿ ಬರಗಾಲವಿದ್ದರೂ ಹಣವಿಲ್ಲದೆ 74 ತಾಲೂಕುಗಳಲ್ಲಿ ಬರ ಘೋಷಣೆ ಮಾಡಿಲ್ಲ. ಒಂದೋ ಘೋಷಣೆ ಮಾಡಬೇಕು, ಇಲ್ಲವಾದರೆ ಪಾಪರ್ ಆಗಿದ್ದೇವೆಂದು ಒಪ್ಪಿಕೊಳ್ಳಬೇಕು. ಸೂರ್ಯಕಾಂತಿ, ಜೋಳ, ತೊಗರಿ ಮೊದಲಾದ ಬೆಳೆಗಳು ಅರ್ಧ ಮಾತ್ರ ಬೆಳೆದು ಫಲಸು ನೀಡದೆ ಹಾಳಾಗಿವೆ. ಮಾನ-ಮರ್ಯಾದೆ ಇದ್ದಿದ್ದರೆ ಈಗಾಗಲೇ ರೈತರಿಗೆ ಪರಿಹಾರ ನೀಡಬೇಕಿತ್ತು ಎಂದು ಅಶೋಕ್ ಆಗ್ರಹಿಸಿದರು.

ಕಾಂಗ್ರೆಸ್ ಸರ್ಕಾರ ಈವರೆಗೂ ಒಂದು ರೂಪಾಯಿ ಪರಿಹಾರ ನೀಡಿಲ್ಲ. ಗ್ರಾಮಗಳಲ್ಲಿ ಜನರು ಇನ್ನೂ ಕುಡಿಯುವ ನೀರಿಗೆ ಪರದಾಡುತ್ತಿದ್ದಾರೆ. ಇದರ ನಡುವೆ ಸಿಎಂ ಡಿ. ಕೆ.ಶಿವಕುಮಾರ್ ಅಧ್ಯಯನ ಮಾಡಲು ಪ್ರವಾಸ ಮಾಡುತ್ತಿದ್ದಾರೆ. ಅಧಿಕಾರ ಕೈಯಲ್ಲಿ ಇರುವಾಗ ಅಧ್ಯಯನ ಏಕೆ ಮಾಡಬೇಕು? ಹೊಸ ಮುಖ್ಯಮಂತ್ರಿ ಮೂರು ತಿಂಗಳಾದರೂ ಒಂದೇ ಒಂದು ಉತ್ತಮ ಕೆಲಸ ಮಾಡಿಲ್ಲ. ನಮ್ಮ ಹೋರಾಟದಿಂದಾಗಿ ಬಿ.ನಾಗೇಂದ್ರಗೆ ಗೇಟ್‌ಪಾಸ್ ನೀಡಲಾಗಿದೆ. ಆದರೆ ಇಲ್ಲಿ ನಾಗೇಂದ್ರ ಕೇವಲ ಬಲಿಪಶು ಎಂದು ನುಡಿದರು.

# ಬಿಎಲ್‌ಓಗಳ ಅಸಹಕಾರಕ್ಕೆ ಗರಂ ಚುನಾವಣಾ ಆಯೋಗಕ್ಕೆ ಹರಿಪ್ರಸಾದ್ ದೂರು



ಬೆಂಗಳೂರು, ಸೆ.1: ಕೆಲವು ಪ್ರದೇಶಗಳಲ್ಲಿ ಬಿಎಲ್‌ಒ ಸಿಬ್ಬಂದಿ ಸಕ್ರಿಯವಾಗಿ ಸಹಕರಿಸುತ್ತಿದ್ದರೆ, ಮತ್ತೆ ಕೆಲವು ಕಡೆಗಳಲ್ಲಿ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂಬುದು ಗಮನಕ್ಕೆ ಬಂದಿದೆ. ಗೈರುಹಾಜರಾಗಿರುವ ಬಿಎಲ್‌ಓಗಳ ಕುರಿತು ಚುನಾವಣಾ ಅಧಿಕಾರಿಗಳು ಗಂಭೀರ ಕ್ರಮ ಕೈಗೊಳ್ಳಬೇಕಿದೆ. ಈ ಕುರಿತು ಶೀಘ್ರದಲ್ಲೇ ಚುನಾವಣಾ ಆಯೋಗವನ್ನು ಭೇಟಿ ಮಾಡಿ, ವಿವಿಧ ಕ್ಷೇತ್ರಗಳಲ್ಲಿ ಎದುರಾಗುತ್ತಿರುವ ಸಮಸ್ಯೆಗಳನ್ನು ಗಮನಕ್ಕೆ ತರಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ತಿಳಿಸಿದ್ದಾರೆ.

ಇತ್ತೀಚೆಗೆ ಬೀದರ್‌ಗೆ ತೆರಳಿದ್ದಾಗ ಕೆಲವು ಮೂಲ ಬೂತ್‌ಗಳ ಪ್ರತಿನಿಧಿಗಳನ್ನು ಸಭೆಗೆ ಆಹ್ವಾನಿಸಲಾಗಿತ್ತು. ಶಾಸಕರಿಲ್ಲದ ಕ್ಷೇತ್ರಗಳಲ್ಲಿ ಮತದಾರರಿಗೆ ಯಾವುದೇ ತೊಂದರೆಗಳಿದ್ದರೆ ತಿಳಿಸಲಿ ಎಂಬ ಉದ್ದೇಶದಿಂದ ಈ ಆಹ್ವಾನ ನೀಡಲಾಗಿತ್ತು. ಆದರೆ, ಕೆಲವು ಸಕ್ರಿಯ ಕಾರ್ಯಕರ್ತರು ಈ ಸಭೆಗೆ ಬಂದಿರಲಿಲ್ಲ. ಅವರು ನೀಡಿದ ಕೆಲ ಮಾಹಿತಿಗಳಲ್ಲಿ ನಿಜಾಂಶವಿದ್ದರೂ, ಪೂರ್ಣ ಪ್ರಮಾಣದ ಸಹಕಾರ ಸಿಕ್ಕಿರಲಿಲ್ಲ. ನಮ್ಮ ಮುಖ್ಯ ಉದ್ದೇಶ ಅರ್ಹ ಮತದಾರರ ಹಕ್ಕುಗಳನ್ನು ರಕ್ಷಿಸುವುದೇ ಹೊರತು ಬೇರೇನೂ ಅಲ್ಲ ಎಂದರು.

ಚುನಾವಣಾ ಆಯೋಗಕ್ಕೆ ನೋಟಿಸ್ ನೀಡಿ ಉತ್ತರ ನೀಡಲು ಇನ್ನೂ ದಿನಗಳ ಕಾಲಾವಕಾಶ ಬಾಕಿ ಇದೆ. ಮತದಾರರ ಪಟ್ಟಿ ಪರಿಶೀಲನೆಗೆ ಹೆಚ್ಚಿನ ಸಮಯ ನೀಡುವಂತೆ ಈಗಾಗಲೇ ಆಯೋಗಕ್ಕೆ ಮನವಿ ಮಾಡಲಾಗಿದೆ. ವಿಶೇಷವಾಗಿ ಗುಡ್ಡಗಾಡು ಹಾಗೂ ಗ್ರಾಮೀಣ ಪ್ರದೇಶದ ಜನರಿಗೆ ಮಾಹಿತಿ ತಲುಪಿಸಿ ಜಾಗೃತಿ ಮೂಡಿಸಲು ಅನುಕೂಲವಾಗುವಂತೆ, ಪ್ರತಿ ಶನಿವಾರ ಮತ್ತು ಭಾನುವಾರಗಳಂದೂ ಅವಕಾಶ ಕಲ್ಪಿಸಿಕೊಡಬೇಕೆಂದು ಕೋರಲಾಗಿದೆ.

# ರಾಹುಲ್ ವಿರುದ್ಧ ಎಫ್.ಐ.ಆರ್ ದಾಖಲಿಸಿ ಧ್ವನಿ ಅಡಗಿಸಲು ಸಾಧ್ಯವಿಲ್ಲ: ಡಾ.ಆನಂದಕುಮಾರ್

**ಬೆಂಗಳೂರು, ಸೆ.1:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬಾಷಣ ಮಾಡಿದ ಸ್ಥಳ ಶುದ್ಧೀಕರಣದ ಮೂಲಕ ನೇರವಾಗಿ ಅಸ್ಪೃಷ್ಯತೆ ಆಚರಣೆ ಮಾಡಿದ ವಿರುದ್ಧ ಧ್ವನಿ ಎತ್ತಿದ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಮೇಲೆ ಎಫ್.ಐ.ಆರ್ ದಾಖಲಿಸಿರುವುದು ಖಂಡನೀಯ. ಪೊಲೀಸ್ ಬಲದ ಮೂಲಕ ಪ್ರಜಾಪ್ರಭುತ್ವದ ಧ್ವನಿ ಅಡಗಿಸಲು ಸಾಧ್ಯವಿಲ್ಲ ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದಕುಮಾರ್ ಹೇಳಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಸಂಸತ್ತಿನ ಮೇಲ್ಮನೆ ಪ್ರತಿಪಕ್ಷ ನಾಯಕರು. ಅವರ ವಿರುದ್ಧ ಅಸ್ಪೃಷ್ಯತೆ ಧೋರಣೆ ಪ್ರದರ್ಶಿಸಿದ್ದರೆ, ಇದನ್ನು ಪ್ರಶ್ನಿಸಿದ ಕೆಳಮನೆ ವಿಪಕ್ಷ ರಾಹುಲ್ ಗಾಂಧಿ ವಿರುದ್ಧ ಎಫ್.ಐ.ಆರ್ ದಾಖಲಿಸಿರುವುದು ರಣಹೇಡಿತನದ ಕೃತ್ಯವಾಗಿದೆ. ಪರಮೋಚ್ಛ ವಿಪಕ್ಷ ನಾಯಕರ ಹಕ್ಕುಗಳಿಗೆ ಧಕ್ಕೆ ತರಲಾಗಿದೆ. ಈ ರಾಜಕೀಯ ಪ್ರೇರಿತ ಕ್ರಮದ ವಿರುದ್ಧ ದೇಶಾದ್ಯಂತ ಉಗ್ರ ಹೋರಾಟ ನಡೆಸುತ್ತಿದ್ದು, ಪ್ರತಿಯೊಬ್ಬ ಕಾಂಗ್ರೆಸ್ ಕಾರ್ಯಕರ್ತ ಧ್ವನಿ ಎತ್ತಬೇಕು. ಬಿಜೆಪಿ ನಾಯಕರ ಮನುವಾದಿ ಸಿದ್ಧಾಂತ, ಅಸ್ಪೃಷ್ಯತೆ ಧೋರಣೆಯ ಮುಖವಾಡ ಕಳಚಬೇಕು. ಮಾತಿನ ಸ್ವಾತಂತ್ರ್ಯ, ಸಾಮಾಜಿಕ ನ್ಯಾಯ ಮತ್ತು ವಿರೋಧ ಪಕ್ಷದ ಹಕ್ಕುಗಳ ವಿರುದ್ಧ ನಡೆಯುತ್ತಿರುವ ದೊಡ್ಡ ರಾಜಕೀಯ ಸಂಘರ್ಷದ ಹೊಸ ಅಧ್ಯಾಯ ಇದಾಗಿದೆ ಎಂದಿದ್ದಾರೆ. ಅಸ್ಪೃಶ್ಯತೆ ಮತ್ತು ಸಮಾನತೆಯ ಬಗ್ಗೆ ಮಾತನಾಡುವುದು ಅಪರಾಧವಾಗಿದೆ. ರಾಹುಲ್ ಗಾಂಧಿ ಹೇಳಿಕೆ ತಪ್ಪಿದ್ದರೆ?ತನಿಖೆ ನಡೆಸಬಹುದಿತ್ತು. ಹೇಳಿಕೆ ತಪ್ಪು ಎಂಬುದನ್ನು ಸಾಬೀತುಪಡಿಸುವ ಬದಲು ಎಫ್.ಐ.ಆರ್ ಹಾಕಿ ಅದನ್ನೇ ರಾಜಕೀಯ ಆಯುಧವನ್ನಾಗಿ ಬಳಸಲಾಗುತ್ತಿದೆ. ಉತ್ತರಾಖಂಡದ ಹಲ್ದ್ವಾನಿ ಶುದ್ಧೀಕರಣ ವಿವಾದಕ್ಕೆ ಸಂಬಂಧಿಸಿ ರಾಹುಲ್ ಗಾಂಧಿ ವಿರುದ್ಧ ಎಫ್.ಐ.ಆರ್ ದಾಖಲಿಸಿ ಪ್ರಜಾಪ್ರಭುತ್ವದ ಧ್ವನಿ ಅಡಗಿಸುವ ಹುನ್ನಾರ ಕಂಡು ಬಂದಿದ್ದು, ರಾಹುಲ್ ಬಗ್ಗೆ ಬಿಜೆಪಿಗೆ ಭಯ ಆವರಿಸಿದೆ ಎಂದು ಹೇಳಿದ್ದಾರೆ.

ಈ ಘಟನೆಯನ್ನು ಜಾತಿ ಆಧಾರಿತ ತಾರತಮ್ಯ ಮತ್ತು ಅಸ್ಪೃಶ್ಯತೆಯ ಮನೋಭಾವದೊಂದಿಗೆ ಜೋಡಿಸಿ, ಸಂಬಂಧಪಟ್ಟವರ ವಿರುದ್ಧ ಎಫ್.ಐ.ಆರ್ ದಾಖಲಿಸಬೇಕು ಎಂದು ರಾಹುಲ್ ಗಾಂಧಿ ಆಗ್ರಹಿಸಿದ್ದರು. ವಿರೋಧ ಪಕ್ಷದ ನಾಯಕನಿಗೆ ಪ್ರಶ್ನಿಸುವ ಹಕ್ಕು ಎಷ್ಟು ಉಳಿದಿದೆ ಎಂಬುದರ ನಿಜವಾದ ಅಗ್ನಿ ಪರೀಕ್ಷೆ ಇದಾಗಿದ್ದು, ಇದು ಪ್ರಜಾಪ್ರಭುತ್ವಕ್ಕೆ ಅಪಾಯಕಾರಿ ಸಂದೇಶ ನೀಡಿದಂತಾಗುತ್ತದೆ. ಪ್ರಜಾಪ್ರಭುತ್ವದಲ್ಲಿ ಅಧಿಕಾರದಲ್ಲಿರುವವರನ್ನು ಪ್ರಶ್ನಿಸುವುದು ಅಪರಾಧವಲ್ಲ. ಪ್ರಶ್ನೆಗೆ ಉತ್ತರಿಸುವ ಸಾಮರ್ಥ್ಯವೇ ನಿಜವಾದ ರಾಜಕೀಯ ಶಕ್ತಿ ಎಂದು ಡಾ. ಆನಂದ ಕುಮಾರ್ ಹೇಳಿದ್ದಾರೆ.

ಮತ್ತೊಂದೆಡೆ ಆರ್.ಎಸ್.ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಸೌಹಾರ್ದತೆ ಮೂಡಿಸುವ ಕುರಿತು ಆಡಿರುವ ಅಭಿಪ್ರಾಯಗಳಿಗೂ ಉತ್ತರ ಖಂಡ ಪೊಲೀಸರ ವರ್ತನೆಗಳಿಗೂ ಅಜಗಜಾಂತರ ವ್ಯತ್ಯಾಸಗಳಿವೆ. ಭಾಗವತ್ ಅಮೆರಿಕ ನೆಲದಲ್ಲಿ ಹೊಸ ಅವತಾರ ಎತ್ತಿದ್ದಾರೆ. ಆರ್.ಎಸ್.ಎಸ್. ವಿರುದ್ಧ ಅಮೆರಿಕದಾದ್ಯಂತ ತೀವ್ರ ವಿರೋಧ ವ್ಯಕ್ತವಾಗಿರುವ ಸಂದರ್ಭದಲ್ಲಿ ಸೌಹಾರ್ದದ ಪಾಠ ಮಾಡುತ್ತಿರುವುದು ಹಾಸ್ಯಾಸ್ಪದವಾಗಿದೆ. ಭಾಗವತ್ ಅವರ ಅಮೆರಿಕ ಪ್ರವಾಸವೇ ದೊಡ್ಡ ವಿವಾದದ ಕೇಂದ್ರವಾಗಿದೆ. ನ್ಯೂಯಾರ್ಕ್ ಸೇರಿ ಹಲವೆಡೆ ಅವರ ವಿರುದ್ಧ ಪ್ರತಿಭಟನೆಗಳು ನಡೆದಿವೆ. ಅಮೆರಿಕದ ಸಂಘಟನೆಗಳು ಆರ್.ಎಸ್.ಎಸ್ ಮತ್ತು ಭಾರತದಲ್ಲಿನ ಧಾರ್ಮಿಕ ಅಲ್ಪಸಂಖ್ಯಾತರ ಹಕ್ಕುಗಳ ಕುರಿತು ಗಂಭೀರ ಆರೋಪಗಳನ್ನು ಮುಂದಿಟ್ಟಿದೆ. ಭಾಗವತ್ ಅವರ ವೀಸಾ ರದ್ದುಪಡಿಸುವುದು ಸೇರಿದಂತೆ ಹಲವು ಕ್ರಮಗಳಿಗೆ ಶಿಫಾರಸು ಮಾಡಿದೆ. ಭಾರತದಲ್ಲಿ ಮುಸ್ಲಿಮರು ಇರಬಾರದು ಎಂದು ಬಯಸುವವನು ನಿಜವಾದ ಹಿಂದೂ ಅಲ್ಲ ಎಂಬ ಜ್ಞಾನೋದಯದ ಮಾತುಗಳನ್ನು ಹೇಳಿದ್ದಾರೆ. ದ್ವೇಷದ ಮನಸ್ಥಿತಿಯನ್ನು ಬಿತ್ತಿ ಇದೀಗ ಸೌಹಾರ್ದತೆಯ ಸೋಗು ಹಾಕುತ್ತಿರುವುದು ನಿಜಕ್ಕೂ ಖಂಡನೀಯ ಎಂದು ಡಾ. ಆನಂದ ಕುಮಾರ್ ಹೇಳಿದ್ದಾರೆ.

# ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ದಾನಿಗಳ ಕೊಡುಗೆ ಪ್ರಶಂಸಾರ್ಹ: ಸಂಸದ ಡಾ.ಸಿ.ಎನ್.ಮಂಜುನಾಥ್

**ಹಾರೋಹಳ್ಳಿ, ಸೆ.1:** ಸಿಎಸ್‌ಆರ್ ಅನುದಾನದಲ್ಲಿ ಹಾರೋಹಳ್ಳಿ ತಾಲೂಕಿನ ಹಲವು ಗ್ರಾಮಗಳ ಸರ್ಕಾರಿ ಶಾಲೆಯ 10 ಶಾಲಾ ಕೊಠಡಿಗಳನ್ನು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಜನಪ್ರಿಯ ಸಂಸದ ಡಾ. ಸಿ.ಎನ್. ಮಂಜುನಾಥ್ ಮಂಗಳವಾರ ಲೋಕಾರ್ಪಣೆಗೊಳಿಸಿದರು.

ನಂತರ ಮಾತನಾಡಿದ ಸಂಸದರು, ಶಾಲೆಗಳು, ಆಸ್ಪತ್ರೆಗಳು, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ರೈತರ ಕೃಷಿ ಚಟುವಟಿಕೆಗಳು ಸಮಾಜದ ಅಭಿವೃದ್ಧಿಗೆ ಅತ್ಯಂತ ಮುಖ್ಯವಾದವು. ಇಂತಹ ಮೂಲಭೂತ ಅಗತ್ಯಗಳಿಗೆ ನೆರವಾಗುವ ಕಾರ್ಯಗಳೇ ನಿಜವಾದ ಸಮಾಜ ಸೇವೆಯ ಪ್ರತೀಕ ಎಂದು ಡಾ. ಸಿ.ಎನ್. ಮಂಜುನಾಥ್ ಅಭಿಪ್ರಾಯಪಟ್ಟರು.

ಈ ಜಗತ್ತಿನಲ್ಲಿ ಶ್ರೀಮಂತರು ಅನೇಕ ಮಂದಿ ಇದ್ದರೂ, ತಮ್ಮ ಸಂಪತ್ತಿನ ಒಂದು ಭಾಗವನ್ನು ಸಮಾಜದ ಒಳಿತಿಗಾಗಿ ವಿನಿಯೋಗಿಸುವ ಉದಾರ ಮನಸ್ಸು ಕೆಲವೇ ಕೆಲವರಲ್ಲಿ ಮಾತ್ರ ಕಂಡುಬರುತ್ತದೆ. ದಿಲೀಪ್ ಸುರಾನಾ ಅಂತಹ ಅಪರೂಪದ ವ್ಯಕ್ತಿತ್ವದ ಪ್ರತೀಕ. ಮೈಕ್ರೋ ಲ್ಯಾಬ್ಸ್ ಸಂಸ್ಥೆಯ ಮೂಲಕ ಸಮಾಜಕ್ಕೆ ನೀಡುತ್ತಿರುವ ಕೊಡುಗೆ ಕೇವಲ ಆರ್ಥಿಕ ನೆರವಲ್ಲ; ಅದು ಸಮಾಜದ ಮೇಲಿನ ಜವಾಬ್ದಾರಿ ಹಾಗೂ ಮಾನವೀಯತೆಯ ಪ್ರತಿಬಿಂಬವಾಗಿದೆ ಎಂದು ಸಂಸದರು ದಿಲೀಪ್ ಸುರಾನಾ ಅವರ ಸಮಾಜಮುಖಿ ಸೇವೆಯನ್ನು ಹೃದಯಪೂರ್ವಕವಾಗಿ ಪ್ರಶಂಸಿಸಿದರು.

ಈ ಮಹತ್ವದ ಕಾರ್ಯಕ್ಕೆ ರೋಟರಿ ಬೆಂಗಳೂರು ಇಂದಿರಾನಗರ ಸಂಸ್ಥೆಯ ಸಹಕಾರವನ್ನೂ ಸಂಸದರು ವಿಶೇಷವಾಗಿ ಶ್ಲಾಘಿಸಿದರು. ಮೈಕ್ರೋ ಲ್ಯಾಬ್ಸ್ ಹಾಗೂ ರೋಟರಿ ಸಂಸ್ಥೆಯ ಜಂಟಿ ಸಹಕಾರ, ಸಮನ್ವಯ ಮತ್ತು ಸೇವಾ ಮನೋಭಾವದಿಂದ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಿಗೆ ಅಗತ್ಯವಿರುವ ಮೂಲಸೌಕರ್ಯ ಕಲ್ಪಿಸುವ ಕಾರ್ಯ ಸಾಕಾರಗೊಂಡಿರುವುದು ಅತ್ಯಂತ ಸಂತಸದ ವಿಚಾರ ಎಂದು ಅವರು ಹೇಳಿದರು.




ಮೈಕ್ರೋ ಲ್ಯಾಬ್ಸ್ ಸಂಸ್ಥೆಯ ಮಾಲೀಕ ದಿಲೀಪ್ ಸುರಾನಾ, ರಾಮನಗರ ಬಿಜೆಪಿ ಅಧ್ಯಕ್ಷ ಗೌತಮ್ ಗೌಡ, ರೋಟರಿ ಬೆಂಗಳೂರು ಇಂದಿರಾನಗರ ಅಧ್ಯಕ್ಷ ಎನ್. ಗೋಪಿನಾಥ್, ನಿಕಟಪೂರ್ವ ಅಧ್ಯಕ್ಷ ವಿಪಿನ್ ಲಬ್ರೂ, ಮಾಜಿ ಅಧ್ಯಕ್ಷ ಪಿಯೂಷ್ ಜೈನ್ ಹಾಗೂ ರೋಟೇರಿಯನ್ ಜಗದೀಶ್ ಎಂ., ರೋಟೇರಿಯನ್ ಸುಪ್ರಿಯಾ ಕಂಧಾರಿ ಹಾಗೂ ಕಾರ್ಯದರ್ಶಿ ರೋಟೇರಿಯನ್ ಕವಿತಾ ಕೆಕ್ರೆ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

### ಲೋಕಾರ್ಪಣೆಗೊಂಡ ಶಾಲಾ ಕೊಠಡಿಗಳು

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ದೊಡ್ಡಮರಳವಾಡಿ ಗ್ರಾಮ – 4 ಕೊಠಡಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಚಿಕ್ಕಕಲ್ಬಾಳು ಗ್ರಾಮ– 3 ಕೊಠಡಿ, ಸರ್ಕಾರಿ ಪ್ರೌಢ ಶಾಲೆ, ಕಗ್ಗಲಹಳ್ಳಿ ಗ್ರಾಮ– 3 ಕೊಠಡಿ ಲೋಕಾರ್ಪಣೆ.

# ಕಂಠೀರವ ಸ್ಟುಡಿಯೋಸ್ ಆವರಣದಲ್ಲಿ ಟಿ.ಎಸ್. ಕರಿಬಸಯ್ಯ ಪುತ್ತಳಿ ಅನಾವರಣಗೊಳಿಸಿದ ಅನುಚೇತ್



**ಬೆಂಗಳೂರು, ಸೆ.1:** ಬೆಂಗಳೂರಿನ ಕಂಠೀರವ ಸ್ಟುಡಿಯೋ ಸ್ಥಾಪನೆಯ ರೂವಾರಿ ತಿಪಟೂರಿನ ಟಿ.ಎಸ್ ಕರಿಬಸಯ್ಯ ಅವರ ಕೊಡುಗೆಯನ್ನು ಪರಿಗಣಿಸಿ ಸ್ಟುಡಿಯೋ ಆವರಣದಲ್ಲಿ ಸಿದ್ಧವಾಗಿರುವ ಟಿ.ಎಸ್ ಕರಿಬಸಯ್ಯ ಪುತ್ತಳಿಯನ್ನು ವಾರ್ತಾ ಮತ್ತು ಸಾರ್ವಜನಿಕ ಇಲಾಖೆ ಆಯುಕ್ತರಾದ ಅನುಚೇತ್ ಅನಾವರಣಗೊಳಿಸಿದರು.

ಕಂಠೀರವ ಸ್ಟುಡಿಯೋ ಸ್ಥಾಪನೆಯಾಗಿ 60 ವರ್ಷ ತುಂಬಿದೆ. ಜೊತೆಗೆ ಕರಿ ಬಸವಯ್ಯ ಅವರಿಗೆ 115 ವರ್ಷ ತುಂಬಿದ್ದು, ಅವರ ಜನ್ಮ ಶತಮಾನೋತ್ಸವನ್ನು ಸಹ ಆಚರಿಸಬೇಕು. ಕರಿಬಸಯ್ಯ ಕೊಡುಗೆ ಕನ್ನಡ ಚಿತ್ರರಂಗಕ್ಕೆ ಪರಿಚಯಿಸುವಂತಾಗಬೇಕು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಕಂಠೀರವ ಸ್ಟುಡಿಯೋ ವಜ್ರ ಮಹೋತ್ಸವ ಆಚರಿಸಬೇಕು. ಚಲನಚಿತ್ರ ವಾಣಿಜ್ಯ ಮಂಡಳಿ ಮತ್ತಿತರ ಅಂಗ ಸಂಸ್ಥೆಗಳು ಒಗ್ಗೂಡಿ ವಜ್ರ ಮಹೋತ್ಸವ ಆಚರಿಸಬೇಕು ಎಂಬ ಒತ್ತಾಯ ಕೇಳಿ ಬಂದಿದೆ. ಕನ್ನಡ ಚಿತ್ರ ರಂಗಕ್ಕೆ ಕರಿಬಸಯ್ಯ ಅಪಾರ ಕೊಡುಗೆ ನೀಡಿದ್ದಾರೆ. ಅಂತಹ ಮಹಾನ್ ವ್ಯಕ್ತಿಯ ಹೆಸರು ಇಂದು ಮರೆಯಾಗುತ್ತಿದ್ದು, ಅವರ ಜನ್ಮ ಶತಮಾನೋತ್ಸವ ಸಮಾರಂಭವನ್ನು ಸರಕಾರ ಹಾಗೂ ಕನ್ನಡ ಚಿತ್ರರಂಗ ಅದ್ದೂರಿಯಿಂದ ಆಚರಿಸಬೇಕು. ಕಲೆ, ಸಾಹಿತ್ಯ, ಸಂಸ್ಕೃತಿ, ಶಿಕ್ಷಣ, ಧಾರ್ಮಿಕ ಕ್ಷೇತ್ರಗಳಲ್ಲಿ ಅಪಾರ ಹೆಸರು ಗಳಿಸಿದೆ. ಅಂತಯೇ ರಂಗ ಭೂಮಿ ಹಾಗೂ ಚಿತ್ರರಂಗಕ್ಕೆ ನಗರದ ಟಿ.ಎಸ್.ಕರಿಬಸಯ್ಯ ಕೊಡುಗೆ ಅಪಾರವಾಗಿದೆ. ಕನ್ನಡ ಚಿತ್ರರಂಗ ಆರಂಭವಾದ ದಿನದಿಂದಲೂ 1966ರವರೆಗೆ ಕನ್ನಡ ಚಿತ್ರರಂಗದ ಸಿನಿಮಾಗಳ ಚಿತ್ರಿಕರಣಕ್ಕೆ ಮದರಾಸಿಗೆ ತೆರಳಬೇಕಿತ್ತು, ಆ ದಿನಗಳಲ್ಲಿ ನಮ್ಮ ರಾಜ್ಯದಲ್ಲಿ ಸುಸಜ್ಜಿತ ಸ್ಟುಡಿಯೋಗಳು ಇರಲಿಲ್ಲ. ಇಂತಹ ಸ್ಥಿತಿಯನ್ನು ಮನಗಂಡ ಕಲಾರಾಧಕ ಟಿ.ಎಸ್ ಕರಿಬಸಯ್ಯ ಅವರು ಗುಬ್ಬಿವೀರಣ್ಣನವರ ಜತೆಗೂಡಿ 1966 ರಲ್ಲಿ ಬೆಂಗಳೂರಿನಲ್ಲಿ ಕಂಠೀರವ ಸ್ಟುಡಿಯೊ ಸ್ಥಾಪಿಸಿ ಚಿತ್ರರಂಗದ ಅನೇಕ ಕಲಾವಿದರಿಗೆ ನಿರ್ದೇಶಕರಿಗೆ, ನಿರ್ಮಾಪಕರಿಗೆ, ಆಶ್ರಯದಾತರಾಗಿದ್ದರು ಎಂದರು.

ರಂಗಭೂಮಿ ಹಾಗೂ ಚಿತ್ರರಂಗದ ಏಳಿಗಾಗಿ ತಮ್ಮ ಜೀವನವನ್ನೇ ಮುಡಪಾಗಿಟ್ಟದ್ದರು. ಸ್ಟುಡಿಯೋ ಸರಕಾರದ ಸುಪರ್ದಿಗೆ ತೆಗೆದು ಕೊಂಡು ಹಲವು ವರ್ಷಗಳೇ ಕಳೆದಿದ್ದರೂ ಈವರೆಗೆ ಸರಕಾರವು ಕನಿಷ್ಠ ಟಿ.ಎಸ್.ಕರಿಬಸಯ್ಯ ಅವರ ಸ್ಮರಣೆ ಕಾರ್ಯಕ್ರಮ ಆಚರಿಸಿಲ್ಲ ಎಂದು ಅವರ ಅಭಿಮಾನಿಗಳು ಆಗ್ರಹಿಸಿದ್ದರು. ಪುತ್ಥಳಿಯನ್ನು ಅನಾವರಣಗೊಳಿಸಬೇಕು ಎಂದು ಕಲಾ ಕಂಠೀರವ ದಿ. ಟಿ.ಎಸ್. ಕರಿಬಸಯ್ಯ ಸೇವಾ ಟ್ರಸ್ಟ್ ಅಧ್ಯಕ್ಷ ಗಂಡಸಿ ಸದಾನಂದಸ್ವಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಗೆ ಮನವಿ ಸಲ್ಲಿಸಿದ್ದರು. ಮಂಡಳಿ ಪ್ರಧಾನ ಕಾರ್ಯದರ್ಶಿ ಸುಂದರ್ ರಾಜ್, ಕಾರ್ಯದರ್ಶಿ ಗಣೇಶ್ ಅವರಿಗೆ ಪೋಷಕ ಕಲಾವಿದರ ಸಂಘದ ಅಧ್ಯಕ್ಷ ಡಿಂಗ್ರಿ ನಾಗರಾಜ್ ನೇತೃತ್ವದಲ್ಲಿ ಮನವಿ ಸಲ್ಲಿಸಿದ್ದರು. ಪುತ್ಥಳಿ ಅನಾವರಣ ಸಂದರ್ಭದಲ್ಲಿ ಕಂಠೀರವ ಸ್ಟುಡಿಯೋ ಅಧ್ಯಕ್ಷ ಮೆಹಬೂಬ್ ಪಾಷ, ಟ್ರಸ್ಟ್ ಉಪಾಧ್ಯಕ್ಷ ತಿಪಟೂರು ದಯಾನಂದ್ ಸಾಗರ್ ಮತ್ತು ಕರಿಬಸವಯ್ಯ ಕುಟುಂಬ ಸದಸ್ಯರು ಹಾಜರಿದ್ದರು.

# ಭಾರತದ ಶೇ.7.8 ಆರ್ಥಿಕ ಪ್ರಗತಿ: ಬಿಜೆಪಿ ಪ್ರಶಂಸೆ

**ಬೆಂಗಳೂರು, ಸೆ.1:** ಜಾಗತಿಕ ಮಟ್ಟದಲ್ಲಿ ಯುದ್ಧದ ವಾತಾವರಣ, ಕೋವಿಡ್ ನಂತರದ ಪೂರೈಕೆ ಸರಣಿಯ ವ್ಯತ್ಯಯ ಹಾಗೂ ಜಾಗತಿಕ ಆರ್ಥಿಕ ಸಂಕಟಗಳಿದ್ದರೂ, ಭಾರತವು 7.8% ಆರ್ಥಿಕ ಅಭಿವೃದ್ಧಿ ಸಾಧಿಸಿರುವುದು ನಮ್ಮ ದೇಶದ ದೃಢವಾದ ಆರ್ಥಿಕತೆಗೆ ಸಾಕ್ಷಿಯಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದರ್ಶಿ ಹಾಗೂ ರಾಜತಾಂತ್ರಿಕ ಸಮರ್ಥ ನಾಯಕತ್ವದಿಂದ ಮಾತ್ರವೇ ಇಂತಹ ಐತಿಹಾಸಿಕ ಸಾಧನೆ ಸಾಧ್ಯವಾಗಿದೆ ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ಎನ್. ರವಿಕುಮಾರ್ ಹೇಳಿದ್ದಾರೆ.

ದೇಶ ಜಾಗತಿಕವಾಗಿ ಮುನ್ನಡೆಯುತ್ತಿರುವ ಈ ಸಂದರ್ಭದಲ್ಲಿ, ವಿರೋಧ ಪಕ್ಷವಾದ ಕಾಂಗ್ರೆಸ್ ದೇಶದ ಪ್ರಗತಿಯನ್ನು ಸಹಿಸಲಾಗದೆ ಸಮಾಜಘಾತಕ ಹಾಗೂ ನಕಾರಾತ್ಮಕ ಶಕ್ತಿಗಳೊಂದಿಗೆ ಕೈಜೋಡಿಸಿ ಜನರಲ್ಲಿ ಭ್ರಮೆ ಮೂಡಿಸಲು ಯತ್ನಿಸುತ್ತಿರುವುದು ಅತ್ಯಂತ ಖಂಡನೀಯ. ದೇಶದ ಸಾಧನೆಯನ್ನು ಸಂಭ್ರಮಿಸುವ ಬದಲು, ಸದಾ ದೇಶವಿರೋಧಿ ನಿಲುವು ತಳೆಯುವುದು ಕಾಂಗ್ರೆಸ್‌ನ ಹಳೆಯ ಅಭ್ಯಾಸವಾಗಿದೆ ಎಂದು ಅವರು ಕಿಡಿಕಾರಿದ್ದಾರೆ.

ಪ್ರಧಾನಿ ಅವರ ಪಂಚ ತತ್ವಗಳನ್ನು ಪ್ರತಿಯೊಬ್ಬ ನಾಗರಿಕನೂ ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ನಮ್ಮ ನೆಲದ ಉತ್ಪಾದನೆ ಮತ್ತು ಸೇವೆಗಳಿಗೆ ಆದ್ಯತೆ ನೀಡುವ ಮೂಲಕ ಭಾರತೀಯ ಆರ್ಥಿಕತೆಯನ್ನು ಮತ್ತಷ್ಟು ಬಲಪಡಿಸಬೇಕು ಎಂದು ರವಿಕುಮಾರ್ ಮನವಿ ಮಾಡಿದ್ದಾರೆ.

ದೇಶದ ಹಣ ದೇಶದಲ್ಲೇ ಉಳಿದು, ಆರ್ಥಿಕ ಸ್ಥಿರತೆ ಮತ್ತಷ್ಟು ಹೆಚ್ಚಾಗಲು ಅನಗತ್ಯವಾಗಿ ವಿದೇಶಿ ಬಂಗಾರ ಖರೀದಿ ಮಾಡುವುದು, ಅನಗತ್ಯ ವಿದೇಶಿ ಪ್ರವಾಸ ಕೈಗೊಳ್ಳುವುದು ಹಾಗೂ ವಿದೇಶಗಳಲ್ಲಿ ಕೋಟ್ಯಂತರ ರೂಪಾಯಿ ವೆಚ್ಚಮಾಡಿ ಮದುವೆ ಮಾಡಿಕೊಳ್ಳುವುದನ್ನು ತಡೆಯಬೇಕು ಎಂಬ ಪ್ರಧಾನಿಯವರ ಕರೆಯನ್ನು ಪ್ರತಿಯೊಬ್ಬ ಭಾರತೀಯನೂ ಬೆಂಬಲಿಸಬೇಕು. ದೇಶದ ಬಂಡವಾಳ ದೇಶದ ಅಭಿವೃದ್ಧಿಗೇ ಬಳಕೆಯಾಗಬೇಕಿದೆ. "ದೇಶವೇ ಮೊದಲು" ಎಂಬ ಭಾವನೆಯೊಂದಿಗೆ ದೇಶದ ಪ್ರತಿಯೊಬ್ಬ ನಾಗರಿಕನೂ ನವಭಾರತದ ನಿರ್ಮಾಣದಲ್ಲಿ ಭಾಗಿಗಳಾಗಬೇಕೆಂದು ಎನ್. ರವಿಕುಮಾರ್ ಅವರು ವಿನಂತಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಪಾರ್ಕ್ ಜಾಗದ ಶೇ.5 ಬಳಕೆ ಪ್ರಸ್ತಾವನೆ ವಿವರಗಳ ಪರಿಶೀಲನೆ

## ಅನ್ಯ ಉದ್ದೇಶಕ್ಕೆ ಲಾಲ್‌ಬಾಗ್ ಜಾಗ ನೀಡಿಕೆ ಬಗ್ಗೆಯೂ ಪರಾಮರ್ಶೆ: ಸಿಎಂ ಡಿ.ಕೆ. ಶಿವಕುಮಾರ್



**ಬೆಂಗಳೂರು, ಸೆ.1:** ಉದ್ಯಾನಗಳಲ್ಲಿ ಶೇ.5ರಷ್ಟು ಜಾಗ ನೀಡುವ ಈ ಪ್ರಸ್ತಾವನೆ ಏಕೆ ಬಂತು, ಹಿಂದಿನವರು ಏನು ಮಾಡಿದ್ದಾರೆ, ಯಾವ ಜಾಗವನ್ನು ಯಾರಿಗೆ ನೀಡಿದ್ದಾರೆ ಎಂಬುದನ್ನು ಪರಿಶೀಲಿಸುತ್ತೇನೆ. ಕಡತ ತರಿಸಿಕೊಂಡು ವಿಧಾನಸಭೆಯಲ್ಲಿ ಮತ್ತೆ ಚರ್ಚಿಸಬಹುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಅವರು ಮಂಗಳವಾರ ಸದಾಶಿವನಗರದ ನಿವಾಸದ ಬಳಿ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದರು. ಲಾಲ್ಬಾಗ್ ನಲ್ಲಿ ಮೆಟ್ರೋಗೆ ಜಾಗ ನೀಡಿರುವುದು ಸೇರಿದಂತೆ ಬೆಂಗಳೂರಿನ ವಿವಿಧೆಡೆ ಜಾಗ ನೀಡಿರುವ ವಿಚಾರಗಳನ್ನೂ ಪರಿಶೀಲಿಸಬೇಕಿದೆ ಎಂದು ಹೇಳಿದರು. ಬೆಂಗಳೂರಿನ ಉದ್ಯಾನಗಳ ಜಾಗಕ್ಕೆ ಸಂಬಂಧಿಸಿದಂತೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಯಾರೂ ಆತಂಕಪಡುವ ಅಗತ್ಯವಿಲ್ಲ. ಪಾರ್ಕ್ ಜಾಗವನ್ನು ಹೇಗೆ ರಕ್ಷಿಸಬೇಕು ಎಂಬುದು ನನಗೆ ಗೊತ್ತಿದೆ ಎಂದರು. ಲಾಲ್‌ಬಾಗ್ ಸೇರಿದಂತೆ ಉದ್ಯಾನಗಳ ಜಾಗದ ಕುರಿತು ಹಿಂದಿನ ಬಿಜೆಪಿ ಸರಕಾರದ ಅವಧಿಯಲ್ಲಿ ಏನೇನು ಕ್ರಮ ಕೈಗೊಳ್ಳಲಾಗಿದೆ ಎಂಬ ಸಂಪೂರ್ಣ ಮಾಹಿತಿಯನ್ನು ಪಡೆದು ಪರಿಶೀಲಿಸುವುದಾಗಿ ಹೇಳಿದರು. ಈ ವಿಚಾರವನ್ನು ವಿಧಾನಸಭೆಯಲ್ಲಿ ಮತ್ತೊಮ್ಮೆ ಚರ್ಚಿಸಲು ಅವಕಾಶ ಕಲ್ಪಿಸುವುದಾಗಿಯೂ ತಿಳಿಸಿದರು.

**ಸಾರ್ವಜನಿಕ ಹಿತದೃಷ್ಟಿಯಿಂದ ನಿರ್ಧಾರ:** ಪ್ರತಿಪಕ್ಷದ ಸಲಹೆಗಳಿಗೆ ನಾನು ಮುಕ್ತವಾಗಿದ್ದೇನೆ. ಸಾರ್ವಜನಿಕರ ಸಲಹೆಗಳನ್ನೂ ಪರಿಗಣಿಸುತ್ತೇನೆ. ಯಾವುದೇ ಗೊಂದಲ ಸೃಷ್ಟಿಸುವುದು ನನ್ನ ಉದ್ದೇಶವಲ್ಲ. ಸಾರ್ವಜನಿಕರ ದೊಡ್ಡ ಹಿತದೃಷ್ಟಿಯಿಂದಲೇ ನಿರ್ಧಾರ ಕೈಗೊಳ್ಳಲಾಗುವುದು? ಎಂದು ಸ್ಪಷ್ಟಪಡಿಸಿದರು.

### ರಾಹುಲ್ ವಿರುದ್ಧ ಎಫ್‌ಐಆರ್‌ಗೆ ಖಂಡನೆ

**ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಇದನ್ನು ರಾಜಕೀಯ ಪ್ರೇರಿತ ಕ್ರಮ ಎಂದು ಎಂದು ಹೇಳಿದರು. ರಾಹುಲ್ ಗಾಂಧಿ ಅವರು ತಪ್ಪೇನು ಮಾಡಿದ್ದಾರೆ? ಯುವಜನತೆ ಮತ್ತು ದೇಶಕ್ಕಾಗಿ ಹೋರಾಡುವುದು ಅವರ ಹಕ್ಕು. ಅದು ಸಂವಿಧಾನ ನೀಡಿರುವ ಹಕ್ಕು. ಅವರು ಹೋರಾಡುತ್ತಿರುವ ವಿಚಾರದಲ್ಲಿ ನಾವೆಲ್ಲರೂ ಅವರೊಂದಿಗೆ ಇದ್ದೇವೆ ಎಂದು ಹೇಳಿದರು.**

## ರಾಜೀನಾಮೆ ನೀಡುವಂತೆ ವಿವಿಧ ನಿಗಮ–ಮಂಡಳಿ ಅಧ್ಯಕ್ಷ–ಉಪಾಧ್ಯಕ್ಷರಿಗೆ ಮುಖ್ಯಮಂತ್ರಿ ಸೂಚನೆ

**ಬೆಂಗಳೂರು, ಸೆ.1:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸರ್ಕಾರದ ಸಚಿವ ಸಂಪುಟ ಸರ್ಕಸ್ ಇನ್ನೂ ಮುಗಿದಿಲ್ಲ! ಇದರ ನಡುವೆಯೇ, ಕಾಂಗ್ರೆಸ್ ಪಕ್ಷದಲ್ಲಿ ಮತ್ತೊಂದು ಸುತ್ತಿನ ಸರ್ಕಸ್ ಪ್ರಾರಂಭವಾಗುವ ಮುನ್ಸೂಚನೆ ಸಿಕ್ಕಿದೆ. ವಿವಿಧ ಸರ್ಕಾರಿ ನಿಗಮ–ಮಂಡಳಿಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆಗಳಲ್ಲಿರುವ ಶಾಸಕರು ಹಾಗೂ ಮುಖಂಡರಿಗೆ ತಕ್ಷಣವೇ ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡುವಂತೆ ಸಿಎಂ ಡಿ.ಕೆ. ಶಿವಕುಮಾರ್ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ ಎನ್ನಲಾಗಿದೆ.

ಇತ್ತೀಚಿನ ಸಚಿವ ಸಂಪುಟ ವಿಸ್ತರಣೆಯ ಸಂದರ್ಭದಲ್ಲಿ ಸಚಿವ ಸ್ಥಾನ ಸಿಗದೆ ವಂಚಿತರಾದ ಮತ್ತು ಅಸಮಾಧಾನಗೊಂಡಿರುವ 8ಕ್ಕೂ ಹೆಚ್ಚು ಪ್ರಮುಖ ಶಾಸಕರಿಗೆ ಹಾಗೂ ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಗೆ ಈ ನಿಗಮ–ಮಂಡಳಿಗಳಲ್ಲಿ ಸೂಕ್ತ ಸ್ಥಾನಮಾನ ನೀಡಿ ಸಮಾಧಾನಪಡಿಸುವುದು ಉದ್ದೇಶ ದೊಂದಿಗೆ, ಈಗಾಗಲೇ ನಿಗಮ–ಮಂಡಳಿಗಳಲ್ಲಿ ಎರಡೂವರೆ ವರ್ಷಕ್ಕೂ ಹೆಚ್ಚು ಅವಧಿ ಪೂರೈಸಿರುವ ಶಾಸಕರು ಮತ್ತು ನಾಯಕರನ್ನು ಹುದ್ದೆಯಿಂದ ಕೆಳಗಿಳಿಸಿ, ಸರ್ಕಾರದ ಉಳಿದ ಅವಧಿಗೆ ಹೊಸಬರನ್ನು ನೇಮಕ ಮಾಡಲು ಮುಂದಾಗಿದ್ದಾರೆ ಎನ್ನಲಾಗಿದೆ.

ಇದಕ್ಕೂ ಮುನ್ನ ಸಚಿವ ಸ್ಥಾನದಿಂದ ವಂಚಿತರಾದ ಹಾಗೂ ನಿಗಮ ಮಂಡಳಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದ ಹಿರಿಯ ಶಾಸಕರ ತಂಡ ಇತ್ತೀಚೆಗೆ ದೆಹಲಿಗೆ ಭೇಟಿ ನೀಡಿತ್ತು. ರಾಜ್ಯ ಕಾಂಗ್ರೆಸ್ ಉಸ್ತುವಾರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರನ್ನು ಭೇಟಿಮಾಡಿ, ಹಳೆಯ ಪದಾಧಿಕಾರಿಗಳನ್ನು ಬದಲಿಸಿ ಹೊಸಬರಿಗೆ ಜವಾಬ್ದಾರಿ ನೀಡುವಂತೆ ಮನವಿ ಸಲ್ಲಿಸಿದ್ದರು.

ಈ ಬೆಳವಣಿಗೆಯ ಬೆನ್ನಲ್ಲೇ ಸರ್ಕಾರದ ಕಡೆಯಿಂದ ಈ ಕಠಿಣ ಆದೇಶ ಹೊರಬಿದ್ದಿದೆ. ಅದರಂತೆ, 35ಕ್ಕೂ ಹೆಚ್ಚು ಶಾಸಕರು ಈಗಾಗಲೇ ನಿಗದಿತ ಅವಧಿ ಪೂರೈಸಿದ್ದು, ಅವರೆಲ್ಲರೂ ಹುದ್ದೆ ತ್ಯಜಿಸುವುದು ಅನಿವಾರ್ಯ ವಾಗಿದೆ. ಮುಂದುವರೆದು, ಈ ಬದಲಾವಣೆ ಬಗ್ಗೆ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಸೂಚನೆ ನೀಡಿರುವ ಸಿಎಂ, ಎಲ್ಲ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು ತಮ್ಮ ಇಲಾಖಾ ವ್ಯಾಪ್ತಿಯ ನಿಗಮ ಮತ್ತು ಮಂಡಳಿಗಳ ಪದಾಧಿಕಾರಿಗಳಿಂದ ರಾಜೀನಾಮೆ ಪತ್ರಗಳನ್ನು ಪಡೆದುಕೊಳ್ಳುವ ಪ್ರಕ್ರಿಯೆ ಆರಂಭಿಸುವಂತೆ ತಿಳಿಸಿದ್ದಾರೆ.

# 3 ತಿಂಗಳವರೆಗೆ ಯಾವುದೇ ಬಿಪಿಎಲ್ ಕಾರ್ಡ್ ರದ್ದುಮಾಡಲ್ಲ



- ಅಧಿಕಾರಿಗಳಿಗೆ ಸಚಿವ ರಿಜ್ವಾನ್ ಅರ್ಷದ್ ಸೂಚನೆ
- ಆರ್ಥಿಕ ವ್ಯವಸ್ಥೆಗೆ ತಕ್ಕಂತೆ ಮಾನದಂಡ ಬದಲಿಸುವುದು ಅಗತ್ಯ

**ಬೆಂಗಳೂರು, ಸೆ.1:** ಸದ್ಯಕ್ಕೆ ಯಾವುದೇ ಬಿಪಿಎಲ್ ಎಪಿಎಲ್ ಕಾರ್ಡ್ ರದ್ದು ಮಾಡಲ್ಲ. ಮೂರು ತಿಂಗಳು ಯಾವುದೇ ಕಾರ್ಡ್ ರದ್ದು ಮಾಡದಂತೆ ಸೂಚನೆ ನೀಡಿದ್ದೇನೆ ಎಂದು ಆಹಾರ ಸಚಿವ ರಿಜ್ವಾನ್ ಅರ್ಷದ ಹೇಳಿದ್ದಾರೆ.

ಮೈಸೂರಿನಲ್ಲಿ ಮಾತನಾಡಿದ ಅವರು, ಬಿಪಿಎಲ್‌ನಲ್ಲಿ ಅನರ್ಹರು ಇದ್ದಾರೆ ಎಂಬುದು ಗೊತ್ತಿದೆ. ಬಿಪಿಎಲ್ ಮಾನದಂಡ ಇಂದಿನ ಆರ್ಥಿಕ ವ್ಯವಸ್ಥೆಗೆ ಸರಿ ಹೋಗುತ್ತಿಲ್ಲ. ಮಾನದಂಡಗಳನ್ನು ಬದಲಿಸ ಬೇಕಿದೆ. ಬಹಳಷ್ಟು ಅರ್ಹರು ಬಿಪಿಎಲ್ ಕಾರ್ಡ್‌ನಿಂದ ಹೊರಗೆ ಉಳಿದಿದ್ದಾರೆ. ಅರ್ಹರನ್ನು ಬಿಪಿಎಲ್ ಕಾರ್ಡ್ ವ್ಯಾಪ್ತಿಗೆ ಸೇರಿಸಬೇಕಿದೆ. ಏಕಾಏಕಿ ಡಿಲೀಟ್ ಮಾಡಿದರೆ ಬಡವರಿಗೆ ಅನ್ಯಾಯವಾಗುತ್ತದೆ ಎಂದರು.

ಬಸವರಾಜ ರಾಯರೆಡ್ಡಿ ಹೇಳಿಕೆ ವಿಚಾರಕ್ಕೆ ಸಂಬಂಧಪಟ್ಟಂತೆ ಪ್ರತಿಕ್ರಿಯಿಸಿದ ಸಚಿವರು, ರಾಯರೆಡ್ಡಿ ಮುಸ್ಲಿಂ ಧರ್ಮದ ಬಗ್ಗೆ ಪ್ರೀತಿಯಿಂದ ಮಾತನಾಡಿದ್ದಾರೆ. ಅದರಲ್ಲಿ ತಪ್ಪು ಯಾಕೆ ಹುಡುಕಬೇಕು. ಅವರು ಬೇರೆ ಯಾವುದೇ ಧರ್ಮವನ್ನು ಟೀಕಿಸಿಲ್ಲ. ನಾಳೆ ನಾನು ಕೂಡ ಮೈಸೂರಿನ ಚಾಮುಂಡಿಬೆಟ್ಟಕ್ಕೆ ಹೋಗುತ್ತೇನೆ ದೇವರಲ್ಲಿ ಪ್ರಾರ್ಥನೆ ಮಾಡುತ್ತೇನೆ ಅದು ತಪ್ಪೇ? ರಾಯರೆಡ್ಡಿ ಮುಸ್ಲಿಂ ಧರ್ಮ ಮಾತ್ರ ಶ್ರೇಷ್ಠ ಎಂದು ಹೇಳಿಲ್ಲ ಬಿಜೆಪಿಗೆ ಯಾವಾಗಲೂ ಹಿಂದೂ ಮುಸ್ಲಿಂ ವಿಚಾರ ಬೇಕು ಹಿಂದೂ–ಮುಸ್ಲಿಂ ಕಾರ್ಯಸೂಚಿ ಮಾತ್ರ ಬಿಜೆಪಿಯ ರಾಜಕೀಯ ವಿಷಯವಾಗಿದೆ. ಬಿಜೆಪಿಯ ಒಬ್ಬನೇ ಒಬ್ಬ ಕೂಡ ಬರದ ಬಗ್ಗೆ ಮಾತನಾಡಿಲ್ಲ ಎಂದು ರಿಜ್ವಾನ ಆರ್ಷದ್ ಹೇಳಿದ್ದಾರೆ.

# ಸಿಐಡಿ ಎದುರು ಐಎಎಸ್ ಅಧಿಕಾರಿ ಜ್ಞಾನೇಂದ್ರಕುಮಾರ್ ತಪ್ಪೊಪ್ಪಿಗೆ



- ಕೆಪಿಎಸ್‌ಸಿ ನೇಮಕಾತಿ, ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ: ಪೇಪರ್ ಲೀಕ್ ಡೀಲ್ ಮಾಡಿದ್ದೇ ಬಸವರಾಜ್ ಕನ್ನಾಳೆ

**ಬೆಂಗಳೂರು, ಸೆ.1:** ರಾಜ್ಯದಲ್ಲಿ ಸಂಚಲನ ಮೂಡಿಸಿರುವ ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನೇಮಕಾತಿ ಅಕ್ರಮ ಹಾಗೂ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧ ಸಿಐಡಿ ಅಧಿಕಾರಿಗಳ ಮುಂದೆ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ತಪ್ಪೊಪ್ಪಿಗೆ ಹೇಳಿಕೆ ನೀಡಿದ್ದಾರೆ. ವಿಚಾರಣೆ ವೇಳೆ ತಮ್ಮ ಮೇಲಿದ್ದ ಆರೋಪಗಳ ಕುರಿತು ಸ್ಪಷ್ಟನೆ ನೀಡಿರುವ ಅಧಿಕಾರಿ, ಈ ಹಗರಣದಲ್ಲಿ ತಮ್ಮ ನೇರ ತಪ್ಪೇನೂ ಇಲ್ಲ. ಎಲ್ಲಾ ಅಕ್ರಮಗಳಿಗೂ ಮಧ್ಯವರ್ತಿ ಬಸವರಾಜ್ ಕನ್ನಾಳೆಯೇ ಮುಖ್ಯ ರೂವಾರಿ ಎಂದು ಬೊಟ್ಟು ಮಾಡಿದ್ದಾರೆ. ನಾನು ಯಾವುದೇ ಅಭ್ಯರ್ಥಿಗಳ ಜೊತೆ ನೇರವಾಗಿ ಮಾತನಾಡಿಲ್ಲ. ಅಭ್ಯರ್ಥಿಗಳೊಂದಿಗೆ ಹಣಕಾಸಿನ ವ್ಯವಹಾರ ಹಾಗೂ ಮಾತುಕತೆ ನಡೆಸಿದ್ದೆಲ್ಲವೂ ಬಸವರಾಜ್ ಕನ್ನಾಳೆಯೇ. ಆತನ ಸೂಚನೆಯಂತೆ ಕೆಲಸ ಮಾಡಿದ್ದೇನೆ ಅಷ್ಟೇ ಎಂದು ಒಪ್ಪಿಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸಿಐಡಿ ಅಧಿಕಾರಿಗಳ ಮುಂದೆ ಐಎಎಸ್ ಅಧಿಕಾರಿ ಜ್ಞಾನೇಂದ್ರ, ಪ್ರಶ್ನೆಪತ್ರಿಕೆ ಸೋರಿಕೆ ವ್ಯವಹಾರ ಮಾಡಿದ್ದೇ ಬಸವರಾಜ್ ಕನ್ನಾಳೆ ಎಂದು ಸ್ಪಷ್ಟಪಡಿಸಿದ್ದಾರೆ.ಅಂತಿಮವಾಗಿ ಪ್ರಿಂಟ್ ಆದ ಪ್ರಶ್ನೆಪತ್ರಿಕೆಯನ್ನು ನಾನು ನೇರವಾಗಿ ಹೊರಗೆ ತೆಗೆದಿಲ್ಲ ಎಂದು ಹೇಳಿದ್ದಾರೆ. ಆದರೆ, ಪ್ರಶ್ನೆಪತ್ರಿಕೆ ಮುದ್ರಣ ಆಗುವುದಕ್ಕೆ ಮುಂಚಿತವಾಗಿ ಶೇ. 60 ರಷ್ಟು ಪ್ರಶ್ನೆಗಳನ್ನು ಮೊದಲೇ ಬರೆದುಕೊಳ್ಳಲಾಗಿತ್ತು ಎಂಬ ಆಘಾತಕಾರಿ ಸಂಗತಿಯನ್ನು ಬಹಿರಂಗ ಪಡಿಸಿದ್ದಾರೆ.

ನಾವು ಮುಂಚಿತವಾಗಿ ಬರೆದುಕೊಂಡಿದ್ದ ಪ್ರಶ್ನೆಗಳ ಸೀರಿಸ್ ಅನ್ನೇ ಅಂತಿಮವಾಗಿ ಪ್ರಿಂಟ್ ಮಾಡಲು ಸೂಚನೆ ನೀಡಲಾಗಿತ್ತು. ತಾವು ಒಪ್ಪಿಗೆ ಮತ್ತು ಅನುಮೋದನೆ ನೀಡಿದ ಬಳಿಕವೇ ಪ್ರಶ್ನೆಪತ್ರಿಕೆ ಮುದ್ರಣಗೊಂಡಿತ್ತು ಎಂಬುದನ್ನು ಅವರು ಸಿಐಡಿ ಜ್ಞಾನೇಂದ್ರ ಎದುರು ಒಪ್ಪಿಕೊಂಡಿದ್ದಾರೆ.

**ಕನ್ನಾಳೆ ಮತ್ತಿತರರ ವಿಚಾರಣೆ:** ಕೆಪಿಎಸ್‌ಸಿ ಹಗರಣದ ತನಿಖೆಯನ್ನು ಚುರುಕುಗೊಳಿಸಿರುವ ಸಿಐಡಿ ಅಧಿಕಾರಿಗಳು ಕಸ್ಟಡಿಯಲ್ಲಿರುವ ಮಧ್ಯವರ್ತಿ ಬಸವರಾಜ್ ಕನ್ನಾಳೆ ವಿಚಾರಣೆಯನ್ನು ತೀವ್ರಗೊಳಿಸಿದ್ದಾರೆ. ಈ ಬೆನ್ನಲ್ಲೇ ಹಗರಣದಲ್ಲಿ ಭಾಗಿಯಾಗಿದ್ದ 10 ಅಭ್ಯರ್ಥಿಗಳು ಮಾಫಿಸಾಕ್ಷಿ ಆಗಲು ಸಿದ್ಧವಿದ್ದು, ಸಿಐಡಿ ಮುಂದೆ ತಪ್ಪೊಪ್ಪಿಗೆ ಹೇಳಿಕೆ ದಾಖಲಿಸಲು ಸಿದ್ಧರಾಗಿದ್ದಾರೆ. ಈಗಾಗಲೇ ಪ್ರಕರಣಕ್ಕೆ ಸಂಬಂಧಿಸಿದಂತೆ 6 ಅಭ್ಯರ್ಥಿಗಳ ಅಪ್ರೂವರ್ ಹೇಳಿಕೆಯನ್ನು ತನಿಖಾಧಿಕಾರಿಗಳು ದಾಖಲಿಸಿಕೊಂಡಿದ್ದಾರೆ.

ಅಕ್ರಮದ ಗುಟ್ಟು ರಟ್ಟುಮಾಡುತ್ತಿರುವ ಅಭ್ಯರ್ಥಿಗಳಲ್ಲಿ ಇದೀಗ ತಪ್ಪೊಪ್ಪಿಗೆ ನೀಡಲು ಪೈಪೋಟಿ ಶುರುವಾಗಿದೆ. ಆದರೆ, ಪ್ರಕರಣದಲ್ಲಿ ಭಾಗಿಯಾದ ಎಲ್ಲ ಅಭ್ಯರ್ಥಿಗಳನ್ನು ಅಪ್ರೂವರ್ ಮಾಡಿಕೊಳ್ಳಬೇಕೇ ಅಥವಾ ಬೇಡವೇ ಎಂಬ ಗೊಂದಲದಲ್ಲಿದ್ದ ಸಿಐಡಿ, ಈ ಕುರಿತು ಕಾನೂನು ತಜ್ಞರ ಸಮಾಲೋಚನೆ ನಡೆಸಿ ಮುಂದಿನ ಕ್ರಮ ಕೈಗೊಳ್ಳಲು ನಿರ್ಧರಿಸಿದೆ.

# ವಾರದೊಳಗೆ ಇನ್ನೂ 50 ತಾಲ್ಲೂಕುಗಳು ಬರಪೀಡಿತ ಘೋಷಣೆ: ಜಿ.ಪರಮೇಶ್ವರ್



**ಮೈಸೂರು, ಸೆ.1:** ಭೀಕರ ಬರಗಾಲ ಇದೆ. ಮಳೆಯ ಪ್ರಮಾಣ ಬಹಳ ಕಡಿಮೆಯಾಗಿ ಇಡೀ ರಾಜ್ಯದಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಉಂಟಾಗಿದೆ. ನೂರಾರು ಹಳ್ಳಿಗಳಿಗೆ ಈಗಾಗಲೇ ಟ್ಯಾಂಕರ್ ಮೂಲಕ ನೀರು ಪೂರೈಸುತ್ತಿದ್ದೇವೆ. ಜಾನುವಾರುಗಳಿಗೆ ಕೇವಲ 30 ವಾರಗಳಿಗೆ ಸಾಕಾಗುವಷ್ಟು ಮೇವು ಇದೆ. ಈಗಾಗಲೇ 101 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡಿದ್ದೇವೆ. ಇನ್ನೊಂದು ವಾರದಲ್ಲಿ ಇನ್ನೂ 50 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡಬಹುದು ಎಂದು ಡಿಸಿಎಂ ಡಾ.ಜಿ. ಪರಮೇಶ್ವರ್ ಹೇಳಿದರು.

ಮೈಸೂರು ಜಿಲ್ಲಾ ಪ್ರವಾಸದ ವೇಳೆ ವರುಣಾ ಕ್ಷೇತ್ರಕ್ಕೆ ಮಂಗಳವಾರ ಭೇಟಿನೀಡಿದ್ದ ಅವರು ಮಾತನಾಡಿ, ಇಂದು ಮೈಸೂರು ಜಿಲ್ಲೆಯಲ್ಲಿ ಗುರುವಾರ ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸ ಮಾಡುತ್ತಿದ್ದೇನೆ. ಬರಗಾಲ ಪೀಡಿತ ತಾಲ್ಲೂಕುಗಳಿಗೆ ಭೇಟಿ ನೀಡುತ್ತಿದ್ದೇನೆ. ಪರಿಸ್ಥಿತಿಯನ್ನು ಅವಲೋಕನ ಮಾಡಿ ಮುಂದಿನ ದಿನಗಳಲ್ಲಿ ಸಾಮಾನ್ಯ ಜನರ ಪರವಾಗಿ, ರೈತರ ಪರವಾಗಿ ತೀರ್ಮಾನಗಳನ್ನು ತೆಗೆದುಕೊಳ್ಳುತ್ತೇವೆ. ಹೀಗಾಗಿ ವಸ್ತುಸ್ಥಿತಿಯನ್ನು ಕಣ್ಣಾರೆ ನೋಡಬೇಕು ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಅವರ ಕ್ಷೇತ್ರಕ್ಕೆ ಬಂದಿದ್ದೇನೆ ಎಂದರು.ರಾಜ್ಯದ ಕಾನೂನಿನಡಿಯಲ್ಲಿ ಬರ ಘೋಷಣೆ ಮಾಡಿದರೆ ಪರಿಹಾರ ಸಿಗುವುದಿಲ್ಲ. ಕೇಂದ್ರ ಸರ್ಕಾರದ ನಿಯಮಗಳಡಿಯಲ್ಲೇ ಮಾಡಬೇಕು. ಇನ್ನೆರಡು ವಾರದೊಳಗೆ ಕೇಂದ್ರಕ್ಕೆ ಸಮಗ್ರ ಬರ ವರದಿಯನ್ನು ಸಲ್ಲಿಸುತ್ತೇವೆ. ಆ ಬಳಿಕ ಕೇಂದ್ರದ ತಂಡಗಳು ಬಂದು ಪರಿಶೀಲನೆ ನಡೆಸಿ, ನಂತರವಷ್ಟೇ ಪರಿಹಾರ ಬಿಡುಗಡೆಯಾಗುತ್ತದೆ. ಅದರ ಮೊದಲು ನಮಗೆ ಯಾವುದೇ ಪರಿಹಾರ ಹಣವನ್ನು ನಮಗೆ ಕೊಡುವುದಿಲ್ಲ ಎಂದರು.

ಅಂತಾರಾಷ್ಟ್ರೀಯ ಹವಾಮಾನ ವರದಿಯ ಪ್ರಕಾರ, ಸೆಪ್ಟೆಂಬರ್‌ನಲ್ಲಿ ಒಂದನೇ ವಾರ ಅಥವಾ ಎರಡನೇ ವಾರದಲ್ಲಿ ಮಳೆ ಕಂಪ್ಲೀಟ್ ಆಗಿ ನಿಂತು ಹೋಗುತ್ತದೆ ಎಂಬ ಮಾಹಿತಿ ಇದೆ. ಎಲ್‌ನಿನೋದಿಂದಾಗಿ 123 ವರ್ಷಗಳ ಬಳಿಕ ಈ ಪರಿಸ್ಥಿತಿ ಇದೆ. ಮಳೆ ಬರುತ್ತದೆ ಎಂದು ಹೇಳಲು ಆಗುವುದಿಲ್ಲ. ಹೀಗಾಗಿ ರೈತರಿಗೆ ಮುಂದೆ ಯಾವ ರೀತಿ ಸಹಾಯ ಮಾಡಬೇಕು ಎಂಬುದನ್ನು ತೀರ್ಮಾನ ಮಾಡುತ್ತೇವೆ ಎಂದು ಡಿಸಿಎಂ ತಿಳಿಸಿದರು. ಮೋಡ ಬಿತ್ತನೆ ಮಾಡಲು ಆದೇಶ ಕೊಟ್ಟಿದ್ದಾರೆ. ಈ ಬಗ್ಗೆ ನಮ್ಮ ಟೆಕ್ನಿಕಲ್ ತಂಡದವರು ತಯಾರಿ ಮಾಡಿಕೊಳ್ಳುತ್ತಿದ್ದಾರೆ. ಅದರಲ್ಲಿ ಎಷ್ಟರ ಮಟ್ಟಿಗೆ ಸಹಾಯ ಆಗುತ್ತದೆ ಎಂಬುದನ್ನು ನೋಡಬೇಕು. ತಾಂತ್ರಿಕ ವರದಿಯ ಪ್ರಕಾರ ಹೆಚ್ಚು ಮಳೆ ಬರುವುದಿಲ್ಲ. ಅದು ತುಂತುರು ಮಳೆ ಬಂದ ಹಾಗೆ ಬರುತ್ತದೆ. ಜೊತೆಗೆ ಅದು ಬೆಳೆಗಳಿಗೆ ಸಾಕಾಗುತ್ತದೆ ಎಂದು ಹೇಳಿದ್ದಾರೆ. ಹೀಗಾಗಿ ಇದನ್ನು ನಾವೆಲ್ಲರೂ ಒಪ್ಪಿದ್ದೇವೆ ಎಂದರು.

## ದಾಖಲೆ ಬರೆದ ಯುಪಿಐ ವ್ಯವಹಾರ ಆಗಸ್ಟ್‌ನಲ್ಲಿ 29.8 ಲಕ್ಷ ಕೋಟಿಗೆ ಏರಿಕೆ

**ನವದೆಹಲಿ, ಸೆ.1:** ಜನಪ್ರಿಯ ಏಕೀಕೃತ ಪಾವತಿ ಇಂಟರ್ಫೇಸ್ (UPI) ಮೂಲಕ ವ್ಯವಹಾರಗಳು ಆಗಸ್ಟ್‌ನಲ್ಲಿ 29.8 ಲಕ್ಷ ಕೋಟಿ ರೂ. ತಲುಪಿದ್ದು, ಇದು ದಾಖಲೆಯ ಗರಿಷ್ಠ ಮಟ್ಟಕ್ಕೆ ಹತ್ತಿರದಲ್ಲಿದೆ ಎಂದು ಭಾರತೀಯ ರಾಷ್ಟ್ರೀಯ ಪಾವತಿ ನಿಗಮ (NPCI) ಬಿಡುಗಡೆ ಮಾಡಿದ ಅಂಕಿ–ಅಂಶಗಳು ತಿಳಿಸಿವೆ.

UPI ವ್ಯವಹಾರಗಳು 2026 ರ ಮೇ ಮತ್ತು ಜುಲೈನಲ್ಲಿ 29.9 ಲಕ್ಷ ಕೋಟಿ ರೂ.ಗಳ ದಾಖಲೆಯ ಗರಿಷ್ಠ ಮಟ್ಟವನ್ನು ತಲುಪಿವೆ. ಮಂಗಳವಾರ ಬಿಡುಗಡೆಯಾದ ದತ್ತಾಂಶದ ಪ್ರಕಾರ, ಆಗಸ್ಟ್‌ನಲ್ಲಿ UPI ವಹಿವಾಟುಗಳ ಪ್ರಮಾಣ 24.51 ಶತಕೋಟಿ ದಾಖಲೆಯನ್ನು ತಲುಪಿದೆ, ಇದು ಹಿಂದಿನ ತಿಂಗಳಲ್ಲಿ ದಾಖಲಾಗಿದ್ದ 23.66 ಶತಕೋಟಿಗಿಂತ ಹೆಚ್ಚಾಗಿದೆ. ಈ ಪ್ರಮಾಣ ಜೂನ್‌ನಲ್ಲಿ 22.72 ಶತಕೋಟಿ ಮತ್ತು ಈ ವರ್ಷದ ಮೇನಲ್ಲಿ 23.2 ಶತಕೋಟಿ ಆಗಿತ್ತು. ವ್ಯವಹಾರಗಳ ಮೌಲ್ಯವು ಆಗಸ್ಟ್‌ನಲ್ಲಿ 29.82 ಲಕ್ಷ ಕೋಟಿ ರೂ. ಗಳಾಗಿದ್ದು, ಒಂದು ವರ್ಷದ ಹಿಂದೆ ಇದೇ ತಿಂಗಳಲ್ಲಿ 24.85 ಲಕ್ಷ ಕೋಟಿ ರೂ.ಗಳಾಗಿತ್ತು. ಇದು ಶೇ. 20 ರಷ್ಟು ವಾರ್ಷಿಕ ಬೆಳವಣಿಗೆಯನ್ನು ದಾಖಲಿಸಿದೆ.

ಅದೇ ಸಮಯದಲ್ಲಿ, NPCI ದತ್ತಾಂಶದ ಪ್ರಕಾರ, UPI ಪ್ರಮಾಣ ವಾರ್ಷಿಕವಾಗಿ ಶೇ 22 ರಷ್ಟು ಏರಿಕೆಯಾಗಿ ಆಗಸ್ಟ್‌ನಲ್ಲಿ 24.51 ಶತಕೋಟಿಗೆ ತಲುಪಿದೆ. ಇದು ಕಳೆದ ವರ್ಷ ಇದೇ ತಿಂಗಳಲ್ಲಿ 19.63 ಶತಕೋಟಿ ಆಗಿತ್ತು. ಭಾರತೀಯ ರಿಸರ್ವ್ ಬ್ಯಾಂಕ್ (RBI) ಮತ್ತು ಭಾರತೀಯ ಬ್ಯಾಂಕುಗಳ ಸಂಘದ ಉಪಕ್ರಮವಾದ NPCI, ಭಾರತದಲ್ಲಿ (IBA) ಚಿಲ್ಲರೆ ಪಾವತಿ ಮತ್ತು ವಸಾಹತು ವ್ಯವಸ್ಥೆಗಳನ್ನು ನಿರ್ವಹಿಸಲು ಒಂದು ಸಂಸ್ಥೆಯಾಗಿದೆ. ಆಗಸ್ಟ್‌ನಲ್ಲಿನ ಪರಿಮಾಣದ ಬೆಳವಣಿಗೆಯು ರಕ್ಷಾ ಬಂಧನದಂತಹ ಹಬ್ಬದ ಚಟುವಟಿಕೆಯಿಂದ ಮತ್ತಷ್ಟು ಬಲಗೊಂಡಿತು,

# ಲೋಕಾಯುಕ್ತ ಕ್ಲೀನ್‌ಚಿಟ್ ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ ಇ.ಡಿ.




- ಮುಡಾ ಹಗರಣಕ್ಕೆ ಹೊಸ ತಿರುವು

**ಬೆಂಗಳೂರು, ಸೆ.1:** ಮುಡಾ ನಿವೇಶನ ಹಂಚಿಕೆ ಪ್ರಕರಣ ಮಹತ್ವದ ತಿರುವು ಪಡೆದು ಕೊಂಡಿದೆ. ಲೋಕಾಯುಕ್ತ ಪೊಲೀಸರು ಸಲ್ಲಿಸಿದ್ದ ಬಿ ರಿಪೋರ್ಟ್ ಪ್ರಶ್ನಿಸಿ ಜಾರಿ ನಿರ್ದೇಶನಾಲಯ (ಇ.ಡಿ.) ಕರ್ನಾಟಕ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದೆ.

ಇ.ಡಿ ಪರವಾಗಿ ಎಎಸ್‌ಜಿ ಅರವಿಂದ ಕಾಮತ್ ವಾದ ಮಂಡಿಸಿ, ಲೋಕಾಯುಕ್ತ ತನಿಖೆಯಲ್ಲಿ ಹಲವು ನಿರ್ಣಾಯಕ ಅಂಶಗಳನ್ನು ಕಡೆಗಣಿಸಲಾಗಿದೆ, ಇಡಿ ತನಿಖೆಯಲ್ಲಿ ಕಂಡುಬಂದ ಸಾಕ್ಷ್ಯಗಳನ್ನು ಗಣನೆಗೆ ತೆಗೆದುಕೊಂಡಿಲ್ಲ, ಅಕ್ರಮ ಡಿನೋಟಿಫಿಕೇಶನ್ ಮತ್ತು ಭೂಪರಿವರ್ತನೆ ಕುರಿತು ಸರಿಯಾದ ತನಿಖೆ ನಡೆದಿಲ್ಲ ಎಂದು ಹೇಳಿದರು.

ವಾದ ಆಲಿಸಿದ ಏಕಸದಸ್ಯ ಪೀಠ ವಿಚಾರಣೆಯನ್ನು ಸೆಪ್ಟೆಂಬರ್ 2ರ ಮಧ್ಯಾಹ್ನ 2.30ಕ್ಕೆ ಮುಂದೂಡಿದೆ.ಇದಕ್ಕೂ ಮೊದಲು ಮೈಸೂರು ಲೋಕಾಯುಕ್ತ ಎಸ್‌ಪಿ 2025 ಫೆಬ್ರವರಿ 12 ರಂದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಬಿ ವರದಿ ಸಲ್ಲಿಸಿದ್ದು, ನ್ಯಾಯಾಲಯ 2026 ಜನವರಿ 28 ರಂದು ಅದನ್ನು ಅಂಗೀಕರಿಸಿತ್ತು. ಈ ಆದೇಶವನ್ನು ರದ್ದುಪಡಿಸಿ ಸ್ವತಂತ್ರ ತನಿಖಾ ಸಂಸ್ಥೆಗೆ ವಹಿಸಬೇಕು ಎಂದು ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಕೋರಿದ್ದರು. ಈಗ ಇ.ಡಿ ಕೂಡ ಅದೇ ದಾರಿ ಹಿಡಿದಿದ್ದು ಪ್ರಕರಣಕ್ಕೆ ಹೊಸ ಕಾನೂನು ಆಯಾಮ ಸಿಕ್ಕಿದೆ.ಈ ಮೂಲ ಆರೋಪ ಸಿಎಂ ಪತ್ನಿ ಪಾರ್ವತಿ ಅವರ ಕೆಸರೆ ಗ್ರಾಮದ ಸರ್ವೆ ನಂ 464ರ 3 ಎಕರೆ 16 ಗುಂಟೆ ಜಮೀನಿಗೆ ಬದಲಾಗಿ ಸುಮಾರು 56 ಕೋಟಿ ಮೌಲ್ಯದ 14 ನಿವೇಶನಗಳನ್ನು ಮುಡಾ ಅಕ್ರಮವಾಗಿ ನೀಡಿದೆ ಎಂಬುದಾಗಿದೆ.

# ಗೃಹಲಕ್ಷ್ಮಿ ಯೋಜನೆ ಮಹಿಳೆಗೆ ಗೌರವ, ಆತ್ಮವಿಶ್ವಾಸ ಹೆಚ್ಚಿಸಿದೆ



**ಮಂಗಳೂರು, ಸೆ.1:** ಗೃಹಲಕ್ಷ್ಮಿ ಯೋಜನೆಯಡಿ ಪ್ರತಿ ತಿಂಗಳು ಫಲಾನುಭವಿ ಮಹಿಳೆಯ ಖಾತೆಗೆ ಎರಡು ಸಾವಿರ ರೂ. ಜಮೆಯಾಗುವ ಮೂಲಕ ಆಕೆಗೆ ಹೆಚ್ಚಿನ ಗೌರವ ಮತ್ತು ಆತ್ಮವಿಶ್ವಾಸವನ್ನು ತಂದುಕೊಟ್ಟಿದೆ ಎಂದು ದ.ಕ. ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ. ಖಾದರ್ ಹೇಳಿದ್ದಾರೆ.

ದ.ಕ. ಜಿಲ್ಲಾ ಪಂಚಾಯತ್ ಮತ್ತು ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಮಂಗಳೂರು ತಾಲೂಕು ಸಮಿತಿ ಆಶ್ರಯದಲ್ಲಿ ಮಂಗಳವಾರ ಕುದ್ಮಲ್ ರಂಗರಾವ್ ಪುರಭವನದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ತಾಲೂಕು ಮಟ್ಟದ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿ, ಗ್ಯಾರಂಟಿ ಯೋಜನೆಯನ್ನು ಸರಕಾರವು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಮೂಲಕ ಜನಸಾಮಾನ್ಯರ ಸ್ವಾಭಿಮಾನದ ಬದುಕಿಗೆ ನೆರವಾಗಿದೆ ಎಂದು ನುಡಿದರು.

ಹಿಂದೆ ಶಾಲೆಗಳು ಪ್ರಾರಂಭವಾಗುವ ಹೊತ್ತಿಗೆ ಉಚಿತ ಪುಸ್ತಕಗಳಿಗಾಗಿ ವಿವಿಧ ಸಂಘಟನೆಗಳ ಕಚೇರಿಯ ಮುಂದೆ ಉಚಿತ ಪುಸ್ತಕಗಳಿಗಾಗಿ ಸರತಿ ಸಾಲಿನಲ್ಲಿ ನಿಲ್ಲುವ ಸ್ಥಿತಿ ಇತ್ತು. ಗ್ಯಾರಂಟಿ ಯೋಜನೆ ಇಂತಹ ಪರಿಸ್ಥಿತಿಯನ್ನು ದೂರ ಮಾಡಿದೆ. ಮಹಿಳೆಗೆ ತನ್ನ ಮಕ್ಕಳಿಗೆ ಗೃಹಲಕ್ಷ್ಮಿ ಯೋಜನೆಯಿಂದ ದೊರೆಯುವ ಹಣದಿಂದ ಮಕ್ಕಳಿಗೆ ಪುಸ್ತಕಗಳನ್ನು ಖರೀದಿಸಿ ಕೊಡುವ ಶಕ್ತಿ ಬಂದಿದೆ. ಪದವಿ ಮುಗಿಸಿದ ಯುವಕರಿಗೆ ಯುವನಿಧಿ ಮೂಲಕ ಕೆಲಸ ಸಿಗುವ ತನಕ ಉದ್ಯೋಗಕ್ಕೆ ಪ್ರಯತ್ನ ನಡೆಸಲು ಅವಕಾಶ ದೊರೆತಂತಾಗಿದೆ. ಶಕ್ತಿ ಯೋಜನೆಯಲ್ಲಿ ಮಹಿಳೆಯರಿಗೆ ತಮ್ಮ ಅಗತ್ಯದ ಕೆಲಸಗಳಿಗೆ ಬಸ್ನಲ್ಲಿ ಹೋಗಿ ಬರಲು ಸಹಾಯವಾಗಿದೆ ಎಂದು ನುಡಿದರು.

**ಅಂಗನವಾಡಿ ಕಾರ್ಯಕರ್ತೆಯರ ವೇತನ ಹೆಚ್ಚಳಕ್ಕೆ ಪ್ರಯತ್ನ:** ಅಂಗನವಾಡಿ ಕಾರ್ಯಕರ್ತೆಯರಿಂದ ಹೆಚ್ಚು ಕೆಲಸ ಮಾಡಿಸಲಾಗುತ್ತಿದೆ. ಆದರೆ ಅವರ ವೇತನ ಹೆಚ್ಚಳಕ್ಕೆ ಸರಕಾರ ಗಮನ ನೀಡುತ್ತಿಲ್ಲ ಎಂಬ ನೋವು ಅವರಲ್ಲಿದೆ. ಅಂಗನವಾಡಿ ಕಾರ್ಯಕರ್ತೆಯರು ಪ್ರಾಮಾಣಿಕತೆಯಿಂದ ಕೆಲಸ ಮಾಡುತ್ತಾರೆ ಎಂಬ ಕಾರಣಕ್ಕೆ ಸರಕಾರ ಅವರಿಗೆ ಹೆಚ್ಚು ಜವಾಬ್ದಾರಿ ನೀಡುತ್ತಿದೆ. ಅಂಗನವಾಡಿ ಕಾರ್ಯಕರ್ತೆಯರ ವೇತನ ಹೆಚ್ಚಿಸುವ ನಿಟ್ಟಿನಲ್ಲಿ ಮುಖ್ಯ ಮಂತ್ರಿ ಮತ್ತು ಸಂಬಂಧಪಟ್ಟ ಇಲಾಖೆಯ ಸಚಿವರಲ್ಲಿ ಚರ್ಚಿಸುವ ಮೂಲಕ , ಅಂಗನವಾಡಿ ಕಾರ್ಯಕರ್ತೆ ಯರ ವೇತನ ಹೆಚ್ಚಳಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸುವುದಾಗಿ ಸಚಿವ ಖಾದರ್ ಭರವಸೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಐವನ್ ಡಿ'ಸೋಜ ಮುಖ್ಯ ಅತಿಥಿಯಾಗಿ ಮಾತನಾಡಿದರು. ಕರಾವಳಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಂ.ಎ.ಗಫೂರ್, ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಅಧ್ಯಕ್ಷೆ ಶಾಲೆಟ್ ಲವೀನಾ ಪಿಂಟೊ, ಕರ್ನಾಟಕ ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಮತ ಡಿಎಸ್ ಗಟ್ಟಿ ಮುಖ್ಯ ಅತಿಥಿಗಳಾಗಿದ್ದರು. ದ.ಕ. ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಭರತ್ ಮುಂಡೋಡಿ, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡಮಿ ಅಧ್ಯಕ್ಷ ಜೋಕಿಮ್ ಸ್ಟ್ಯಾನಿ ಅಲ್ವಾರಿಸ್, ಕರ್ನಾಟಕ ಬ್ಯಾರಿ ಸಾಹಿತ್ಯ ಅಕಾಡಮಿ ಅಧ್ಯಕ್ಷ ಉಮರ್ ಯು.ಎಚ್, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ, ದ.ಕ . ಜಿಪಂ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ನರ್ವಡೆ ವಿನಾಯಕ್ ಕಾರ್ಭಾರಿಉಪಸ್ಥಿತರಿದ್ದರು.

### ಪ್ರಧಾನಮಂತ್ರಿ ಕಾರ್ಯಾಲಯದಿಂದಲೂ ಶ್ಲಾಘನೆ



**ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ. ರೇವಣ್ಣ ಅವರು ಮಾತನಾಡಿ, ಹಿಂದೆ ರಾಜ್ಯದ ಪಂಚ ಗ್ಯಾರಂಟಿ ಯೋಜನೆಗಳು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಸವಾಲಾಗಿ ಕಂಡಿತ್ತು. ಇದೀಗ ಪ್ರಧಾನ ಮಂತ್ರಿಗಳ ಕಾರ್ಯಾಲಯದ ಆರ್ಥಿಕ ತಜ್ಞರು ಶ್ಲಾಘಿಸಿದ್ದಾರೆ. ಅದರಲ್ಲೂ ಕರ್ನಾಟಕದ ಗೃಹಲಕ್ಷ್ಮಿಯು ಮಹಿಳೆಯರ ಸಬಲೀಕರಣದಲ್ಲಿ ಅತ್ಯುತ್ತಮ ಯೋಜನೆಯಾಗಿದೆ ಮತ್ತು ಭಾರತದಲ್ಲೇ ಇದೊಂದು ಅತ್ಯುತ್ತಮ ಯೋಜನೆ ಎಂದು ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ಮಹಿಳಾ ಸಬಲೀಕರಣದಲ್ಲಿ ಕರ್ನಾಟಕ ಭಾರತದಲ್ಲೇ ಮೊದಲ ಸ್ಥಾನಕ್ಕೆ ತಲುಪುವಂತಾಗಿ ಎಂದು ಅಭಿಪ್ರಾಯಪಟ್ಟರು.**

# ಐತಿಹಾಸಿಕ ಸ್ಮಾರಕಗಳ ರಕ್ಷಣೆ, ಸಂಸ್ಕೃತಿಯ ಜಾಗತಿಕ ಪ್ರಚಾರಕ್ಕೆ ಪ್ರತಿಷ್ಠಾನ: ಸಚಿವ ಕೆ.ಜೆ. ಜಾರ್ಜ್



**ಬೆಂಗಳೂರು,ಸೆ.1:** ರಾಜ್ಯದ ಐತಿಹಾಸಿಕ ಸ್ಮಾರಕಗಳು, ಪುರಾತತ್ವ ತಾಣಗಳು, ವಸ್ತುಸಂಗ್ರಹಾಲಯಗಳು ಹಾಗೂ ಸಾಂಸ್ಕೃತಿಕ ಸಂಪತ್ತಿನ ಸಂರಕ್ಷಣೆಯನ್ನು ವ್ಯವಸ್ಥಿತಗೊಳಿಸುವುದರ ಜೊತೆಗೆ, ರಾಜ್ಯದ ಕಲೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುವ ಉದ್ದೇಶದಿಂದ ಕರ್ನಾಟಕ ಹೆರಿಟೇಜ್ ಅಂಡ್ ಕಲ್ಚರಲ್ ಫೌಂಡೇಶನ್ ಸ್ಥಾಪಿಸುವ ಕುರಿತು ರಾಜ್ಯ ಪ್ರವಾಸೋದ್ಯಮ ಇಲಾಖೆ ಯೋಜನೆ ರೂಪಿಸಿದೆ.

ಈ ಸಂಬಂಧ ರಾಜ್ಯ ಪುರಾತತ್ವ, ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಿಂದ ಪ್ರಸ್ತಾವನೆ ಸಿದ್ಧಪಡಿಸಲಾಗಿದ್ದು, ಸದ್ಯದಲ್ಲೇ ಸಚಿವ ಸಂಪುಟದ ಮುಂದೆ ಸಲ್ಲಿಸಲಾಗುವುದು ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ರಾಜ್ಯದಲ್ಲಿ ಜಾರಿಯಲ್ಲಿರುವ 'ಸ್ಮಾರಕವನ್ನು ದತ್ತು ಪಡೆಯಿರಿ' ಯೋಜನೆಗೆ ದೊರೆತಿರುವ ಉತ್ತಮ ಸ್ಪಂದನೆಯನ್ನು ಮತ್ತಷ್ಟು ವಿಸ್ತರಿಸಿ, ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ, ಪುನಶ್ಚೇತನ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರದ ಜೊತೆಗೆ ಖಾಸಗಿ ವಲಯ ಮತ್ತು ಸಾರ್ವಜನಿಕರ ಸಹಭಾಗಿತ್ವವನ್ನು ಬಳಸಿಕೊಳ್ಳುವುದು ಫೌಂಡೇಶನ್‌ನ ಪ್ರಮುಖ ಉದ್ದೇಶವಾಗಿದೆ.

ರಾಜ್ಯದ 239 ತಾಲ್ಲೂಕುಗಳಲ್ಲಿ ನಡೆಸಿದ ಸಮೀಕ್ಷೆಯಲ್ಲಿ ಸುಮಾರು ಒಂದು ಲಕ್ಷ ಐತಿಹಾಸಿಕ ಸ್ಮಾರಕಗಳು ಹಾಗೂ ಪುರಾತತ್ವ ತಾಣಗಳು ಗುರುತಿಸಲ್ಪಟ್ಟಿವೆ. ಇಂತಹ ವಿಶಾಲ ಐತಿಹಾಸಿಕ ಸಂಪತ್ತಿನ ಸಂರಕ್ಷಣೆಗೆ ದೀರ್ಘಕಾಲಿಕ ಮತ್ತು ಸ್ಥಿರವಾದ ಹಣಕಾಸು ವ್ಯವಸ್ಥೆಯ ಅಗತ್ಯವಿದೆ ಎಂದು ಸಚಿವರು ಹೇಳಿದ್ದಾರೆ.

ಪ್ರಸ್ತಾವಿತ ಕರ್ನಾಟಕ ಹೆರಿಟೇಜ್ ಅಂಡ್ ಕಲ್ಚರಲ್ ಫೌಂಡೇಶನ್ ಮೂಲಕ ಸಿ.ಎಸ್.ಆರ್ ಅನುದಾನ, ಅನಿವಾಸಿ ಭಾರತೀಯರ ಕೊಡುಗೆ ಹಾಗೂ ಸಾರ್ವಜನಿಕರ ದೇಣಿಗೆಗಳನ್ನು ಪಾರದರ್ಶಕ ವ್ಯವಸ್ಥೆಯಡಿ ಒಗ್ಗೂಡಿಸುವ ಉದ್ದೇಶ ಹೊಂದಲಾಗಿದೆ.

ದಾನಿಗಳು ತಮಗೆ ಆಸಕ್ತಿಯಿರುವ ನಿರ್ದಿಷ್ಟ ಸ್ಮಾರಕ, ಪುರಾತತ್ವ ತಾಣ ಅಥವಾ ವಸ್ತುಸಂಗ್ರಹಾಲಯದ ಸಂರಕ್ಷಣೆ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಕೊಡುಗೆ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿಷ್ಠಾನ ಕೇವಲ ಸ್ಮಾರಕಗಳ ಸಂರಕ್ಷಣೆಗೆ ಸೀಮಿತವಾಗದೆ, ಆಯಾ ಸ್ಮಾರಕಗಳ ಕಲೆ, ಸಾಹಿತ್ಯ, ವಾಸ್ತುಶಿಲ್ಪ, ಜನಪದ ಕಲೆ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ದೇಶ–ವಿದೇಶಗಳಲ್ಲಿ ಪರಿಚಯಿಸುವ ವೇದಿಕೆಯಾಗುವ ಉದ್ದೇಶ ಹೊಂದಿದೆ.

ವಿಶ್ವದ ವಿವಿಧ ಭಾಗಗಳಲ್ಲಿ ನೆಲೆಸಿರುವ ಕನ್ನಡಿಗರು ತಮಗೆ ಇಷ್ಟವಿರುವ ಸ್ಮಾರಕಗಳ ಸಂರಕ್ಷಣೆಗೆ ಅಗತ್ಯ ಸಹಾಯವನ್ನು ನೀಡುವಂತೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು, ವಿನಿಮಯ ಚಟುವಟಿಕೆಗಳು ಮತ್ತು ಕರ್ನಾಟಕದ ಪರಂಪರೆಯ ಪ್ರಚಾರದಲ್ಲಿ ತೊಡಗಿಸಿಕೊಂಡು ಸಾಂಸ್ಕೃತಿಕ ರಾಯಭಾರಿಗಳಾಗಿ ರೂಪಿಸುವ ಕುರಿತು ಚಿಂತನೆ ನಡೆಸಲಾಗುತ್ತಿದೆ.

ಪ್ರತಿಷ್ಠಾನದ ಹಣಕಾಸು ನಿರ್ವಹಣೆ, ಲೆಕ್ಕಪತ್ರ, ಆಡಿಟ್ ಹಾಗೂ ಯೋಜನೆಗಳ ಅನುಷ್ಠಾನದಲ್ಲಿ ಪಾರದರ್ಶಕತೆ ಮತ್ತು ಉತ್ತರದಾಯಿತ್ವ ಖಚಿತಪಡಿಸುವ ವ್ಯವಸ್ಥೆ ರೂಪಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

**ಕರ್ನಾಟಕದ ಸ್ಮಾರಕಗಳು ಕೇವಲ ಕಲ್ಲು ಮತ್ತು ಕಟ್ಟಡಗಳಲ್ಲ; ಅವು ನಮ್ಮ ಇತಿಹಾಸ, ಕಲೆ ಮತ್ತು ಗುರುತಿನ ಜೀವಂತ ಸಾಕ್ಷಿಗಳಾಗಿವೆ. ಅವುಗಳನ್ನು ಸಂರಕ್ಷಿಸುವುದರ ಜೊತೆಗೆ, ಕರ್ನಾಟಕದ ಸಾಂಸ್ಕೃತಿಕ ವೈಭವವನ್ನು ಜಗತ್ತಿಗೆ ಪರಿಚಯಿಸಬೇಕಿದೆ. ಸರ್ಕಾರದ ಪ್ರಯತ್ನಗಳಿಗೆ CSR ಸಂಸ್ಥೆಗಳು, ಅನಿವಾಸಿ ಭಾರತೀಯರು, ಜಾಗತಿಕ ಕನ್ನಡಿಗರು ಮತ್ತು ಸಾರ್ವಜನಿಕರ ಸಹಭಾಗಿತ್ವವನ್ನು ಜೋಡಿಸುವ ಹೊಸ ಮಾದರಿಯಾಗಿ ಕರ್ನಾಟಕ ಹೆರಿಟೇಜ್ ಅಂಡ್ ಕಲ್ಚರಲ್ ಫೌಂಡೇಶನ್ ಅನ್ನು ರೂಪಿಸುವ ಉದ್ದೇಶ ಹೊಂದಿದ್ದೇವೆ. ಮುಂದಿನ ಪೀಳಿಗೆ ನಮ್ಮ ಪರಂಪರೆಯ ಬಗ್ಗೆ ಹೆಮ್ಮೆ ಪಡುವಂತಾಗಬೇಕು.**

**– ಕೆ.ಜೆ. ಜಾರ್ಜ್, ಮಾನ್ಯ ಇಂಧನ ಹಾಗೂ ಪ್ರವಾಸೋದ್ಯಮ ಸಚಿವ**

**ರಾಜ್ಯದಾದ್ಯಂತ ಹರಡಿರುವ ಐತಿಹಾಸಿಕ ಸ್ಮಾರಕಗಳ ಪ್ರಮಾಣ ಮತ್ತು ವೈವಿಧ್ಯತೆಯನ್ನು ಗಮನಿಸಿದರೆ, ಸಂರಕ್ಷಣೆಗೆ ಸರ್ಕಾರ ಮತ್ತು ಸಮಾಜದ ಜಂಟಿ ಜವಾಬ್ದಾರಿಯ ಅಡಿಯಲ್ಲಿ ದೀರ್ಘಕಾಲಿಕ ಸಂಪನ್ಮೂಲಗಳನ್ನು ರೂಪಿಸುವ ಅಗತ್ಯವಿದೆ. ದಾನಿಗಳು ತಮಗೆ ಆಸಕ್ತಿಯಿರುವ ತಾಣಗಳೊಂದಿಗೆ ನೇರವಾಗಿ ಸಂಪರ್ಕ ಹೊಂದುವಂತೆ ಮಾಡುವುದರ ಜೊತೆಗೆ, ಹಣಕಾಸು ನಿರ್ವಹಣೆ ಮತ್ತು ಯೋಜನೆಗಳ ಅನುಷ್ಠಾನಕ್ಕೆ ಸ್ಪಷ್ಟವಾದ ಪಾರದರ್ಶಕ ವ್ಯವಸ್ಥೆ ರೂಪಿಸಲಾಗುವುದು.**



**– ಡಾ. ರಾಮ್‌ಪ್ರಸಾತ್ ಮನೋಹರ್, ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ**

## ನೀಟ್ ಪ್ರತಿಭಟನೆ ಪ್ರಕರಣ: ಪ್ರತಿಭಟನಕಾರರ ವಿರುದ್ಧದ ಎಫ್‌ಐಆರ್ ರದ್ದು, ಹೊಸ ಪ್ರಕರಣಗಳಿಗೂ ಸುಪ್ರೀಂ ಕೋರ್ಟ್ ತಡೆ



**ನವದೆಹಲಿ, ಸೆ. 1:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರೋಧಿಸಿ ನಡೆದ ಪ್ರತಿಭಟನೆಗೆ ಸಂಬಂಧಿಸಿದಂತೆ ದಾಖಲಾಗಿದ್ದ ಎಫ್‌ಐಆರ್‌ಗಳನ್ನು ರದ್ದುಪಡಿಸಿ ಸುಪ್ರೀಂ ಕೋರ್ಟ್ ಮಹತ್ವದ ಆದೇಶ ಹೊರಡಿಸಿದೆ. ಸಂವಿಧಾನದ 142ನೇ ವಿಧಿಯಡಿ ತನ್ನ ವಿಶೇಷ ಅಧಿಕಾರವನ್ನು ಬಳಸಿದ ನ್ಯಾಯಾಲಯ, ಜುಲೈ 20ರಿಂದ 25ರವರೆಗೆ ನಡೆದ ಪ್ರತಿಭಟನೆಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಮುಂದುವರಿಸಬಾರದು ಎಂದು ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಸೂಚಿಸಿದೆ.

ಐದು ರಾಜ್ಯಗಳು ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸಿದ ಸುಪ್ರೀಂ ಕೋರ್ಟ್, ಜುಲೈ 20ರಿಂದ 26ರವರೆಗಿನ ಘಟನೆಗಳಿಗೆ ಸಂಬಂಧಿಸಿದಂತೆ ಯಾವುದೇ ರಾಜ್ಯ ಅಥವಾ ಕೇಂದ್ರಾಡಳಿತ ಪ್ರದೇಶವು ಹೊಸ ಎಫ್‌ಐಆರ್ ದಾಖಲಿಸಬಾರದು ಎಂದು ಸ್ಪಷ್ಟಪಡಿಸಿದೆ. ಇದೇ ಘಟನೆಗಳಿಗೆ ಸಂಬಂಧಿಸಿದ ಇತರ ಎಫ್‌ಐಆರ್‌ಗಳ ತನಿಖೆ ಅಥವಾ ವಿಚಾರಣೆಯನ್ನೂ ಮುಂದುವರಿಸದೆ ಅವುಗಳನ್ನು ಸಂಪೂರ್ಣವಾಗಿ ಮುಕ್ತಾಯಗೊಳಿಸುವಂತೆ ಸೂಚಿಸಲಾಗಿದೆ.

ಆದರೆ ಈ ಆದೇಶಕ್ಕೆ ಒಂದು ಪ್ರಮುಖ ವಿನಾಯಿತಿಯನ್ನೂ ನ್ಯಾಯಾಲಯ ನೀಡಿದೆ. ಕೇಂದ್ರ ಸರ್ಕಾರ ಮತ್ತು ದೆಹಲಿ ಪೊಲೀಸರಿಗೆ 2,873 ಮಂದಿಯ ವಿರುದ್ಧ ಹೊಸ ಎಫ್‌ಐಆರ್ ದಾಖಲಿಸಲು ಅವಕಾಶ ನೀಡಲಾಗಿದೆ. ಪ್ರತಿಭಟನೆ ವೇಳೆ ದೈಹಿಕ ಹಾನಿ ಅಥವಾ ಆಸ್ತಿ ಹಾನಿಯಂತಹ ಗಂಭೀರ ಅಪರಾಧಗಳಲ್ಲಿ ಅವರ ಪಾತ್ರ ತನಿಖೆಯಿಂದ ದೃಢಪಟ್ಟರೆ ಮಾತ್ರ ಹೊಸ ಪ್ರಕರಣ ದಾಖಲಿಸಬಹುದು ಎಂದು ತಿಳಿಸಲಾಗಿದೆ. ಈ ವಿನಾಯಿತಿ ಎಲ್ಲ ಪ್ರತಿಭಟನಾಕಾರರಿಗೂ ಅನ್ವಯಿಸುವುದಿಲ್ಲ ಎಂದು ಕೇಂದ್ರ ಸ್ಪಷ್ಟಪಡಿಸಿದೆ.

ಶಾಂತಿಯುತವಾಗಿ ಪ್ರತಿಭಟನೆಯಲ್ಲಿ ಪಾಲ್ಗೊಂಡ ಯುವಕರ ಭವಿಷ್ಯದ ಮೇಲಿನ ಪರಿಣಾಮವನ್ನೂ ನ್ಯಾಯಾಲಯ ಪರಿಗಣಿಸಿದೆ. ಕೇಂದ್ರ ಸರ್ಕಾರ ಹಾಗೂ ಕೆಲವು ರಾಜ್ಯಗಳು ನ್ಯಾಯಾಲಯದ ಮುಂದೆ ನೀಡಿದ ಭರವಸೆಗಳ ಆಧಾರದ ಮೇಲೆ 142ನೇ ವಿಧಿಯಡಿ ವಿಶೇಷ ಅಧಿಕಾರ ಬಳಸಲಾಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

**ಆತ್ಮಹತ್ಯೆ ಮಾಡಿಕೊಂಡವರ ಕುಟುಂಬಕ್ಕೆ ಪರಿಹಾರ**

ನೀಟ್ 2026ಕ್ಕೆ ಸಂಬಂಧಿಸಿದಂತೆ ಆತ್ಮಹತ್ಯೆ ಮಾಡಿಕೊಂಡ ಪ್ರಕರಣಗಳಲ್ಲಿ ಮೂರು ತಿಂಗಳೊಳಗೆ ಪರಿಹಾರ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ. ದೇಶಾದ್ಯಂತ ಪರಿಹಾರ ನೀಡಲು ಶಾಶ್ವತ ವ್ಯವಸ್ಥೆ ರೂಪಿಸುವಂತೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳೊಂದಿಗೆ ಸಮಾಲೋಚನೆ ನಡೆಸುವಂತೆಯೂ ಸೂಚಿಸಿದೆ.

**ಸೆ.5ರ ಪ್ರತಿಭಟನಾ ಮೆರವಣಿಗೆ ವಾಪಸ್**

ಸುಪ್ರೀಂ ಕೋರ್ಟ್ ಆದೇಶದ ಬಳಿಕ ಸೆಪ್ಟೆಂಬರ್ 5ರಂದು ದೆಹಲಿಯಲ್ಲಿ ನಡೆಸಲು ಉದ್ದೇಶಿಸಿದ್ದ ಪ್ರತಿಭಟನಾ ಮೆರವಣಿಗೆಯನ್ನು ಸಂಘಟಕರು ಹಿಂಪಡೆದಿದ್ದಾರೆ. ಸರ್ಕಾರ ತನ್ನ ಭರವಸೆಗಳನ್ನು ಈಡೇರಿಸುವುದಾಗಿ ನ್ಯಾಯಾಲಯದ ಮುಂದೆ ಪುನರುಚ್ಚರಿಸಿದ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

## ಎಸ್‌ಐಆರ್: ಮಹಾರಾಷ್ಟ್ರ, ಕರ್ನಾಟಕದಲ್ಲೇ ಅತಿಹೆಚ್ಚು ಡಿಲೀಟ್

**ನವದೆಹಲಿ, ಸೆ. 1:** ಚುನಾವಣಾ ಆಯೋಗವು ಕೈಗೊಂಡಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ 3ನೇ ಹಂತವು ಅಂತಿಮ ಘಟ್ಟದಲ್ಲಿದ್ದು, ಈವರೆಗೆ ಪ್ರಕಟವಾದ ಕರಡು ಪಟ್ಟಿಗಳಿಂದ ಬರೋಬ್ಬರಿ 6 ಕೋಟಿಗೂ ಅಧಿಕ ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ. 16 ರಾಜ್ಯಗಳು ಹಾಗೂ 3 ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆದ ಈ ಪರಿಷ್ಕರಣ ಪ್ರಕ್ರಿಯೆಯಲ್ಲಿ ಒಟ್ಟು 36.08 ಕೋಟಿ ಮತದಾರರ ಪೈಕಿ 29.93 ಕೋಟಿ ಹೆಸರುಗಳನ್ನು ಉಳಿಸಿಕೊಳ್ಳಲಾಗಿದ್ದು, 6.15 ಕೋಟಿ (ಶೇ. 17.04 ರಷ್ಟು) ಹೆಸರುಗಳನ್ನು ಅಳಿಸಿಹಾಕಲಾಗಿದೆ.

ದೆಹಲಿ ಹಾಗೂ ಮಹಾರಾಷ್ಟ್ರದ ಕರಡು ಪಟ್ಟಿಯನ್ನು ಸೋಮವಾರ (ಆಗಸ್ಟ್ 31, 2026) ಪ್ರಕಟಿಸಲಾಗಿದೆ. ನಾಗಾಲ್ಯಾಂಡ್ (ಸೆಪ್ಟೆಂಬರ್ 20) ಹಾಗೂ ತ್ರಿಪುರ (ಅಕ್ಟೋಬರ್ 21) ಹೊರತುಪಡಿಸಿ ಉಳಿದೆಲ್ಲೆಡೆ 3ನೇ ಹಂತದ ಕರಡು ಪಟ್ಟಿಗಳು ಬಿಡುಗಡೆಯಾಗಿವೆ. ಆದರೆ ಈ ಅಂಕಿ-ಅಂಶಗಳೇ ಅಂತಿಮವಲ್ಲ; ಚುನಾವಣಾ ಆಯೋಗವು ಕರಡು ಪಟ್ಟಿಯಲ್ಲಿನ ಸೇರ್ಪಡೆ, ಅಳಿಸುವಿಕೆಗಳಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸಲು ಮತ್ತು ಹೊಸ ಮತದಾರರ ನೋಂದಣಿಗೆ ಅವಕಾಶ ಕಲ್ಪಿಸಿದೆ. ಪರಿಷ್ಕೃತ ಅಂತಿಮ ಮತದಾರರ ಪಟ್ಟಿಗಳು ಸೆಪ್ಟೆಂಬರ್ 6 ರಿಂದ ಹಂತಹಂತವಾಗಿ ಬಿಡುಗಡೆಯಾಗಲಿದ್ದು, ಮಿಜೋರಾಂ, ಸಿಕ್ಕಿಂ ಮತ್ತು ಮಣಿಪುರ ರಾಜ್ಯಗಳ ಪಟ್ಟಿ ಮೊದಲು ಪ್ರಕಟವಾಗಲಿವೆ.

ಕರಡು ಪಟ್ಟಿಯ ಅಂಕಿ-ಅಂಶಗಳನ್ನು ಗಮನಿಸಿದರೆ, ಶೇಕಡಾವಾರು ಆಧಾರದಲ್ಲಿ ದೆಹಲಿಯಲ್ಲಿ ಅತಿ ಹೆಚ್ಚು, ಅಂದರೆ ಶೇ. 32.78ರಷ್ಟು ಹೆಸರುಗಳನ್ನು ಅಳಿಸಲಾಗಿದೆ. ಒಟ್ಟು 1.45 ಕೋಟಿ ಮತದಾರರಿದ್ದ ದೆಹಲಿಯಲ್ಲಿ 47.56 ಲಕ್ಷ ಹೆಸರುಗಳನ್ನು ಕೈಬಿಡಲಾಗಿದೆ. ಇನ್ನು ಒಟ್ಟು ಸಂಖ್ಯೆಯ ಆಧಾರದಲ್ಲಿ ನೋಡುವುದಾದರೆ, ಮಹಾರಾಷ್ಟ್ರದಲ್ಲಿ ಅತಿ ಹೆಚ್ಚು, ಅಂದರೆ 2.06 ಕೋಟಿ ಹೆಸರುಗಳನ್ನು ತೆಗೆದುಹಾಕಲಾಗಿದೆ. ಮಹಾರಾಷ್ಟ್ರದಲ್ಲಿ 9.78 ಕೋಟಿ ಇದ್ದ ಮತದಾರರ ಸಂಖ್ಯೆ ಕರಡು ಪಟ್ಟಿಯಲ್ಲಿ 7.71 ಕೋಟಿಗೆ ಕುಸಿದಿದೆ (ಶೇ. 21.15ರಷ್ಟು ಕಡಿತ). ದೆಹಲಿಯ ನಂತರ ದಾದ್ರಾ ಮತ್ತು ನಗರ್ ಹವೇಲಿ, ದಮನ್ ಮತ್ತು ದಿಯು ಪ್ರದೇಶಗಳಲ್ಲಿ ಶೇಕಡಾವಾರು ಅತಿಹೆಚ್ಚು ಕಡಿತ ಕಂಡುಬಂದಿದೆ.

ಹೆಸರು ಕೈಬಿಡಲಾದ ಒಟ್ಟು ಸಂಖ್ಯೆಯ ಆಧಾರದಲ್ಲಿ ಮಹಾರಾಷ್ಟ್ರದ ನಂತರ ಕರ್ನಾಟಕ 2ನೇ ಸ್ಥಾನದಲ್ಲಿದೆ. ರಾಜ್ಯದಲ್ಲಿ ಬರೋಬ್ಬರಿ 1.07 ಕೋಟಿ ಮತದಾರರ ಹೆಸರುಗಳನ್ನು ಅಳಿಸಲಾಗಿದೆ. ಇದರ ಬೆನ್ನಲ್ಲೇ 3ನೇ ಸ್ಥಾನದಲ್ಲಿರುವ ತೆಲಂಗಾಣದಲ್ಲಿ 73,39,235 ಹೆಸರುಗಳು ನಾಪತ್ತೆಯಾಗಿವೆ. ಆಂಧ್ರಪ್ರದೇಶ (44,89,512), ಜಾರ್ಖಂಡ್ (43,61,987), ಹರಿಯಾಣ (33.83 ಲಕ್ಷ), ಪಂಜಾಬ್ (20.66 ಲಕ್ಷ) ಹಾಗೂ ಒಡಿಶಾ (20.12 ಲಕ್ಷ) ರಾಜ್ಯಗಳಲ್ಲೂ ಲಕ್ಷಾಂತರ ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ.

ಸಿಕ್ಕಿಂನಲ್ಲಿ ಅತಿ ಕಡಿಮೆ, ಅಂದರೆ ಕೇವಲ 37,724 ಹೆಸರುಗಳನ್ನು ಅಳಿಸಲಾಗಿದೆ. ನಂತರದ ಸ್ಥಾನದಲ್ಲಿರುವ ಮಿಜೋರಾಂನಲ್ಲಿ 46,162 ಹೆಸರುಗಳನ್ನು ತೆಗೆದುಹಾಕಲಾಗಿದೆ. ಹಿಂಸಾಚಾರ ಪೀಡಿತ ಮಣಿಪುರದಲ್ಲಿ 1.58 ಲಕ್ಷ (ಶೇ. 7.5%), ಚಂಡೀಗಢದಲ್ಲಿ 66,181 (ಶೇ. 12.8%), ಮೇಘಾಲಯದಲ್ಲಿ 1.80 ಲಕ್ಷ (ಶೇ. 7.67%), ಅರುಣಾಚಲ ಪ್ರದೇಶದಲ್ಲಿ 1.69 ಲಕ್ಷ (ಶೇ. 19.09%) ಹಾಗೂ ಉತ್ತರಾಖಂಡದಲ್ಲಿ 8.26 ಲಕ್ಷ (ಶೇ. 10.39%) ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ.

ಮತದಾರರ ಪಟ್ಟಿಯ ಈ ಬೃಹತ್ ಕಡಿತವು ರಾಜಕೀಯ ವಲಯದಲ್ಲಿ ತೀವ್ರ ಕಳವಳ ಮೂಡಿಸಿದೆ. ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಗೆ ಪತ್ರ ಬರೆದಿದ್ದು, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಬೃಹತ್ ಪ್ರಮಾಣದಲ್ಲಿ ಹಾಗೂ ಅಸಮರ್ಥನೀಯವಾಗಿ ಮತದಾರರ ಹೆಸರುಗಳನ್ನು ಕೈಬಿಡಲಾಗಿದ್ದು, ಆಕ್ಷೇಪಣೆ ಸಲ್ಲಿಸಲು ನೀಡಲಾಗಿರುವ ಕಾಲಾವಕಾಶವನ್ನು ವಿಸ್ತರಿಸಬೇಕು ಎಂದು ಒತ್ತಾಯಿಸಿದ್ದಾರೆ. ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಕೂಡ ಇದೇ ರೀತಿಯ ಕಳವಳ



ವ್ಯಕ್ತಪಡಿಸಿ ಆಯೋಗಕ್ಕೆ ಮನವಿ ಮಾಡಿದ್ದಾರೆ.

ಈಗಾಗಲೇ ಬಿಹಾರ, ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ ಸೇರಿದಂತೆ ಹಲವು ರಾಜ್ಯಗಳಲ್ಲಿ ಈ ಎಸ್‌ಐಆರ್ ಪ್ರಕ್ರಿಯೆ ಮುಕ್ತಾಯಗೊಂಡಿದೆ. ಅಸ್ಸಾಂನಲ್ಲಿ ಎನ್‌ಆರ್‌ಸಿ ಕಾನೂನು ತೊಡಕುಗಳಿರುವುದರಿಂದ ಎಸ್‌ಐಆರ್ ಬದಲಿಗೆ "ವಿಶೇಷ ಪರಿಷ್ಕರಣೆ" ನಡೆಸಲಾಗಿದೆ.

ಹಿಮಾಚಲ ಪ್ರದೇಶ, ಜಮ್ಮು ಕಾಶ್ಮೀರ ಮತ್ತು ಲಡಾಖ್‌ನಲ್ಲಿ ಹವಾಮಾನ ಮತ್ತು ಜನಗಣತಿಯ 2ನೇ ಹಂತದ ಪ್ರಕ್ರಿಯೆಗಳ ನಂತರ ವೇಳಾಪಟ್ಟಿ ಪ್ರಕಟವಾಗಲಿದೆ. ಈ ಹಿಂದೆ ಈ ಎಸ್‌ಐಆರ್ ಪ್ರಕ್ರಿಯೆಯು ವಿರೋಧ ಪಕ್ಷಗಳು ಮತ್ತು ಚುನಾವಣಾ ಆಯೋಗದ ನಡುವೆ ತೀವ್ರ ವಾಗ್ವಾದಕ್ಕೆ ಕಾರಣವಾಗಿ ನ್ಯಾಯಾಲಯದ ಮೆಟ್ಟಿಲೇರಿತ್ತು. ಆದರೆ, ಈ ವರ್ಷದ ಮಾರ್ಚ್‌ನಲ್ಲಿ ಸುಪ್ರೀಂ ಕೋರ್ಟ್, ಆಯೋಗದ ಈ ಪ್ರಕ್ರಿಯೆಯ ಸಾಂವಿಧಾನಿಕ ಸಿಂಧುತ್ವವನ್ನು ಸರ್ವಾನುಮತದಿಂದ ಎತ್ತಿಹಿಡಿದಿತ್ತು.

## ಮಂಗಳೂರು-ಮೂಡುಶೆಡ್ಡೆ ಶ್ರೀ ವಿಷ್ಣುಮೂರ್ತಿ ದೇವಸ್ಥಾನದ ಆವರಣದಲ್ಲಿ

### ಡಾ। ಶ್ರೀಕಾಂತ್ ಲತಾ ಏಕನಾಥ್ ಶಿಂಧೆ ಆಡಿಟೋರಿಯಂ ನಿರ್ಮಾಣ: ದೇಣಿಗೆಗೆ ಮನವಿ

**ಮುಂಬಯಿ, ಸೆ. 1:** ಕರ್ನಾಟಕ ಕರಾವಳಿಯ ಮಂಗಳೂರು ಮೂಡುಶೆಡ್ಡೆ ಶ್ರೀ ವಿಷ್ಣುಮೂರ್ತಿ ದೇವಸ್ಥಾನಕ್ಕೆ ದೇಣಿಗೆ ಕೋರಿ ಮಹಾರಾಷ್ಟ್ರದ ಕಲ್ಯಾಣ್ ಲೋಕಸಭಾ ಕ್ಷೇತ್ರದ ಸಂಸದ ಡಾ। ಶ್ರೀಕಾಂತ್ ಏಕನಾಥ್ ಶಿಂಧೆ ಅವರಿಗೆ ಭಾನುವಾರ ಸಂಸದರ ಅಧಿಕೃತ ನಿವಾಸ ಥಾಣೆ ಲೂಯಿಸ್‌ವಾಡಿ ಇಲ್ಲಿನ ಶುಭ್‌ದೀಪ್ ಬಂಗಲೋಗೆ ವಿಷ್ಣುಮೂರ್ತಿ ದೇವಸ್ಥಾನ ಪುನರ್‌ನಿರ್ಮಾಣ ಸಮಿತಿ ಪರವಾಗಿ ಮುಂಬಯಿ ಸಮಿತಿಯ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ಮೂಡುಶೆಡ್ಡೆ ಶ್ರೀ ವಿಷ್ಣುಮೂರ್ತಿ ದೇವಸ್ಥಾನದ ಮುಂಬಯಿ ಸಮಿತಿ ಅಧ್ಯಕ್ಷ ಮೂಡುಶೆಡ್ಡೆ ವಿಶ್ವನಾಥ್ ಎಸ್.ಶೆಟ್ಟಿ, ಗೌರವಾಧ್ಯಕ್ಷ ಮುಂಡಪ್ಪ ಎಸ್.ಪಯ್ಯಡೆ, ಕಾರ್ಯದರ್ಶಿ ದಿವಾಕರ್ ರೈ ಪ್ರಧಾನವಾಗಿದ್ದು ಡಾ। ಶ್ರೀಕಾಂತ್ ಶಿಂಧೆ ಅವರಿಗೆ ಮನವಿ ಸಲ್ಲಿಸಿ ಮೂಡುಶೆಡ್ಡೆ ಗ್ರಾಮಸ್ಥರು ಡಾ। ಶ್ರೀಕಾಂತ್ ಶಿಂಧೆ ಅವರಿಗೆ ವಿನಮ್ರ ಮನವಿ ಸಲ್ಲಿಸಿ ಅವರ ಹಾಗೂ ಅವರ ಮಾತಾಪಿತರ ಹೆಸರು ಮೂಡುಶೆಡ್ಡೆ ಗ್ರಾಮದಲ್ಲಿ ಶಾಶ್ವತವಾಗಿ ಸ್ಮರಣೀಯವಾಗಿರಬೇಕು ಎಂಬ ಉದ್ದೇಶದಿಂದ 'ಡಾ। ಶ್ರೀಕಾಂತ್ ಲತಾ ಏಕನಾಥ್ ಶಿಂಧೆ ಆಡಿಟೋರಿಯಂ' ಹೆಸರಿನಲ್ಲಿ ಸಭಾಂಗಣ ನಿರ್ಮಿಸಲು ಯೋಚಿಸಲಾಗಿದೆ ಎಂದರು.

ಂ೨್ೋೀಜನ್ಂ೨್೧ಂತ್ ನೆಲಮಹಡಿಯಲ್ಲಿ ಅಡುಗೆಮನೆ ಹಾಗೂ ಊಟದ ವ್ಯವಸ್ಥೆಗಾಗಿ ಒಟ್ಟು 11,980 ಚದರ ಅಡಿ ವಿಸ್ತೀರ್ಣದ ಕಟ್ಟಡ ಹಾಗೂ ಪ್ರಥಮ ಮಹಡಿಯಲ್ಲಿ 9,085 ಚದರ ಅಡಿ ವಿಸ್ತೀರ್ಣದ ಸಭಾಂಗಣ ನಿರ್ಮಾಣಗೊಳ್ಳಲಿದೆ. ಈ ಪುಣ್ಯ ಕಾರ್ಯಕ್ಕೆ ಡಾ। ಶ್ರೀಕಾಂತ್ ಶಿಂಧೆ ಅವರು ಸಮ್ಮತಿಸಿ, ತಮ್ಮ ಹೃದಯಪೂರ್ವಕ ಬೆಂಬಲದೊಂದಿಗೆ 3.5 ಕೋಟಿ ದೇಣಿಗೆ ನೀಡುವಂತೆ ದೇವಸ್ಥಾನ ಪುನರ್‌ನಿರ್ಮಾಣ ಸಮಿತಿ ವಿನಮ್ರವಾಗಿ ಮನವಿ ಮಾಡಿದೆ ಎಂದು ಮೂಡುಶೆಡ್ಡೆ ವಿಶ್ವನಾಥ್ ಎಸ್.ಶೆಟ್ಟಿ ತಿಳಿಸಿದರು.

ಕಳೆದ ಜುಲೈನಲ್ಲಿ ನಡೆದ ದೇವಸ್ಥಾನದ ಶಿಲಾನ್ಯಾಸ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಡಾ। ಶ್ರೀಕಾಂತ್ ಶಿಂಧೆ ತಮ್ಮ ಭಾಷಣದಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರಗಳ ನಡುವಿನ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಬಾಂಧವ್ಯವನ್ನು ವಿವರಿಸಿ, ಛತ್ರಪತಿ ಶಿವಾಜಿ ಮಹಾರಾಜರು ಕರ್ನಾಟಕದಲ್ಲಿ ತಂಗಿದ್ದ ವಿಚಾರ ಹಾಗೂ ಮಹಾರಾಷ್ಟ್ರದ ಭಕ್ತರೊಂದಿಗೆ ಕರ್ನಾಟಕದ ಜನರೂ ಪಂಢರಪುರ ಜಾತ್ರೆಯಲ್ಲಿ ಪಾಲ್ಗೊಳ್ಳುವ ಪರಂಪರೆಯನ್ನು ಸುಂದರವಾಗಿ ವಿವರಿಸಿದ್ದನ್ನು ವಿಶ್ವನಾಥ್ ಎಸ್.ಶೆಟ್ಟಿ ಪುನರುಚ್ಚಿಸಿ ಈ ಭಾಷಣವು ವಿಶ್ವದ ವಿವಿಧೆಡೆ ನೆಲೆಸಿರುವ ತುಳು ಹಾಗೂ ದಕ್ಷಿಣ ಭಾರತೀಯ ಸಮುದಾಯಗಳಲ್ಲಿ ವ್ಯಾಪಕವಾಗಿ ಹರಿದಾಡಿದ್ದು, ಮುಂಬೈನ ದಕ್ಷಿಣ ಭಾರತೀಯ ಸಮುದಾಯದ ಅನೇಕರು ದೂರವಾಣಿ ಮೂಲಕ ಸಂಪರ್ಕಿಸಿ ಭಾಷಣವನ್ನು ಪ್ರಶಂಸಿಸಿದ್ದಾರೆ. ಅವರ ಭಾಷಣದ ಮೂಲಕ ಮೂಡುಶೆಡ್ಡೆ ಗ್ರಾಮದ ಹೆಸರು ಎಲ್ಲೆಡೆ ಪರಿಚಿತವಾಗಿರುವುದು ಗ್ರಾಮಸ್ಥರಲ್ಲಿ ಹೆಮ್ಮೆಯ ಭಾವನೆ ಮೂಡಿಸಿದೆ ಎಂದು ಸಮಿತಿ ಅಭಿಪ್ರಾಯ ಪಟ್ಟಿದ್ದಾಗಿ ತಿಳಿಸಿದರು.

ದಕ್ಷಿಣ ಕನ್ನಡದ ಇತಿಹಾಸದಲ್ಲಿ ಅನೇಕ ದೇವಸ್ಥಾನಗಳ ಜೀರ್ಣೋದ್ಧಾರ



ಹಾಗೂ ಪುನಃರ್ ನಿರ್ಮಾಣ ಕಾರ್ಯಗಳು ನಡೆದಿದ್ದರೂ, 5,000ಕ್ಕೂ ಅಧಿಕ ಭಕ್ತರ ಸಮ್ಮುಖದಲ್ಲಿ ನಡೆದ ಶ್ರೀ ವಿಷ್ಣುಮೂರ್ತಿ ದೇವಸ್ಥಾನದ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಡಾ। ಶ್ರೀಕಾಂತ್ ಶಿಂಧೆ ಅವರು ನೀಡಿದ ಸ್ಮರಣೀಯ ಭಾಷಣವು ಮೂಡುಶೆಡ್ಡೆಯ ಜನತೆಗೆ ವಿಶೇಷ ಹೆಮ್ಮೆಯ ಸಂಗತಿಯಾಗಿದೆ. ಇದೇ ಸಂದರ್ಭದಲ್ಲಿ ದೇವಸ್ಥಾನದ ಬ್ರಹ್ಮಕಲಶೋತ್ಸವದಲ್ಲಿ ತನ್ನ ತಂದೆ ಹಾಗೂ ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಹಾಲಿ ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಅರೊಂದಿಗೆ ಪಾಲ್ಗೊಳ್ಳುವುದಾಗಿ ನೀಡಿದ ಭರವಸೆಯೂ ಶೀಘ್ರದಲ್ಲೇ ಪೂರೈಸುವ ಭರವಸೆ ನಮಗಿದೆ ಎಂದು ಮುಂಡಪ್ಪ ಎಸ್.ಪಯ್ಯಡೆ ಆಶಯ ವ್ಯಕ್ತಪಡಿಸಿದರು.

ಈ ಭೇಟಿಯ ಸಂದರ್ಭದಲ್ಲಿ ದೇವಸ್ಥಾನದ ಮುಂಬಯಿ ಸಮಿತಿಯ ಉಪಾಧ್ಯಕ್ಷೆ ಶರ್ಮಿಳಾ ಡಿ.ರೈ, ಉಪಾಧ್ಯಕ್ಷ ಗೋಪಾಲ್ ಶೆಟ್ಟಿ, ಶಿವಸೇನೆಯ ದಕ್ಷಿಣ ಭಾರತೀಯ ಘಟಕದ ಥಾಣೆ ಜಿಲ್ಲಾಧ್ಯಕ್ಷರಾದ ಸುಭಾಷ್ ಶೆಟ್ಟಿ ಇನ್ನಂಜೆ ಮತ್ತು ಮಹಿಳಾಧ್ಯಕ್ಷೆ ಅನುಪಮಾ ಶೆಟ್ಟಿ ಉಪಸ್ಥಿತರಿದ್ದರು.

## ತುರ್ತುಪರಿಸ್ಥಿತಿಗಿಂತಲೂ ಕೀಳಾದ ಭಾರತದ ಪ್ರಜಾಪ್ರಭುತ್ವ: ವಿ-ಡೆಮ್ ವರದಿ

**2025ರ ದತ್ತಾಂಶವನ್ನು ಆಧರಿಸಿದ ಈ ವರದಿಯ ಚುನಾವಣಾ ಪ್ರಜಾಪ್ರಭುತ್ವ ಸೂಚ್ಯಂಕದಲ್ಲಿ 179 ದೇಶಗಳ ಪೈಕಿ ಭಾರತ 0.38 ಅಂಕಗಳೊಂದಿಗೆ 106ನೇ ಸ್ಥಾನಕ್ಕೆ ತಳ್ಳಲ್ಪಟ್ಟಿದೆ. ಭಾರತದ ಪ್ರಸ್ತುತ ಅಂಕವು 1975ರ ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ ದಾಖಲಾಗಿದ್ದ 0.39 ಅಂಕಕ್ಕಿಂತಲೂ ಕಡಿಮೆಯಾಗಿದೆ ಎಂಬುದು ತೀವ್ರ ಕಳವಳಕಾರಿ ಸಂಗತಿಯಾಗಿದೆ.**

**ನವದೆಹಲಿ, ಸೆ. 1:** ಸ್ವೀಡನ್ನ ಗೋಥೆನ್‌ಬರ್ಗ್ ವಿಶ್ವವಿದ್ಯಾಲಯದ "ವಿ-ಡೆಮ್" ಸಂಸ್ಥೆ ಬಿಡುಗಡೆ ಮಾಡಿರುವ ಡೆಮಾಕ್ರಸಿ ರಿಪೋರ್ಟ್ 2026 ರಲ್ಲಿ ಭಾರತದ ಚುನಾವಣಾ ಪ್ರಜಾಪ್ರಭುತ್ವದ ಸ್ಥಿತಿ ಆತಂಕಕಾರಿ ಮಟ್ಟಕ್ಕೆ ಕುಸಿದಿದೆ. 2025ರ ದತ್ತಾಂಶವನ್ನು ಆಧರಿಸಿದ ಈ ವರದಿಯ ಚುನಾವಣಾ ಪ್ರಜಾಪ್ರಭುತ್ವ ಸೂಚ್ಯಂಕದಲ್ಲಿ 179 ದೇಶಗಳ ಪೈಕಿ ಭಾರತ 0.38 ಅಂಕಗಳೊಂದಿಗೆ 106ನೇ ಸ್ಥಾನಕ್ಕೆ ತಳ್ಳಲ್ಪಟ್ಟಿದೆ. ಭಾರತದ ಪ್ರಸ್ತುತ ಅಂಕವು 1975ರ ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ ದಾಖಲಾಗಿದ್ದ 0.39 ಅಂಕಕ್ಕಿಂತಲೂ ಕಡಿಮೆಯಾಗಿದೆ ಎಂಬುದು ತೀವ್ರ ಕಳವಳಕಾರಿ ಸಂಗತಿಯಾಗಿದೆ.

ಮುಕ್ತ ಚುನಾವಣೆ, ಸಾರ್ವತ್ರಿಕ ಮತದಾನದ ಹಕ್ಕು, ರಾಜಕೀಯ ಪಕ್ಷಗಳ ಸ್ವಾತಂತ್ರ್ಯ ಹಾಗೂ ಅಭಿವ್ಯಕ್ತಿ ಸ್ವಾತಂತ್ರ್ಯದಂತಹ ಮಾನದಂಡಗಳನ್ನು ಆಧರಿಸಿ ಈ ಅಂಕಗಳನ್ನು (0 ಯಿಂದ 1ರವರೆಗೆ) ನೀಡಲಾಗುತ್ತದೆ. ಈ ಸೂಚ್ಯಂಕದಲ್ಲಿ ಡೆನ್ಮಾರ್ಕ್ 0.91 ಅಂಕಗಳೊಂದಿಗೆ ಅಗ್ರಸ್ಥಾನದಲ್ಲಿದ್ದರೆ, ನಾರ್ವೆ, ಬೆಲ್ಜಿಯಂ ಮತ್ತು ಸ್ವೀಡನ್ ತಲಾ 0.89 ಅಂಕಗಳೊಂದಿಗೆ ನಂತರದ ಸ್ಥಾನಗಳಲ್ಲಿವೆ. ಜಗತ್ತಿನ ಮುಂದುವರಿದ ರಾಷ್ಟ್ರಗಳು ಈ ಪಟ್ಟಿಯಲ್ಲಿ ಮೇಲುಗೈ ಸಾಧಿಸಿವೆ.

ಪ್ರಮುಖ ಪ್ರಜಾಪ್ರಭುತ್ವ ರಾಷ್ಟ್ರಗಳ ಪೈಕಿ ನ್ಯೂಜಿಲೆಂಡ್ 14ನೇ, ಕೆನಡಾ 16ನೇ ಹಾಗೂ ಜರ್ಮನಿ 21ನೇ ಸ್ಥಾನದಲ್ಲಿವೆ. ಆದರೆ, ಜಾಗತಿಕ ದೊಡ್ಡಣ್ಣ ಅಮೆರಿಕದ ಸ್ಥಿತಿ ಕೂಡ ಈ ಬಾರಿ ಕುಸಿತ ಕಂಡಿದೆ. 0.74 ಅಂಕಗಳೊಂದಿಗೆ ಅಮೆರಿಕ 47ನೇ ಸ್ಥಾನಕ್ಕೆ ಇಳಿದಿದ್ದು, ಕಳೆದ 50 ವರ್ಷಗಳಲ್ಲಿಯೇ ಮೊದಲ ಬಾರಿಗೆ ಲಿಬರಲ್ ಡೆಮಾಕ್ರಸಿ (ಉದಾರವಾದಿ ಪ್ರಜಾಪ್ರಭುತ್ವ) ಸ್ಥಾನಮಾನವನ್ನು ಕಳೆದುಕೊಂಡಿದೆ ಎಂದು ವರದಿ ಬೆಟ್ಟುಮಾಡಿದೆ.

ದಕ್ಷಿಣ ಏಷ್ಯಾದ ನೆರೆಹೊರೆಯ ರಾಷ್ಟ್ರಗಳ ಸಾಧನೆ ಭಾರತಕ್ಕಿಂತ ಉತ್ತಮವಾಗಿದೆ. 2020ರಿಂದ ಚುನಾವಣಾ ಪಾರದರ್ಶಕತೆ ಮತ್ತು ಭ್ರಷ್ಟಾಚಾರ ನಿಯಂತ್ರಣದಲ್ಲಿ ಸುಧಾರಣೆ ಕಂಡಿರುವ ಶ್ರೀಲಂಕಾ (33ನೇ ಸ್ಥಾನ) ಪ್ರಾದೇಶಿಕವಾಗಿ ಅತ್ಯುತ್ತಮ ಸ್ಥಾನದಲ್ಲಿದೆ. ನೇಪಾಳ (61), ಭೂತಾನ್ (76) ಮತ್ತು ಮಾಲ್ಡೀವ್ಸ್ (80) ಕೂಡ ಭಾರತವನ್ನು ಹಿಂದಿಕ್ಕಿವೆ. ಭಾರತ ಕೇವಲ ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನಗಳಿಗಿಂತ ಮಾತ್ರ ಮುಂದಿದೆ.

ಪಟ್ಟಿಯ ಕೊನೆಯ ಸ್ಥಾನಗಳಲ್ಲಿ ನಿರಂಕುಶಾಧಿಕಾರ ಹೊಂದಿರುವ ದೇಶಗಳಿವೆ. ಸೌದಿ ಅರೇಬಿಯಾ 179ನೇ ಸ್ಥಾನದೊಂದಿಗೆ ಕೊನೆಯಲ್ಲಿದ್ದರೆ, ಕತಾರ್ (178), ಅಫ್ಘಾನಿಸ್ತಾನ (176), ಚೀನಾ (175) ಮತ್ತು ಮ್ಯಾನ್ಮಾರ್ (174) ತಳಮಟ್ಟದಲ್ಲಿವೆ. ರಷ್ಯಾ 152ನೇ ಸ್ಥಾನದಲ್ಲಿದೆ. ಭಾರತವು ಚೀನಾ, ರಷ್ಯಾ ಮತ್ತು ಪಾಕಿಸ್ತಾನಕ್ಕಿಂತ ಮೇಲಿದ್ದರೂ, ವಿಶ್ವದ ಮೊದಲ 100 ದೇಶಗಳ ಪಟ್ಟಿಯಿಂದ ಹೊರಗುಳಿದಿರುವುದು ಪ್ರಜಾಪ್ರಭುತ್ವದ ಹಿನ್ನಡೆಯನ್ನು ಸ್ಪಷ್ಟವಾಗಿ ತೋರಿಸುತ್ತದೆ.

ವಿ-ಡೆಮ್‌ನ ಪ್ರತ್ಯೇಕ "ಲಿಬರಲ್ ಡೆಮಾಕ್ರಸಿ" ಸೂಚ್ಯಂಕದಲ್ಲಿ ಭಾರತ 0.26 ಅಂಕ ಪಡೆದು 105ನೇ ಸ್ಥಾನದಲ್ಲಿದೆ. ಅಭಿವ್ಯಕ್ತಿ ಮತ್ತು ಮಾಧ್ಯಮ ಸ್ವಾತಂತ್ರ್ಯದ ಮೇಲಿನ ಪ್ರಹಾರ, ಪತ್ರಕರ್ತರಿಗೆ ಕಿರುಕುಳ, ನಾಗರಿಕ ಸಮಾಜದ ಮೇಲಿನ ದಾಳಿ ಹಾಗೂ ಸಾಂವಿಧಾನಿಕ ಸಂಸ್ಥೆಗಳನ್ನು ದುರ್ಬಲಗೊಳಿಸುತ್ತಿರುವುದೇ ಭಾರತದ ಈ ಕುಸಿತಕ್ಕೆ ಪ್ರಮುಖ ಕಾರಣಗಳು. 2017ರಿಂದಲೇ ಭಾರತವನ್ನು ಚುನಾವಣಾ ಸರ್ವಾಧಿಕಾರ ವ್ಯವಸ್ಥೆ ಎಂದು ವಿ-ಡೆಮ್ ವರ್ಗೀಕರಿಸಿದೆ.

ಜಾಗತಿಕ ಮಟ್ಟದಲ್ಲಿ ಪ್ರಜಾಪ್ರಭುತ್ವದ ಒಟ್ಟಾರೆ ಸ್ಥಿತಿಗತಿಯನ್ನು ಅವಲೋಕಿಸಿದಾಗ, 2025ರ ಅಂತ್ಯಕ್ಕೆ ವಿಶ್ವಾದ್ಯಂತ 92 ಸರ್ವಾಧಿಕಾರಿ ವ್ಯವಸ್ಥೆಗಳು ಮತ್ತು ಕೇವಲ 87 ಪ್ರಜಾಪ್ರಭುತ್ವ ವ್ಯವಸ್ಥೆಗಳು ಅಸ್ತಿತ್ವದಲ್ಲಿವೆ. ಜಗತ್ತಿನ ಶೇಕಡಾ 74ರಷ್ಟು ಜನರು ಸರ್ವಾಧಿಕಾರಿ ಆಡಳಿತದಡಿ ಬದುಕುತ್ತಿದ್ದರೆ, ಕೇವಲ ಶೇಕಡಾ 7ರಷ್ಟು ಜನರು ಮಾತ್ರ ಸಂಪೂರ್ಣ ಉದಾರವಾದಿ ಪ್ರಜಾಪ್ರಭುತ್ವದ ಸೌಲಭ್ಯಗಳನ್ನು ಅನುಭವಿಸುತ್ತಿದ್ದಾರೆ ಎಂದು ಈ ವರದಿಯು ವಿವರಿಸಿದೆ.

## ಪೆಲೆಟ್ ಗನ್ ಬಳಕೆ ಮಾನವಹಕ್ಕು ಉಲ್ಲಂಘನೆಯಲ್ಲ: ಸಿಆರ್‌ಪಿಎಫ್

**ನವದೆಹಲಿ, ಸೆ. 1:** ನವದೆಹಲಿಯ ಜಂತರ್ ಮಂತರ್‌ನಲ್ಲಿ ನಡೆದ ವಿದ್ಯಾರ್ಥಿ ಪ್ರತಿಭಟನೆ ವೇಳೆ ರ್‍ಯಾಪಿಡ್ ಆಕ್ಷನ್ ಫೋರ್ಸ್ ಪೆಲೆಟ್ ಗನ್‌ಗಳನ್ನು ಬಳಸಿದೆ. ಇದರಿಂದ ಹಲವು ವಿದ್ಯಾರ್ಥಿಗಳು, ಹೋರಾಟಗಾರರು ತೀವ್ರವಾಗಿ ಗಾಯಗೊಂಡಿದ್ದಾರೆ. ಈ ಸಂಬಂಧ ಮಾಹಿತಿ ಹಕ್ಕು ಕಾಯ್ದೆಯಡಿ ಸಲ್ಲಿಸಲಾಗಿದ್ದ ಅರ್ಜಿಗೆ ಉತ್ತರಿಸಿರುವ ಸಿಆರ್‌ಪಿಎಫ್, ಪೆಲೆಟ್ ಗನ್ಗಳ ಬಳಕೆ ಮಾನವಹಕ್ಕುಗಳ ಉಲ್ಲಂಘನೆ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೇಳಿಕೊಂಡಿದೆ. ತೃಣಮೂಲ ಕಾಂಗ್ರೆಸ್ (ಟಿಎಂಸಿ) ನಾಯಕ ಸಾಕೇತ್ ಗೋಖಲೆ ಅವರು ಮಾಹಿತಿ ಹಕ್ಕು ಕಾಯ್ದೆಯಡಿ, ಪ್ರತಿಭಟನೆ ವೇಳೆ ಬಳಸಲಾದ ಪೆಲೆಟ್ ಗನ್ ಹಾಗೂ ಅಮ್ಯುನಿಷನ್ ಬಳಕೆಯ ವಿವರಗಳನ್ನು ಕೋರಿ ಅರ್ಜಿ ಸಲ್ಲಿಸಿದ್ದರು. ಆರ್‌ಟಿಐ ಕಾಯ್ದೆಯ ಸೆಕ್ಷನ್ 24(1)ರ ಪ್ರಕಾರ ಸಿಆರ್‌ಪಿಎಫ್‌ಗೆ ಮಾಹಿತಿಯಿಂದ ವಿನಾಯಿತಿ ಇದೆಯಾದರೂ, ಭ್ರಷ್ಟಾಚಾರ ಮತ್ತು ಮಾನವಹಕ್ಕು ಉಲ್ಲಂಘನೆಯ ಆರೋಪಗಳಿದ್ದಾಗ ಮಾಹಿತಿ ನೀಡುವುದು ಕಡ್ಡಾಯವಾಗಿದೆ.

ಆದರೆ, ಸಿಆರ್‌ಪಿಎಫ್ ಅರ್ಜಿಯ ನಿರಾಕರಣೆ ಮಾಡಿದ್ದು, ಈ ಘಟನೆಯು ಮಾನವಹಕ್ಕು ಉಲ್ಲಂಘನೆಯ ವ್ಯಾಪ್ತಿಗೆ ಬರುವುದಿಲ್ಲ ಮತ್ತು ಇದು ಕಾರ್ಯಾಚರಣೆಯ ಭದ್ರತೆಗೆ ಸಂಬಂಧಿಸಿದ ವಿಷಯ ಎಂದು ತಿಳಿಸಿದೆ.

ಇನ್ನು ಈ ಹಿಂದೆ ಈ ಹಿಂದೆ ಪೆಲೆಟ್ ಗನ್ ಬಳಕೆಯ ಪ್ರಕರಣಗಳ ವಿಚಾರಣೆ ನಡೆಸುವಾಗ ಸುಪ್ರೀಂ ಕೋರ್ಟ್, ಜನಸಂದಣಿ ನಿಯಂತ್ರಣಕ್ಕೆ ಪೆಲೆಟ್ ಗನ್‌ಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲು ಸಾಧ್ಯವಿಲ್ಲ, ಗಲಭೆ ಅಥವಾ ಅಸಾಧಾರಣ ಪರಿಸ್ಥಿತಿಗಳಲ್ಲಿ ಶ್ರೇಣೀಕೃತ ಪೊಲೀಸ್ ಕ್ರಮವಾಗಿ ಇದನ್ನು ಬಳಸಲು ನಿಯಮಾವಳಿ ಇದೆ ಎಂದು ಅಭಿಪ್ರಾಯಪಟ್ಟಿತ್ತು. ಆದರೆ ಸಾರ್ವಜನಿಕರ ಮೇಲೆ ಅತಿಯಾದ ಹಾಗೂ ಅನಗತ್ಯ ಬಲಪ್ರಯೋಗ ಮಾಡಬಾರದು ಮತ್ತು ಸೂಕ್ತ ಮಾರ್ಗಸೂಚಿಗಳನ್ನು ಅನುಸರಿಸಬೇಕು ಎಂದು ಕೋರ್ಟ್ ನಿರ್ದೇಶಿಸಿದೆ. ಪ್ರಸ್ತುತ ಘಟನೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಪ್ರತ್ಯೇಕ ತನಿಖಾ ಸಮಿತಿಯನ್ನೂ ರಚಿಸಿದೆ.

ಮಾನವಹಕ್ಕು ಸಂಘಟನೆಗಳು ಹಾಗೂ ಹೋರಾಟಗಾರರು ಪೆಲೆಟ್ ಗನ್ ಬಳಕೆಯನ್ನು ತೀವ್ರವಾಗಿ ವಿರೋಧಿಸುತ್ತಾ ಬಂದಿದ್ದಾರೆ. ಪೆಲೆಟ್ ಗನ್ನಿಂದ ಚಿಮ್ಮುವ ಲೋಹದ ಹಾಗೂ ಪ್ಲಾಸ್ಟಿಕ್ ಚೂರುಗಳು ಗಂಭೀರ ಗಾಯಗಳನ್ನುಂಟುಮಾಡುತ್ತವೆ. ಅನೇಕ ಸಂದರ್ಭಗಳಲ್ಲಿ ಯುವಕರು ಮತ್ತು ಪ್ರತಿಭಟನಾಕಾರರು ಶಾಶ್ವತವಾಗಿ ಕಣ್ಣಿನ ದೃಷ್ಟಿ ಕಳೆದುಕೊಳ್ಳುವ ಅಪಾಯವಿದೆ ಎಂದು ಹೋರಾಟಗಾರರು ಎಚ್ಚರಿಸಿದ್ದಾರೆ. ಇದನ್ನು ಅಂತಾರಾಷ್ಟ್ರೀಯ ಮಾನವಹಕ್ಕುಗಳ ಉಲ್ಲಂಘನೆ ಎಂದೂ ಪ್ರತಿಪಾದಿಸಿದ್ದಾರೆ.




ನವದೆಹಲಿಯಲ್ಲಿ ಮಂಗಳವಾರ ನಡೆದ 4ನೇ ಇಂಡೋ-ಜರ್ಮನ್ ಪರಿಸರ ವೇದಿಕೆಯ ಉನ್ನತ ಮಟ್ಟದ ಉದ್ಘಾಟನಾ ಅಧಿವೇಶನದಲ್ಲಿ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಶ್ರೀ ಭೂಪೇಂದರ್ ಯಾದವ್ ಅವರು ಗುಂಪು ಛಾಯಾಚಿತ್ರದಲ್ಲಿ.

## ಬಡವರು, ದಲಿತರ ಪರ ಧ್ವನಿ ಎತ್ತಿದರೆ ನಕ್ಸಲರೇ: ಪಿತ್ರೋಡಾ

**ನವದೆಹಲಿ, ಸೆ. 1:** ಕೇಂದ್ರ ಸರ್ಕಾರದ ಜನವಿರೋಧಿ ನೀತಿಗಳು ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ ವಿವಾದಾತ್ಮಕ ಹೇಳಿಕೆಗಳ ವಿರುದ್ಧ ಭಾರತೀಯ ಸಾಗರೋತ್ತರ ಕಾಂಗ್ರೆಸ್ ಅಧ್ಯಕ್ಷ ಸ್ಯಾಮ್ ಪಿತ್ರೋಡಾ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ದೇಶದ ಬಡವರು, ದಲಿತರು ಮತ್ತು ಅಲ್ಪಸಂಖ್ಯಾತರ ಪರವಾಗಿ ಧ್ವನಿ ಎತ್ತುವ ಪ್ರತಿಯೊಬ್ಬರನ್ನೂ "ನಕ್ಸಲರು" ಅಥವಾ "ಕಮ್ಯುನಿಸ್ಟರು" ಎಂದು ಕರೆಯುವುದು ಸಂಪೂರ್ಣ ಬೋಗಸ್ ಹಾಗೂ ಅಸಹ್ಯಕರ ತಂತ್ರಗಾರಿಕೆ, ಎಂದು ಅವರು ನೇರವಾಗಿ ಕಿಡಿಕಾರಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಸ್ವಾತಂತ್ರ್ಯ ದಿನಾಚರಣೆಯ ಭಾಷಣದಲ್ಲಿ ಬಳಸಿದ್ದ ದಿಮಾಗಿ ನಕ್ಸಲ್ (ವೈಚಾರಿಕ ನಕ್ಸಲರು) ಎಂಬ ಪದಪ್ರಯೋಗವನ್ನು ಕಟುವಾಗಿ ತಿರಸ್ಕರಿಸಿದ ಅವರು, ಮಾನವೀಯತೆಯ ಪರವಾಗಿ ನಿಲ್ಲುವುದು, ಶೋಷಿತರ ಹಕ್ಕುಗಳಿಗಾಗಿ ಹೋರಾಡುವುದು ಅಪರಾಧವೇ ಅನ್ಯಾಯದ ವಿರುದ್ಧ ದನಿ ಎತ್ತುವವರ ಮೇಲೆ ನಕ್ಸಲ್ ಹಣೆಪಟ್ಟಿ ಹಚ್ಚಿ ಹತ್ತಿಕ್ಕಲು ನೋಡುವ ಆಡಳಿತಾರೂಢರ ಕುತಂತ್ರ ಅತ್ಯಂತ ಖಂಡನೀಯ. ನಮಗೆ ಅಧಿಕಾರ ದಾಹಕ್ಕಿಂತಲೂ ಮಾನವೀಯ ಮೌಲ್ಯಗಳೇ ಶ್ರೇಷ್ಠ, ಎಂದು ಗುಡುಗಿದ್ದಾರೆ.

ದೆಹಲಿಯಲ್ಲಿ ನಡೆದ ವಿದ್ಯಾರ್ಥಿ ಪ್ರತಿಭಟನೆಯಲ್ಲಿ ಪ್ರಧಾನಿ ವಿರುದ್ಧ ಕೇಳಿಬಂದ ಆಕ್ರೋಶಭರಿತ ಘೋಷಣೆಗಳನ್ನು ಸಮರ್ಥಿಸಿಕೊಂಡ ಪಿತ್ರೋಡಾ, ಇಂದಿನ ಯುವಪೀಳಿಗೆ ಸುಖಾಸುಮ್ಮನೆ ರಸ್ತೆಗೆ ಇಳಿದಿಲ್ಲ. ಆಳುವ ವರ್ಗದ ಸುಳ್ಳು ಭರವಸೆಗಳು, ಹೆಚ್ಚುತ್ತಿರುವ ನಿರುದ್ಯೋಗ ಮತ್ತು ಭವಿಷ್ಯದ ಅನಿಶ್ಚಿತತೆಯಿಂದ ಕಂಗೆಟ್ಟಿರುವ ಯುವಕರು ತೀವ್ರ ಹತಾಶೆಯಿಂದ ಪ್ರತಿಭಟಿಸುತ್ತಿದ್ದಾರೆ. ವ್ಯವಸ್ಥೆಯ ವೈಫಲ್ಯಗಳನ್ನು ಪ್ರಶ್ನಿಸುವ ಧೈರ್ಯ ತೋರುತ್ತಿರುವ ನಮ್ಮದೇ ಮಕ್ಕಳ ಆಕ್ರೋಶವನ್ನು ಆಲಿಸುವ ಬದಲು, ಅವರ ಮೇಲೆ ದೋಷಾರೋಪ ಹೊರಿಸುವುದು ನಾಚಿಕೆಗೇಡಿನ ಸಂಗತಿ, ಎಂದು ತರಾಟೆಗೆ ತೆಗೆದುಕೊಂಡರು. ದೇಶದಲ್ಲಿ ಪ್ರಜಾಪ್ರಭುತ್ವದ ಕತ್ತು ಹಿಸುಕಲಾಗುತ್ತಿದೆ ಎಂದು ಆತಂಕ ಹೊರಹಾಕಿದ ಅವರು, ಪ್ರಧಾನಮಂತ್ರಿ ಕಾರ್ಯಾಲಯದಲ್ಲಿ ಅಧಿಕಾರವನ್ನು ಅತಿಯಾಗಿ ಕೇಂದ್ರೀಕರಿಸಿ, ದೇಶದ



ಸಾಂವಿಧಾನಿಕ ಸಂಸ್ಥೆಗಳನ್ನು ದುರ್ಬಲಗೊಳಿಸಲಾಗಿದೆ. ನ್ಯಾಯಾಂಗ, ಚುನಾವಣಾ ಆಯೋಗ ಮತ್ತು ತನಿಖಾ ಸಂಸ್ಥೆಗಳು ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಬೆದರುತ್ತಿವೆ. ಸರ್ಕಾರವನ್ನು ಪ್ರಶ್ನಿಸುವ ಎನ್‌ಜಿಓ ಹಾಗೂ ನಾಗರಿಕ ಸಮಾಜದ ಸಂಘಟನೆಗಳ ಮೇಲೆ ತನಿಖಾ ಸಂಸ್ಥೆಗಳನ್ನು ಬಿಟ್ಟು ದಮನಕಾರಿ ಆಡಳಿತ ನಡೆಸಲಾಗುತ್ತಿದೆ, ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಿರುದ್ಯೋಗ, ಶಿಕ್ಷಣ, ಆರೋಗ್ಯ ಮತ್ತು ಬೆಲೆ ಏರಿಕೆಯಂತಹ ಗಂಭೀರ ಜನಪರ ಸಮಸ್ಯೆಗಳನ್ನು ಸಂಪೂರ್ಣವಾಗಿ ಕಡೆಗಣಿಸಿ, ರಾಜಕೀಯ ಚರ್ಚೆಗಳನ್ನು ನಿರಂತರವಾಗಿ ದಾರಿತಪ್ಪಿಸಲಾಗುತ್ತಿದೆ. ಇಂತಹ ಸರ್ವಾಧಿಕಾರಿ ಧೋರಣೆ, ಮಾಧ್ಯಮಗಳ ಅಪಪ್ರಚಾರ ಹಾಗೂ ಸಾಂಸ್ಥಿಕ ದಾಳಿಗಳ ನಡುವೆಯೂ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಸಂವಿಧಾನದ ಮೂಲ ಆಶಯಗಳಾದ ಸಮಾನತೆ, ವೈವಿಧ್ಯ ಮತ್ತು ಜಾತ್ಯತೀತ ಮೌಲ್ಯಗಳ ರಕ್ಷಣೆಗಾಗಿ ಧೃತಿಗೆಡದೆ ಮುನ್ನುಗ್ಗುತ್ತಿದ್ದಾರೆ ಎಂದು ಶ್ಲಾಘಿಸಿದರು.

ಯುವಜನರ ನೈಜ ಕೂಗನ್ನು ಹತ್ತಿಕ್ಕುವ ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ನಾಶಪಡಿಸುವ ಸರ್ಕಾರದ ಧೋರಣೆ ತಕ್ಷಣವೇ ನಿಲ್ಲಬೇಕು; ಜನಸಾಮಾನ್ಯರ ಹಕ್ಕುಗಳನ್ನು ಕಸಿದುಕೊಳ್ಳುವ ಅಧಿಕಾರದ ವಿರುದ್ಧ ಯುವ ಸಮುದಾಯದ ಕೆಂಡಾಮಂಡಲ ಪ್ರತಿಭಟನೆ ಮುಂದುವರಿಯುವುದು ಖಚಿತ ಎಂದು ಅವರು ಎಚ್ಚರಿಸಿದ್ದಾರೆ.

## ತಮಿಳುನಾಡಿನ 52 ಪ್ರಮುಖ ದೇಗುಲಗಳಲ್ಲಿ ಮೊಬೈಲ್ ನಿಷೇಧ: ಫೋನ್ ಇಡಲು 5 ರೂ. ಶುಲ್ಕ

**ಚೆನ್ನೈ, ಸೆ. 1:** ತಮಿಳುನಾಡಿನ ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ ಇಲಾಖೆಯ ವ್ಯಾಪ್ತಿಯ 52 ಪ್ರಮುಖ ದೇಗುಲಗಳಲ್ಲಿ ಮೊಬೈಲ್ ಫೋನ್‌ಗಳನ್ನು ಒಳಗೆ ಕೊಂಡೊಯ್ಯುವುದಕ್ಕೆ ಸೆ.1ರಿಂದ ಸಂಪೂರ್ಣ ನಿಷೇಧ ಜಾರಿಗೆ ಬಂದಿದೆ. ದೇಗುಲಗಳ ಪಾವಿತ್ರ್ಯ ಹಾಗೂ ಶಾಂತ ವಾತಾವರಣ ಕಾಪಾಡುವುದು ಮತ್ತು ಸೆಲ್ಫಿ, ಫೋಟೊ, ವಿಡಿಯೊ ಹಾಗೂ ಸಾಮಾಜಿಕ ಜಾಲತಾಣಗಳ ರೀಲ್ಸ್ ಚಿತ್ರೀಕರಣ ತಡೆಯುವುದು ಇದರ ಉದ್ದೇಶವಾಗಿದೆ.

ದೇಗುಲಗಳಿಗೆ ಬರುವ ಭಕ್ತರು ತಮ್ಮ ಮೊಬೈಲ್‌ಗಳನ್ನು ಪ್ರವೇಶ ದ್ವಾರಗಳ ಬಳಿ ಸ್ಥಾಪಿಸಿರುವ ಸುರಕ್ಷಿತ ಠೇವಣಿ ಕೇಂದ್ರಗಳಲ್ಲಿ 5 ರೂ. ಶುಲ್ಕ ನೀಡಬೇಕು. ಮೊಬೈಲ್ ಸ್ವೀಕರಿಸಿದ ಬಳಿಕ ರಸೀದಿ ನೀಡಲಾಗುತ್ತದೆ. ಫೋನ್ ಹಿಂದಿರುಗಿಸುವ ವೇಳೆ ರಸೀದಿಯನ್ನು ಪರಿಶೀಲಿಸಿ ಸಾಧನವನ್ನು ಹಸ್ತಾಂತರಿಸುವ ವ್ಯವಸ್ಥೆ ಮಾಡಲಾಗಿದೆ.

ಕಾಂಚೀಪುರಂನ ಪ್ರಸಿದ್ಧ ದೇವರಾಜಸ್ವಾಮಿ ಅತ್ತಿವರದರ್ ದೇಗುಲದಲ್ಲೂ ಮಂಗಳವಾರ ಬೆಳಗ್ಗೆಯಿಂದಲೇ ವ್ಯವಸ್ಥೆ ಜಾರಿಗೆ ಬಂದಿದೆ. ಭಕ್ತರ ಫೋಟೊ, ಮೊಬೈಲ್ ಮಾದರಿ ಮತ್ತು ಸಂಖ್ಯೆಯಂತಹ ವಿವರಗಳನ್ನು ದಾಖಲಿಸಿ ಫೋನ್‌ಗಳನ್ನು ಸುರಕ್ಷಿತವಾಗಿ ಸಂಗ್ರಹಿಸಲಾಗುತ್ತಿದೆ.

ಮೊಬೈಲ್ ನಿಷೇಧ ಜಾರಿಯಾಗಿರುವ ದೇಗುಲಗಳ ಪೈಕಿ ಮದುರೈ ಮೀನಾಕ್ಷಿ ಅಮ್ಮನ್, ಪಳನಿ ದಂಡಾಯುಧಪಾಣಿ, ರಾಮೇಶ್ವರಂ ರಾಮನಾಥಸ್ವಾಮಿ, ತಿರುಚೆಂದೂರು ಸುಬ್ರಹ್ಮಣ್ಯಸ್ವಾಮಿ, ಶ್ರೀರಂಗಂ ರಂಗನಾಥಸ್ವಾಮಿ, ತಿರುಣ್ಣಾಮಲೈ ಅರುಣಾಚಲೇಶ್ವರ, ತಿರುತ್ತಣಿ ಸುಬ್ರಹ್ಮಣ್ಯಸ್ವಾಮಿ, ಚೆನ್ನೈನ ಕಪಾಲೇಶ್ವರ ಮತ್ತು ಪಾರ್ಥಸಾರಥಿ ದೇಗುಲಗಳು ಸೇರಿವೆ.

ಈ ನಿರ್ಧಾರವು 2022ರ ಮದ್ರಾಸ್ ಹೈಕೋರ್ಟ್‌ನ ಮದುರೈ ಪೀಠದ ನಿರ್ದೇಶನಕ್ಕೆ ಅನುಗುಣವಾಗಿ ಕೈಗೊಳ್ಳಲಾಗಿದೆ. ದೇಗುಲಗಳಲ್ಲಿ ಫೋಟೊ, ವಿಡಿಯೊ, ಸೆಲ್ಫಿ ಹಾಗೂ ರೀಲ್ಸ್ ಮಾಡುವುದರಿಂದ ಇತರ ಭಕ್ತರಿಗೆ ತೊಂದರೆಯಾಗುತ್ತಿದೆ ಮತ್ತು ಆಧ್ಯಾತ್ಮಿಕ ವಾತಾವರಣಕ್ಕೆ ಧಕ್ಕೆಯಾಗುತ್ತಿದೆ ಎಂಬ ದೂರುಗಳ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳಲಾಗಿದೆ. ಕ್ಯಾಮರಾ ಇಲ್ಲದ ಸಾಮಾನ್ಯ ಮೊಬೈಲ್‌ಗಳಿಗೆ ಈ ನಿರ್ಬಂಧ ಅನ್ವಯಿಸುವುದಿಲ್ಲ ಎಂದು ಹಿಂದೂ ಧಾರ್ಮಿಕ ದತ್ತಿ ಸಚಿವ ರಮೇಶ್ ಸ್ಪಷ್ಟಪಡಿಸಿದ್ದಾರೆ. ತುರ್ತು ಸಂದರ್ಭಗಳಲ್ಲಿ ಭಕ್ತರಿಗೆ ನೆರವಾಗಲು ದೇಗುಲ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿ ಮೂಲಕ ವ್ಯವಸ್ಥೆ ಮಾಡಲಾಗಿದೆ.

# ಪಾಲಿಕೆ ಶಾಲೆಗಳ ವಿದ್ಯಾರ್ಥಿಗಳಿಗೆ ಮುಖಚರ್ಯೆ ಆಧಾರಿತ ಹಾಜರಾತಿ ವ್ಯವಸ್ಥೆ ಜಾರಿಗೊಳಿಸಿ: ಸಚಿವ ಕೃಷ್ಣಬೈರೇಗೌಡ ಸೂಚನೆ

**ಬೆಂಗಳೂರು, ಸೆ.1:** ಜಿಬಿಎ ವ್ಯಾಪ್ತಿಯ ಎಲ್ಲಾ 5 ನಗರ ಪಾಲಿಕೆಗಳ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮುಖಚರ್ಯೆ ಆಧಾರಿತ ಹಾಜರಾತಿ ವ್ಯವಸ್ಥೆ ಜಾರಿಗೊಳಿಸುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಶಿಕ್ಷಣ ವಿಭಾಗದ ವಿಶೇಷ ಆಯುಕ್ತರಿಗೆ ಸೂಚನೆ ನೀಡಿದರು.

ಜಿಬಿಎ ವ್ಯಾಪ್ತಿಯ 5 ನಗರ ಪಾಲಿಕೆಗಳಲ್ಲಿ ಕೈಗೆತ್ತಿಕೊಂಡಿರುವ ಅಭಿವೃದ್ಧಿ ಕಾಮಗಾರಿಗಳು, ಯೋಜನೆಗಳು, ಕಾರ್ಯಕ್ರಮಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ಕೌನ್ಸಿಲ್ ಸಭಾಂಗಣದಲ್ಲಿ ಮಂಗಳವಾರ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಈಗಾಗಲೇ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮುಖಚರ್ಯೆ ಆಧಾರಿತ ಹಾಜರಾತಿ ವ್ಯವಸ್ಥೆ ಜಾರಿಯಲ್ಲಿದ್ದು, ಅದೇ ಮಾದರಿಯಲ್ಲಿ ಪಾಲಿಕೆ ಶಾಲೆಗಳಲ್ಲಿಯೂ ಅಳವಡಿಸಿಕೊಳ್ಳುವಂತೆ ಸೂಚಿಸಿದರು. ಶಾಲಾ ಮಕ್ಕಳಿಗೆ ಸಮವಸ್ತ್ರಗಳನ್ನು ನಿಗದಿತ ಸಮಯದಲ್ಲಿ ವಿತರಿಸಬೇಕು. ಈ ಸಂಬಂಧ ಕೂಡಲೇ ಸಮವಸ್ತ್ರಗಳನ್ನು ವಿತರಿಸುವ ವ್ಯವಸ್ಥೆ ಮಾಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.



ಪಾಲಿಕೆಗಳಲ್ಲಿನ ಶಿಕ್ಷಣ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿ ಗಳೊಂದಿಗೆ ಸಭೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳೋಣ ಎಂದರು.ಶಾಲಾ–ಕಾಲೇಜುಗಳಲ್ಲಿ ಶೌಚಾಲಯಗಳ ವ್ಯವಸ್ಥೆ ಸಮರ್ಪಕವಾಗಿರಬೇಕು. ಈ ಸಂಬಂಧ ಸಿಎಸ್ಆರ್ ಅನುದಾನದ ಮೂಲಕ ಅಗತ್ಯವಿದ್ದಲ್ಲಿ ಶೌಚಾಲಯಗಳನ್ನು ನಿರ್ಮಿಸಿ, ಅವುಗಳ ಸಮರ್ಪಕ ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು. ಜಿಬಿಎ ವ್ಯಾಪ್ತಿಯಲ್ಲಿ 94 ನರ್ಸರಿ, 18 ಪ್ರಾಥಮಿಕ, 36 ಪ್ರೌಢ, 21 ದ್ವಿತೀಯ, 4 ಪದವಿ ಹಾಗೂ 2 ಸ್ನಾತಕೋತ್ತರ ಸೇರಿದಂತೆ ಒಟ್ಟು 175 ಪಾಲಿಕೆ ಶಿಕ್ಷಣ ಸಂಸ್ಥೆಗಳಿದ್ದು, ಪ್ರಸಕ್ತ ಸಾಲಿನಲ್ಲಿ ಒಟ್ಟಾರೆ 22,210 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಪಾಲಿಕೆ ಶಾಲೆಗಳಲ್ಲಿ 115 ಕಾಯಂ ಹಾಗೂ 841 ಅತಿಥಿ ಶಿಕ್ಷಕರು ಸೇರಿದಂತೆ ಒಟ್ಟು 956 ಶಿಕ್ಷಕರು ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ವಿಶೇಷ ಆಯುಕ್ತರು ಮಾಹಿತಿ ನೀಡಿದರು.

**ವೈಟ್ ಟಾಪಿಂಗ್ ಕಾಮಗಾರಿಗೆ ವೇಗ ನೀಡಿ:** ನಗರದಲ್ಲಿ 1,700 ಕೋಟಿ ರೂ. ವೆಚ್ಚದಲ್ಲಿ 120.60 ಕಿ.ಮೀ. ಉದ್ದದ 117 ರಸ್ತೆಗಳಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಪ್ರಗತಿಯಲ್ಲಿದ್ದು, ಈ ಪೈಕಿ 61.43 ಕಿ.ಮೀ. ಕಾಮಗಾರಿ ಪೂರ್ಣಗೊಂಡಿದೆ. ಬಾಕಿ ಇರುವ 59.26 ಕಿ.ಮೀ. ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಸಚಿವರು ಸೂಚಿಸಿದರು. ರಸ್ತೆ ಕಾಮಗಾರಿ ಕೈಗೆತ್ತಿಕೊಳ್ಳುವ ಸಂದರ್ಭದಲ್ಲಿ ಪಾದಚಾರಿ ಮಾರ್ಗಗಳನ್ನು ಅತಿಯಾಗಿ ಎತ್ತರಿಸುವ ಬದಲು, ವೀಲ್‌ಚೇರ್‌ಗಳ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ನಿರ್ಮಿಸಬೇಕು. ಮರಗಳ ಸುತ್ತಲೂ ಗ್ರಾಸ್ ಪೇವರ್ ಬ್ಲಾಕ್‌ಗಳನ್ನು ಕಡ್ಡಾಯವಾಗಿ ಅಳವಡಿಸಬೇಕೆಂದು ನಿರ್ದೇಶನ ನೀಡಿದರು.

ಪ್ರಸ್ತುತ ಸಂತಾನಹರಣ ಶಸ್ತ್ರಚಿಕಿತ್ಸೆಯ ಪ್ರಮಾಣವನ್ನು ಹೆಚ್ಚಿಸಲಾಗಿದ್ದು, ದಿನಕ್ಕೆ 280 ತಿಂಗಳಿಗೆ 7,000 ಬೀದಿನಾಯಿಗಳಿಗೆ ಸಂತಾನಹರಣ ಶಸ್ತ್ರಚಿಕಿತ್ಸೆ ಮಾಡಲಾಗುತ್ತಿದೆ. ಅದರಂತೆ ವಾರ್ಷಿಕವಾಗಿ 80,000 ಎಬಿಸಿ ಶಸ್ತ್ರಚಿಕಿತ್ಸೆಗಳನ್ನು ಕೈಗೊಳ್ಳಲಾ ಗುವುದು ಎಂದು ವಿಶೇಷ ಆಯುಕ್ತರು ಮಾಹಿತಿ ನೀಡಿದರು.



ಎಸ್ಐಆರ್ ಚಟುವಟಿಕೆ ವಿರೋಧಿಸಿ ಎಸ್ಐಆರ್ ವಿರೋಧಿ ಜಾತ್ಯತೀತ ಪಕ್ಷಗಳು–ಜನಪರ ಸಂಘಟನೆಗಳ ಒಕ್ಕೂಟ ಬೆಂಬಲಿಗರು ಮತ್ತು ಸದಸ್ಯರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

# ಪಶುವೈದ್ಯಾಧಿಕಾರಿ ನೇಮಕ ಪರೀಕ್ಷಾ ಅಕ್ರಮ ಭ್ರಷ್ಟಾಚಾರ ನಡೆದಿರುವುದು ಸಿಐಡಿ ತನಿಖೆಯಲ್ಲಿ ದೃಢ

**ಬೆಂಗಳೂರು,ಸೆ.1–** ಕರ್ನಾಟಕ ಲೋಕಸೇವಾ ಆಯೋಗದ ಪಶು ವೈದ್ಯಾಧಿಕಾರಿ ನೇಮಕಾತಿ ಪರೀಕ್ಷಾ ಅಕ್ರಮ ಪ್ರಕರಣದ ತನಿಖೆ ತೀವ್ರ ಗೊಂಡಿದ್ದು, ಸಿಐಡಿ ಅಧಿಕಾರಿಗಳ ಮುಂದೆ ಮಹತ್ವದ ಬೆಳವಣಿಗೆಗಳು ಜರುಗಿವೆ. ಸುಮಾರು 400 ಹುದ್ದೆಗಳಿಗೆ ನಡೆದಿದ್ದ ಈ ನೇಮಕಾತಿ ಪ್ರಕ್ರಿಯೆಯಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ನಡೆದಿರುವುದು ತನಿಖೆಯಿಂದ ದೃಢಪಟ್ಟಿದೆ.

ಪ್ರತಿ ಹುದ್ದೆಗೆ ಬರೋಬ್ಬರಿ 40 ಲಕ್ಷ ರೂ.ಗಳಿಗೆ ಹಣಕಾಸಿನ ಒಪ್ಪಂದ ಕುದುರಿಸಲಾಗಿತ್ತು. ಮಹಮದ್ ಸುಹೇಲ್ ಸೇರಿದಂತೆ ಒಟ್ಟು 6 ಜನ ಅಭ್ಯರ್ಥಿಗಳು ಹಣ ನೀಡಿ ಅಕ್ರಮವಾಗಿ ಪರೀಕ್ಷೆ ಬರೆದಿರುವುದಾಗಿ ಸಿಐಡಿ ವಿಚಾರಣೆ ವೇಳೆ ತಮ್ಮ ತಪ್ಪನ್ನು ಒಪ್ಪಿಕೊಂಡಿದ್ದಾರೆ.

**ರಹಸ್ಯ ಪರೀಕ್ಷಾ ಕೇಂದ್ರಗಳು**

ಸಾಮಾನ್ಯ ಕೇಂದ್ರಗಳ ಬದಲಿಗೆ ಬೆಂಗಳೂರಿನ ರೆಸಾರ್ಟ್, ತುಮಕೂರಿನ ದೇವರಾಯನದುರ್ಗ ಹಾಗೂ ಆಂಧ್ರಪ್ರದೇಶದ ರೆಸಾರ್ಟ್‌ಗಳಲ್ಲಿ ಅಭ್ಯರ್ಥಿಗಳಿಗೆ ವಾಸ್ತವ್ಯ ಕಲ್ಪಿಸಿ, ಪರೀಕ್ಷೆಗೂ ಮುನ್ನವೇ ಪ್ರಶ್ನೆಪತ್ರಿಕೆ ನೀಡಿ ರಹಸ್ಯ ತರಬೇತಿ ನೀಡಲಾಗಿತ್ತು.

**ಪ್ರಭಾವಿ ಮುಖಂಡನ ಮನೆ ಜಪ್ತಿ:** ಈ ಅಕ್ರಮ ಜಾಲದ ಪ್ರಮುಖ ಮಧ್ಯವರ್ತಿಯಾಗಿರುವ ಭಾಲ್ಕಿ ಮೂಲದ ಬಿಜೆಪಿ ಮುಖಂಡ ಬಸವರಾಜ್ ಕನ್ನಾಳೆ ಎಂಬಾತನನ್ನು ಸಿಐಡಿ ಈಗಾಗಲೇ ಬಂಧಿಸಿದೆ. ಕೋರ್ಟ್‌ನಿಂದ ಸರ್ಚ್ ವಾರೆಂಟ್ ಪಡೆದ ಸಿಐಡಿ ಅಧಿಕಾರಿಗಳು, ಸಂಜಯ್ ನಗರದ ವಿನಾಯಕ ಲೇಔಟ್‌ನಲ್ಲಿರುವ ಬಸವರಾಜ್ ಕನ್ನಾಳೆ ಮನೆಯಲ್ಲಿ ಶೋಧ ನಡೆಸಿ, ಸಿಸಿಟಿವಿ ಡಿವಿಆರ್ ವಶಕ್ಕೆ ಪಡೆದಿದ್ದಾರೆ.

ತನಿಖೆ ಮುಂದುವರಿದ ಹಿನ್ನೆಲೆಯಲ್ಲಿ ಆತನ ಮನೆಯನ್ನು ಸೀಜ್ ಮಾಡಿ ತಮ್ಮ ನಿಯಂತ್ರಣಕ್ಕೆ ತೆಗೆದು ಕೊಂಡಿದ್ದಾರೆ. ಈ ಅಕ್ರಮ ದಂಧೆಯ ಹಿಂದೆ ದೊಡ್ಡ ಜಾಲವೇ ಕಾರ್ಯ ನಿರ್ವಹಿಸುತ್ತಿದ್ದು, ಸಿಐಡಿ ಅಧಿಕಾರಿಗಳು ತಪ್ಪೊಪ್ಪಿಗೆ ಹೇಳಿಕೆಗಳನ್ನು ಅಧಿಕೃತವಾಗಿ ದಾಖಲಿಸಿಕೊಂಡಿರುವ ಇತರ ಕಿಂಗ್‌ಪಿನ್‌ಗಳು ಹಾಗೂ ಪ್ರಭಾವಿಗಳಿಗಾಗಿ ತೀವ್ರ ಶೋಧ ಮುಂದುವರಿಸಿದ್ದಾರೆ.

**ಆರು ಅಭ್ಯರ್ಥಿಗಳ ಮೇಲೂ ತನಿಖೆಯ ಕಣ್ಣು**

ಈ ಪ್ರಕರಣದಲ್ಲಿ ಸುಮಾರು ಆರು ಅಭ್ಯರ್ಥಿಗಳು ತನಿಖಾ ಸಂಸ್ಥೆಗಳ ಮುಂದೆ ತಪ್ಪೊಪ್ಪಿಗೆ ನೀಡಲು ಮುಂದಾಗಿದ್ದಾರೆ ಎಂಬ ಮಾಹಿತಿ ಆಗಸ್ಟ್‌ನಲ್ಲೇ ಹೊರಬಂದಿತ್ತು. ಅಭ್ಯರ್ಥಿಗಳ ನಿವಾಸಗಳ ಮೇಲಿನ ಶೋಧ ಮತ್ತು ವಿಚಾರಣೆಯ ಸಂದರ್ಭದಲ್ಲಿ ಅಕ್ರಮದ ಕುರಿತು ಮಹತ್ವದ ಮಾಹಿತಿ ಲಭ್ಯವಾಗಿದೆ ಎಂದು ವರದಿಯಾಗಿತ್ತು.

ಆದರೆ ಎಲ್ಲ ಆರು ಅಭ್ಯರ್ಥಿಗಳೂ ಈಗಾಗಲೇ ಸಿಐಡಿ ಮುಂದೆ ಅಧಿಕೃತವಾಗಿ ತಪ್ಪೊಪ್ಪಿಕೊಂಡಿದ್ದಾರೆ ಎಂದು ಅಂತಿಮವಾಗಿ ಹೇಳಲು ತನಿಖಾ ಸಂಸ್ಥೆಗಳ ಅಧಿಕೃತ ದಾಖಲೆಗಳು ಬಹಿರಂಗವಾಗುವವರೆಗೆ ಎಚ್ಚರಿಕೆ ಅಗತ್ಯ. ಪ್ರಸ್ತುತ ಲಭ್ಯವಿರುವ ವರದಿಗಳಲ್ಲಿ ಮಹಮದ್ ಸುಹೇಲ್ ಹೇಳಿಕೆ ಸ್ಪಷ್ಟವಾಗಿ ವರದಿಯಾಗಿದೆ.

**ಇ.ಡಿ. ದಾಳಿ, ದಾಖಲೆಗಳ ಪರಿಶೀಲನೆ:** ಪ್ರಕರಣದ ಹಣಕಾಸು ವ್ಯವಹಾರಗಳ ಆಯಾಮವನ್ನು ಪರಿಶೀಲಿಸುತ್ತಿರುವ ಜಾರಿ ನಿರ್ದೇಶನಾಲಯ ಆಗಸ್ಟ್‌ನಲ್ಲಿ ಕರ್ನಾಟಕ ಮತ್ತು ಅಹಮದಾಬಾದ್ ಸೇರಿದಂತೆ ಒಟ್ಟು 21 ಸ್ಥಳಗಳಲ್ಲಿ ಶೋಧ ನಡೆಸಿತ್ತು.

ಕಚೇರಿ, ಅಮಾನತು ಗೊಂಡಿದ್ದ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರ ನಿವಾಸ, ಸದಸ್ಯರು, ಕೆಲವು ಆಯ್ಕೆಯಾದ ಅಭ್ಯರ್ಥಿಗಳು ಹಾಗೂ ಪರೀಕ್ಷೆಯ ಡಿಜಿಟಲ್ ಮೌಲ್ಯಮಾಪನಕ್ಕೆ ಸಂಬಂಧಿಸಿದ ಸಂಸ್ಥೆಗಳ ಸ್ಥಳಗಳಲ್ಲೂ ಶೋಧ ನಡೆದಿತ್ತು.

### ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಎಇಇ ಹುದ್ದೆ ನೇಮಕದಲ್ಲಿ ಅಕ್ರಮ

# ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಕಚೇರಿಗೆ ಜೆಡಿಎಸ್ ಕಾರ್ಯಕರ್ತರ ಮುತ್ತಿಗೆ ಯತ್ನ

**ಪ್ರತಿಭಟನೆ ತಡೆದ ಪೊಲೀಸರ ವಿರುದ್ಧ**

**ಎಚ್.ಎಂ. ರಮೇಶ್ ಗೌಡ ಕಿಡಿ**




**ಬೆಂಗಳೂರು, ಸೆ.1:** ಸಹಾಯಕ ಎಕ್ಸಿಕ್ಯೂಟೀವ್ ಎಂಜಿನಿಯರ್ ಗ್ರೇಡ್ 1 ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಯಲ್ಲಿ ನಡೆದಿರುವ ಅಕ್ರಮದಲ್ಲಿ ಶಾಮೀಲಾಗಿರುವ ಪ್ರಿಯಾಂಕ್ ಖರ್ಗೆ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿ ಜೆಡಿಎಸ್ ಕಾರ್ಯಕರ್ತರು ಕ್ವೀನ್ಸ್ ರಸ್ತೆಯಲ್ಲಿರುವ ಪ್ರದೇಶ ಕಾಂಗ್ರೆಸ್ ಕಚೇರಿಗೆ (ಕೆಪಿಸಿಸಿ) ಮುತ್ತಿಗೆ ಹಾಕಿದರು.

ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ. ರಮೇಶ್ ಗೌಡ ನೇತೃತ್ವದಲ್ಲಿ ನಡೆದ ಈ ಮುತ್ತಿಗೆ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಅಖಂಡ ಶ್ರೀನಿವಾಸಮೂರ್ತಿ ಸೇರಿದಂತೆ ನೂರಾರು ಕಾರ್ಯಕರ್ತರು, ಮುಖಂಡರು ಭಾಗಿಯಾಗಿದ್ದರು. ಆದರೆ, ಬಹುತೇಕ ಕಾರ್ಯಕರ್ತರು ಕೆಪಿಸಿಸಿ ಕಚೇರಿ ಸಮೀಪಕ್ಕೆ ಬಾರದಂತೆ ಅಲ್ಲಲ್ಲಿ ತಡೆದರು.

ಕೆಪಿಸಿಸಿ ಕಚೇರಿಗೆ ನುಗ್ಗಲೆತ್ನಿಸಿದ ಕಾರ್ಯಕರ್ತರನ್ನು ತಡೆಬೇಲಿಗಳನ್ನು ಅಡ್ಡಲಾಗಿ ಹಾಕಿ ಪೊಲೀಸರು ತಡೆದರು. ಈ ವೇಳೆ ಪೊಲೀಸರು ಹಾಗೂ ಜೆಡಿಎಸ್ ಕಾರ್ಯಕರ್ತರ ನಡುವೆ ತೀವ್ರ ವಾಗ್ವಾದ ನಡೆಯಿತು. ಬ್ಯಾರಿಗೇಡ್ಗಳನ್ನು ನೂಕಿ ಕಚೇರಿಗೆ ನುಗ್ಗಲು ಯತ್ನಿಸಿದಾಗ ಪರಿಸ್ಥಿತಿ ಉದ್ವಿಗ್ನಗೊಂಡಿತು. ತಕ್ಷಣ ಕಾರ್ಯಪ್ರವೃತ್ತರಾದ ಪೊಲೀಸರು ಹಲವು ನಾಯಕರು ಹಾಗೂ ಕಾರ್ಯಕರ್ತರನ್ನು ವಶಕ್ಕೆ ಪಡೆದರು.

ಈ ಸಂದರ್ಭದಲ್ಲಿ ಪ್ರತಿಭಟನೆಯನ್ನು ಹತ್ತಿಕ್ಕಲು ಯತ್ನಿಸಿದ ಸರಕಾರದ ವಿರುದ್ಧ ಜೆಡಿಎಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಡಿಸಿದರು. ಈ ಸಂದರ್ಭದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಎಚ್.ಎಂ. ರಮೇಶ್ ಗೌಡರು; ನಾವು ಶಾಂತಿಯುತವಾಗಿ ಮುತ್ತಿಗೆ ಕಾರ್ಯಕ್ರಮ ಹಮ್ಮಿಕೊಂಡಿದ್ದೆವು. ಶಾಂತಿಭಂಗ ಉಂಟು ಮಾಡುವುದು ನಮ್ಮ ಉದ್ದೇಶ ಆಗಿರಲಿಲ್ಲ. ಆದರೂ ಪೊಲೀಸರು ನಮ್ಮನ್ನು ವಶಕ್ಕೆ ಪಡೆದಿರುವುದು ಸರಿಯಲ್ಲ ಎಂದರು.

ಸಾಮಾಜಿಕ ಜಾಲತಾಣಗಳಲ್ಲಿ ನಮ್ಮ ನಾಯಕರು ಮತ್ತು ಜೆಡಿಎಸ್ ಪಕ್ಷದ ಬಗ್ಗೆ ಕೆಟ್ಟದ್ದಾಗಿ ಪೋಸ್ಟ್‌ಗಳನ್ನು ಹಾಕುವುದು, ಗೋಡೆಗಳ ಮೇಲೆ ಅವಹೇಳನಕಾರಿ ಪೋಸ್ಟರ್‌ಗಳನ್ನು ಅಂಟಿಸುವುದು, ವಿಧಾನಸೌಧದ ಬಳಿ ಪೊಲೀಸರ ಮೇಲೆಯೇ ಹಲ್ಲೆ ಮಾಡಲು ಯತ್ನಿಸುವ ಕಾಂಗ್ರೆಸ್ ಪಕ್ಷದ ಮುಖಂಡರ ಮೇಲೆ ಯಾವುದೇ ಕ್ರಮ ಜರುಗಿಸದ ಪೊಲೀಸರು, ಜೆಡಿಎಸ್ ಕಾರ್ಯಕರ್ತರ ಮೇಲೆ ವೀರಾವೇಶದಿಂದ ಕೇಸು ದಾಖಲಿಸುತ್ತಾರೆ ಎಂದು ಅವರು ಕಿಡಿಕಾರಿದರು.

ಕೆಪಿಎಸ್ಸಿ ಅಕ್ರಮಗಳಲ್ಲಿ ತೊಡಗಿದ್ದು, ಅದಕ್ಕೆ ಸರಕಾರವು ಸಾಥ್ ನೀಡುತ್ತಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಪಶುಸಂಗೋಪನಾ ಇಲಾಖೆಯಲ್ಲಿ ನಡೆದಿರುವ ಅಕ್ರಮ ಆಯ್ಕೆ, ನೇಮಕಾತಿಗಳೇ ಇದಕ್ಕೆ ಕಾರಣ ಎಂದು ದೂರಿದ ರಮೇಶ್‌ಗೌಡ, ಇದಕ್ಕೆ ಸಂಬಂಧಪಟ್ಟ ಎಲ್ಲರ ತಲೆದಂಡವಾಗಬೇಕು ಎಂದು ಒತ್ತಾಯಿಸಿದರು.

ಒಂದು ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡದಿದ್ದರೆ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ಎಚ್ಚರಿಸಿದ ಅವರು; ರೆಸಾರ್ಟ್ ನಲ್ಲಿ ಪರೀಕ್ಷೆ ಬರೆದು ಅಕ್ರಮವಾಗಿ ಹುದ್ದೆ ಗಿಟ್ಟಿಸಿರುವ ಎಲ್ಲರನ್ನೂ ಕೆಲಸದಿಂದ ಕಿತ್ತೆಸೆಯಬೇಕು ಹಾಗೂ ಅದರಲ್ಲಿ ಶಾಮೀಲಾದ ಎಲ್ಲಾ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

# ಚುನಾವಣಾ ಆಯೋಗದ ಕಚೇರಿಗೆ ಮುತ್ತಿಗೆಗೆ ಯತ್ನ: ಪ್ರಕಾಶ್‌ರಾಜ್ ಸೇರಿ ಹಲವರ ಬಂಧನ

**ಬೆಂಗಳೂರು, ಸೆ.1:** ರಾಜ್ಯದ ಅರ್ಹ ಮತದಾರರ ಮತಹರಣ ಖಂಡಿಸಿ ಎಸ್ಐಆರ್ ವಿರೋಧಿ ಒಕ್ಕೂಟ ಹಮ್ಮಿಕೊಂಡಿದ್ದ ಚುನಾವಣಾ ಆಯೋಗ ಚಲೋ ಹೋರಾದಲ್ಲಿ ಭಾಗವಹಿಸಿದ್ದ ನಟ ಪ್ರಕಾಶ್ ರಾಜ್ ಸೇರಿದಂತೆ ನೂರಾರು ಎಸ್ಐಆರ್ ಸಂತ್ರಸ್ತರು, ಹೋರಾಟಗಾರರು, ಚಿಂತಕರನ್ನು ಪೊಲೀಸರು ಬಂಧಿಸಿದರು.



ಫ್ರೀಡಂ ಪಾರ್ಕಿನಲ್ಲಿ ನಡೆಯುತ್ತಿದ್ದ ಧರಣಿ ಸ್ಥಳಕ್ಕೆ ಆಗಮಿಸುವಂತೆ ಚುನಾವಣಾ ಆಯೋಗದ ಪ್ರತಿನಿಧಿ ಗಳಿಗೆ ಎಸ್ಐಆರ್ ವಿರೋಧಿ ಒಕ್ಕೂಟದಿಂದ ಆಹ್ವಾನ ನೀಡಲಾಗಿತ್ತು. ಆದರೆ, ಚುನಾವಣಾ ಆಯೋಗದಿಂದ ಸಂಬಂಧಫಟ್ಟವರು ಸ್ಥಳಕ್ಕೆ ಬಾರದ ಕಾರಣ ಪ್ರಕಾಶ್ ರಾಜ್ ಮತ್ತು ನಾಗರಿಕ ಸಂಘಟನೆಗಳ ಮುಕಂಡರ ನೇತೃತ್ವದಲ್ಲಿ ಸಂತ್ರಸ್ತರು ಆಯೋಗಕ್ಕೆ ಮುತ್ತಿಗೆ ಹಾಕಲು ಯತ್ನಿಸಿದರು.

ಯಾವೊಬ್ಬ ಮತದಾರರನ್ನೂ ಸಾಕಷ್ಟು ಸಮರ್ಥ ಕಾರಣವಿಲ್ಲದೆ ಮತದಾರರ ಪಟ್ಟಿಯಿಂದ ಹೊರದಬ್ಬ ಬಾರದು. ಡಿಲೀಟ್ ಮಾಡಲಾಗಿರುವ ಮಾತದಾರರಿಗೂ ಅಪೀಲ್ ಸಲ್ಲಿಸಿ ಸೇರ್ಪಡೆಗೊಳ್ಳಲು ಅವಕಾಶ ವಿಸ್ತರಿಸಬೇಕು. ಅರ್ಹ ಮತದಾರರನ್ನೂ ಒಳತರಲು ಪ್ರತಿ ಬೂತಿನ ಪ್ರತಿ ಮನೆಯನ್ನೂ ತಲುಪುವ ವಿಶೇಷ ಆಂದೋಲನ ನಡೆಸಬೇಕು.

ನೋಟೀಸ್ ನೀಡುತ್ತಿರುವ 43 ಲಕ್ಷಮತದಾರರ ಹೆಸರುಗಳನ್ನು ಕಾರಣದ ಸಮೇತ ಪ್ರಕಟಿಸಬೇಕು. ಅವರನ್ನು ಅಪರಾಧಿಗಳಂತೆ ನಡೆಸಿ ಕೊಳ್ಳಬಾರದು. ಎರಡು ದಾಖಲೆಗಳಿ ಗಿಂತ ಹೆಚ್ಚು ದಾಖಲೆ ಕೇಳಬಾರದು. ಗ್ರಾಮ ಮತ್ತು ವಾರ್ಡ್ ಸಭೆಗಳನ್ನು ಕ್ರಮಬದ್ಧವಾಗಿ, ಸಾಕಷ್ಟು ಪ್ರಚಾರ ನೀಡಿ, ಅರ್ಥಪೂರ್ಣ ರೀತಿಯಲ್ಲಿ ನಡೆಸಬೇಕು. ಚುನಾವಣೆಗೆ ಸಾಕಷ್ಟು ಸಮಯ ಇರುವುದ ರಿಂದ ಆಕ್ಷೇಪಣೆ ಮತ್ತು ಮನವಿ ಸಲ್ಲಿಸುವ ಅವಧಿಯನ್ನು ಆರು ತಿಂಗಳಕಾಲ ವಿಸ್ತರಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಪ್ರಜಾಪ್ರಭುತ್ವದ ಹಕ್ಕು ಕಸಿಯುವ ಹುನ್ನಾರ: ನಟ ಕಿಶೋರ್



ದೇಶದ ಶ್ರೀಮಂತರ ಮತವಾಗಲಿ, ಬಡ ರೈತ–ಕಾರ್ಮಿಕರ ಮತವಾಗಲಿ ಎಲ್ಲವೂ ಒಂದೇ. ಪ್ರತಿಯೊಬ್ಬರ ಮತಕ್ಕೂ ಸಮಾನ ಮೌಲ್ಯವಿರುವ ಪ್ರಜಾಪ್ರಭುತ್ವದ ಈ ಹಕ್ಕನ್ನೇ ಕಿತ್ತುಕೊಳ್ಳುವ ಹುನ್ನಾರ ನಡೆಯುತ್ತಿದೆ ಎಂದು ನಟ ಕಿಶೋರ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಎಸ್ಐಆರ್ ವಿರೋಧಿ ಕರ್ನಾಟಕ ವೇದಿಕೆ ಆಯೋಜಿಸಿದ್ದ ಚುನಾವಣಾ ಆಯೋಗ ಚಲೋ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಮತದಾನದ ಹಕ್ಕು ದೇಶದ ಪ್ರತಿಯೊಬ್ಬರನ್ನೂ ಸಮಾನವಾಗಿ ನಿಲ್ಲಿಸುವ ಅಸ್ತ್ರವಾಗಿದೆ ಎಂದು ಹೇಳಿದರು. ಎಸ್ಐಆರ್ ಹಿಂದೆ ಇರುವ ಉದ್ದೇಶವನ್ನು ಜನರು ಅರ್ಥಮಾಡಿಕೊಳ್ಳಬೇಕು ಎಂದು ಕರೆ ನೀಡಿದ ಕಿಶೋರ್, ಆರ್‌ಎಸ್‌ಎಸ್ ಮತ್ತು ಬಿಜೆಪಿ ದೇಶದ ಸಂವೇದನೆಯನ್ನು ಬದಲಿಸಿ, ಮನುಸ್ಮೃತಿಯನ್ನು ಸಂವಿಧಾನವನ್ನಾಗಿ ಮಾಡುವ ಷಡ್ಯಂತ್ರ ರೂಪಿಸುತ್ತಿವೆ ಎಂದು ಗಂಭೀರ ಆರೋಪ ಮಾಡಿದರು. ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕುವ ಮೂಲಕ ಅವರ ಮತದಾನದ ಹಕ್ಕನ್ನು ಕಸಿದುಕೊಳ್ಳಲಾಗುತ್ತಿದೆ. ಮತ್ತೊಂದೆಡೆ ತಮ್ಮ ವೋಟ್‌ಬ್ಯಾಂಕ್‌ಗೆ ಸೇರಿದವರ ಮತಗಳನ್ನು ಮಾತ್ರ ಉಳಿಸಿಕೊಂಡು, ಶಾಶ್ವತವಾಗಿ ಅಧಿಕಾರದಲ್ಲಿ ಮುಂದುವರಿಯುವ ಹುನ್ನಾರ ನಡೆಯುತ್ತಿದೆ ಎಂದು ದೂರಿದರು.

# ಮಾಫಿಸಾಕ್ಷಿಗೆ ಅನುಮತಿ: ಕೆಳ ನ್ಯಾಯಾಲಯದ ಆದೇಶ ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ನಟ ದರ್ಶನ್ ಅರ್ಜಿ

**ಬೆಂಗಳೂರು, ಸೆ.1:** ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಹ–ಆರೋಪಿ ಪ್ರದೋಷ್‌ಗೆ ಮಾಫಿ ಸಾಕ್ಷಿಯಾಗಲು ಅನುಮತಿ ನೀಡಿದ ಕೆಳ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಆರೋಪಿ ನಟ ದರ್ಶನ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಕೊಲೆ ಪ್ರಕರಣದ 14ನೇ ಆರೋಪಿ ಪ್ರದೋಷ್ ಅವರನ್ನು ಮಾಫಿ ಸಾಕ್ಷಿಯನ್ನಾಗಿ ಅಂಗೀಕರಿಸಿದ ಬೆಂಗಳೂರಿನ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯದ ಆದೇಶ ಪ್ರಶ್ನಿಸಿ ದರ್ಶನ್ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದಾರೆ.

ಸಾಕ್ಷಿಯ ವಿಚಾರಣೆ ಬುಧವಾರ ನಿಗದಿಯಾಗಿದೆ ಎಂದು ಉಲ್ಲೇಖಿಸಿ



ನಟನ ಪರ ವಕೀಲರು ಮಂಗಳವಾರ ತುರ್ತು ವಿಚಾರಣೆ ಕೋರಿದರು. ಆದರೆ, ತಕ್ಷಣದ ವಿಚಾರಣೆಗೆ ಮಾಡಿದ ಮನವಿಯನ್ನು ತಿರಸ್ಕರಿಸಿದ ಹೈಕೋರ್ಟ್, ಅರ್ಜಿಯನ್ನು ಬುಧ ವಾರಕ್ಕೆ ಮುಂದೂಡಿತು. ಪ್ರದೋಷ್ ಅವರು ಮಾಫಿ ಸಾಕ್ಷಿಯಾಗಲು ಅರ್ಜಿ ಸಲ್ಲಿಸಿದ್ದನ್ನು ವಿಚಾರಣಾ ನ್ಯಾಯಾಲಯವು ಈ ಹಿಂದೆ ಒಪ್ಪಿಕೊಂಡಿತ್ತು ಮತ್ತು ಸದ್ಯ ಅವರ ಸಾಕ್ಷ್ಯದ ಪರೀಕ್ಷೆಯನ್ನು ನಡೆಸುತ್ತಿದೆ.

ದರ್ಶನ್ ಅಭಿಮಾನಿಯಾಗಿದ್ದ ಚಿತ್ರದುರ್ಗದ ನಿವಾಸಿ 33 ವರ್ಷದ ರೇಣುಕಾಸ್ವಾಮಿ ಕೊಲೆಗೆ ಸಂಬಂಧಿಸಿದ ಪ್ರಕರಣ ಇದಾಗಿದ್ದು, ಅವರ ಶವವು ಜೂನ್ 9, 2024 ರಂದು ಬೆಂಗಳೂರಿನ ಕಾಮಾಕ್ಷಿಪಾಳ್ಯದಲ್ಲಿ ಪತ್ತೆಯಾಗಿತ್ತು.

ಇದಕ್ಕೂ ಮೊದಲು, ಪ್ರದೋಷ್ ಬೆಂಗಳೂರಿನ 59ನೇ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯದಲ್ಲಿ ಕ್ರಿಮಿನಲ್ ಪ್ರಕ್ರಿಯಾ ಸಂಹಿತೆಯ ಸೆಕ್ಷನ್ 307ರ ಅಡಿಯಲ್ಲಿ 11 ಪುಟಗಳ ಅರ್ಜಿ ಸಲ್ಲಿಸಿ, ಆಪಾದಿತ ಕೊಲೆ, ಸಾಕ್ಷ್ಯಗಳ ವಿಲೇ ವಾರಿ ಮತ್ತು ಎಲ್ಲ ಸಹ–ಆರೋಪಿಗಳ ಪಾತ್ರಗಳ ಬಗ್ಗೆ 'ಪೂರ್ಣ ಮತ್ತು ಸತ್ಯ'ವನ್ನು ಹೇಳುವುದಾಗಿ ಪ್ರಸ್ತಾಪಿಸಿದರು.

# ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಶಿವಾನಂದ ತಗಡೂರಿಗೆ ಕೆಯುಡಬ್ಲ್ಯೂಜೆ ಭಾವಪೂರ್ಣ ಅಭಿನಂದನೆ

**ಬೆಂಗಳೂರು, ಸೆ.1:** ನಾಟಕ ಅಕಾಡೆಮಿ ಪ್ರಶಸ್ತಿಗೆ ಭಾಜನರಾಗಿರುವ ರಂಗಕರ್ಮಿ ಹಾಗೂ ಹಿರಿಯ ಪತ್ರಕರ್ತ ಶಿವಾನಂದ ತಗಡೂರು ಅವರನ್ನು ಹತ್ತು ಸಾವಿರ ಪತ್ರಕರ್ತರ ಸಾಂಘಿಕ ಶಕ್ತಿಯಾಗಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಭಾವಪೂರ್ಣವಾಗಿ ಅಭಿನಂದಿಸಿತು.




ಸೋಮವಾರ ನಗರದ ಕಂದಾಯ ಭವನದಲ್ಲಿರುವ ಡಿವಿಜಿ ಸಭಾಂಗಣದಲ್ಲಿ ನಡೆದ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ಶಿವಾನಂದ ತಗಡೂರು ಅವರಿಗೆ ಅಭಿನಂದನೆ ಸಲ್ಲಿಸುವುದರ ಜೊತೆಗೆ, ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಿದ ಕರ್ನಾಟಕ ನಾಟಕ ಅಕಾಡೆಮಿಗೂ ಅಭಿನಂದನೆ ಸೂಚಿಸುವ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು.

ಬಳಿಕ ನಡೆದ ಅಭಿನಂದನಾ ಸಮಾರಂಭದಲ್ಲಿ ಹಿರಿಯ ಪತ್ರಕರ್ತ ಎನ್. ರವಿಕುಮಾರ್ ಮಾತನಾಡಿ, ಶಿವಾನಂದ ತಗಡೂರು ಅವರನ್ನು ಬಹುತೇಕರು ಪತ್ರಕರ್ತರಾಗಿ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಮಾತ್ರ ಗುರುತಿಸುತ್ತಾರೆ. ಆದರೆ ಅವರೊಳಗೆ ಬದುಕಿರುವ ಸಮರ್ಪಿತ ರಂಗಕಲಾವಿದನನ್ನು ಅಷ್ಟಾಗಿ ಅರಿತಿಲ್ಲ, ಎಂದು ಹೇಳಿದರು.

ಶಿವಾನಂದ ತಗಡೂರು ಪತ್ರಿಕೋದ್ಯಮಕ್ಕೆ ಬರುವ ಮುನ್ನವೇ ಜನಪರ ಚಳವಳಿಗಳ ಸಕ್ರಿಯ ಭಾಗವಾಗಿದ್ದರು. ರೈತ ಚಳವಳಿ, ಬಾಗೂರು–ನವಿಲೆ ಹೋರಾಟ ಸೇರಿದಂತೆ ಅನೇಕ ಜನಾಂದೋಲನಗಳಲ್ಲಿ ಹೆಜ್ಜೆ ಹಾಕಿದ ಅವರು, ಸಾಮಾಜಿಕ ಪರಿವರ್ತನೆಗಾಗಿ ರಂಗಭೂಮಿಯನ್ನು ಪರಿಣಾಮಕಾರಿ ಮಾಧ್ಯಮವನ್ನಾಗಿ ಬಳಸಿಕೊಂಡವರು, ಎಂದು ಅವರು ಸ್ಮರಿಸಿದರು.

ಪರದೆ ಮುಂದೆ ಮತ್ತು ಪರದೆ ಹಿಂದೆ ಸಮಾನವಾಗಿ ದುಡಿದಿರುವ ಶಿವಾನಂದ ತಗಡೂರು ಬಹುಮುಖ ಪ್ರತಿಭೆಯ ವ್ಯಕ್ತಿತ್ವ ಹೊಂದಿದ್ದಾರೆ. ತಮ್ಮ ಪ್ರತಿಭೆಯನ್ನು ಸಮಾಜದ ಒಳಿತಿಗೆ ಮುಡುಪಾಗಿಟ್ಟಿರುವ ಅವರ ಬದುಕು ರಂಗಭೂಮಿಯ ಮೇಲಿನ ಬದ್ಧತೆ, ನಿಷ್ಠೆ ಮತ್ತು ಸೇವೆಯ ಪ್ರತೀಕವಾಗಿದೆ. ಇಂತಹ ಸೇವೆಯನ್ನು ಗುರುತಿಸಿ ನಾಟಕ ಅಕಾಡೆಮಿ ಪ್ರಶಸ್ತಿ ನೀಡಿರುವುದು ಅತ್ಯಂತ ಸಾರ್ಥಕ ವಾಗಿದೆ ಅವರು ಅಭಿಪ್ರಾಯಪಟ್ಟರು.

ಈ ಪ್ರಶಸ್ತಿ ವೈಯಕ್ತಿಕವಾಗಿ ಶಿವಾನಂದ ತಗಡೂರು ಅವರಿಗೆ ಸಂದ ಗೌರವ ಮಾತ್ರವಲ್ಲ, ರಾಜ್ಯದ ಎಲ್ಲ ಕಾರ್ಯನಿರತ ಪತ್ರಕರ್ತರಿಗೆ ಸಂದಿರುವ ಗೌರವವೂ ಹೌದು. ಇದರಿಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಘನತೆ ಮತ್ತಷ್ಟು ಹೆಚ್ಚಿದೆ. ಈ ಗೌರವ ನೀಡಿದ ಕರ್ನಾಟಕ ನಾಟಕ ಅಕಾಡೆಮಿಗೆ ಏಗಿಘಎ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸುತ್ತೇವೆ, ಎಂದು ಎನ್. ರವಿಕುಮಾರ್ ಹೇಳಿದರು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯ ಪತ್ರಕರ್ತರು ಶಿವಾನಂದ ತಗಡೂರು ಅವರನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ KUWJ ಹಿರಿಯ ಉಪಾಧ್ಯಕ್ಷ ಹೆಚ್. ಬಿ. ಮದನಗೌಡ ಮಾತನಾಡಿ ಎಂದೋ ಬರಬೇಕಾಗಿದ್ದ ಇಂದು ಬಂದಿದೆ. ಇದು ಸಂಘಕ್ಕೊಂದು ಗರಿಮೆ ಎಂದರು. ರಾಜ್ಯ ಉಪಾಧ್ಯಕ್ಷ ಮತ್ತಿಕೆರೆ ಜಯರಾಮ್ , ರಮೇಶ್ ಅಜ್ಜಮಾಡ ಕುಟ್ಟಪ್ಪ, ಪ್ರಧಾನ ಕಾರ್ಯದರ್ಶಿ ಜಿ. ಸಿ. ಲೋಕೇಶ, ಕಾರ್ಯದರ್ಶಿಗಳಾದ ಸೋಮಶೇಖರ ಕೆರಗೋಡು, ನಿಂಗಪ್ಪ ಚಾವಡಿ, ಪುಂಡಲೀಕ ಬಾಳೋಜಿ, ಖಜಾಂಚಿ ವಾಸುದೇವ ಹೊಳ್ಳ ಸೇರಿದಂತೆ ರಾಜ್ಯ ಕಾರ್ಯಕಾರಿಣಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ವಾಲ್ಮೀಕಿ ನಿಗಮದ ನೌಕರ ಚಂದ್ರಶೇಖರನ್ ಪಿಎಫ್ ಹಣ ಪಾವತಿಗೆ ವಿಳಂಬ: ಸ್ಪಷ್ಟನೆ

**ಬೆಂಗಳೂರು, ಸೆ.1:** ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕರಾಗಿದ್ದ ಚಂದ್ರಶೇಖರನ್ ಅವರ ಕುಟುಂಬಕ್ಕೆ ನೀಡಬೇಕಾದ ಸೌಲಭ್ಯಗಳ ಕುರಿತು ಸ್ಪಷ್ಟನೆ ನೀಡಲಾಗಿದ್ದು, ಬಾಕಿ ಇರುವ ಪಿಎಫ್ ಮೊತ್ತ 3.05 ಲಕ್ಷ ರೂ. ಹೊರತುಪಡಿಸಿ ಉಳಿದ ಸೌಲಭ್ಯಗಳನ್ನು ಒದಗಿಸಲಾಗಿದೆ. ಮೈಸೂರಿನ ಪೇಪರ್ ಮಿಲ್‌ನಿಂದ ಚಂದ್ರಶೇಖರನ್‌ರನ್ನು ವಾಲ್ಮೀಕಿ ಅಭಿವೃದ್ಧಿ ನಿಗಮಕ್ಕೆ ವಿಲೀನಗೊಳಿಸಲಾಗಿತ್ತು. ಅಕ್ರಮ ಹಣ ವರ್ಗಾವಣೆ ಘಟನೆ ಹಿನ್ನೆಲೆಯಲ್ಲಿ ಹಣಕಾಸು ಇಲಾಖೆಯ ನಿರ್ದೇಶನದಂತೆ ಎಲ್ಲಾ ಬ್ಯಾಂಕ್ ಖಾತೆಗಳನ್ನು ಸ್ಥಗಿತ ಗೊಳಿಸಲಾಗಿತ್ತು. ನಂತರ ನೌಕರರ ಶಾಸನಬದ್ಧ ಕಡಿತಗಳ ಮೊತ್ತವನ್ನು ಜಮಾ ಮಾಡುವ ಉದ್ದೇಶಕ್ಕಾಗಿ ಬ್ಯಾಂಕ್ ಖಾತೆ ತೆರೆಯಲು ಅನುಮತಿ ನೀಡಲಾಯಿತು. ಬ್ಯಾಂಕ್ ಖಾತೆಯನ್ನು ತೆರೆಯಲಾಗಿದೆ. ಬಾಕಿ ಇರುವ 3.05 ಲಕ್ಷ ರೂ. ಪಿಎಫ್ ಮೊತ್ತವನ್ನು ಸಹ ಶೀಘ್ರದಲ್ಲೇ ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯು ಪ್ರಕಟಣೆಯಲ್ಲಿ ತಿಳಿಸಿದೆ.

# ಎಸ್ಐಆರ್‌ಗೆ ಆರು ತಿಂಗಳು ಕಾಲಾವಕಾಶ ನೀಡಿ: ನೂರ್ ಶ್ರೀಧರ್

**ಬೆಂಗಳೂರು,ಸೆ.1:** ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಗೆ ಆರು ತಿಂಗಳ ಕಾಲಾವಕಾಶ ನೀಡಬೇಕು, ಮತದಾರರ ಪಟ್ಟಿಯಿಂದ ಹೆಸರು ಕೈಬಿಡಲಾಗಿರುವವರಿಗೂ ಮೇಲ್ಮನವಿ ಸಲ್ಲಿಸಿ ಮತ್ತೆ ಸೇರ್ಪಡೆಯಾಗಲು ಅವಕಾಶ ಕಲ್ಪಿಸಬೇಕು ಸೇರಿದಂತೆ ಹಲವು ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟುಕೊಂಡು ನಾಗರಿಕ ಸಮಾಜ ಹಾಗೂ ಹೋರಾಟಗಾರರು ಸರ್ಕಾರ ಮತ್ತು ಚುನಾವಣಾ ಆಯೋಗದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಕ್ಕೊತ್ತಾಯ ಮಂಡಿಸಿದ ನೂರ್ ಶ್ರೀಧರ್, ಎಸ್.ಐ.ಆರ್ ಪ್ರಕ್ರಿಯೆಯನ್ನು ತರಾತುರಿಯಲ್ಲಿ ಪೂರ್ಣಗೊಳಿಸುವ ಬದಲು ಆಕ್ಷೇಪಣೆ ಮತ್ತು ಮೇಲ್ಮನವಿಗೆ ಸಾಕಷ್ಟು ಕಾಲಾವಕಾಶ ನೀಡಬೇಕು ಎಂದು ಆಗ್ರಹಿಸಿದರು.

ಡಿಲೀಟ್ ಮಾಡಲಾಗಿರುವ ಮತದಾರರಿಗೂ ಅಪೀಲ್ ಮಾಡುವ ಅವಕಾಶ ನೀಡಬೇಕು. ದಾಖಲೆಗಳನ್ನು ಸಿದ್ಧಪಡಿಸಿ ಸಲ್ಲಿಸಲು ಜನರಿಗೆ ಸಮಯ ಬೇಕು. ಹೀಗಾಗಿ ಇಡೀ ಪ್ರಕ್ರಿಯೆಗೆ ಒಟ್ಟು ಆರು ತಿಂಗಳ ಕಾಲಾವಕಾಶ ನೀಡಬೇಕು ಎಂಬುದು ನಮ್ಮ ಪ್ರಮುಖ ಬೇಡಿಕೆ ಎಂದು ಹೇಳಿದರು

ಜನರಲ್ಲಿರುವ ಗೊಂದಲ ಮತ್ತು ಸಮಸ್ಯೆಗಳನ್ನು ಚುನಾವಣಾ ಆಯೋಗ ನೇರವಾಗಿ ಆಲಿಸಬೇಕು ಎಂದು ನೂರ್ ಶ್ರೀಧರ್ ಒತ್ತಾಯಿಸಿದರು. ನಾವು ಜನರನ್ನು ಸುಮ್ಮನೆ ಸೇರಿಸಿಲ್ಲ. ರಾಜ್ಯದ ವಿವಿಧ ಜಿಲ್ಲೆಗಳಿಂದ ಪ್ರತಿನಿಧಿಗಳು ಇಲ್ಲಿಗೆ ಬಂದಿದ್ದಾರೆ. ಸುಮಾರು 20 ಜಿಲ್ಲೆಗಳ ಪ್ರತಿನಿಧಿಗಳು ನಮ್ಮೊಂದಿಗಿದ್ದಾರೆ. ಚುನಾವಣಾ ಆಯೋಗದ ಅಧಿಕಾರಿಗಳು ಸ್ಥಳಕ್ಕೆ ಬಂದು ಇವರ ಸಮಸ್ಯೆಗಳನ್ನು ನೇರವಾಗಿ ಕೇಳಬೇಕು. ಆಗ ಮಾತ್ರ ನೆಲದ ವಾಸ್ತವ ಸ್ಥಿತಿ ಅವರಿಗೆ ಅರ್ಥವಾಗುತ್ತದೆ ಎಂದರು.

ಚುನಾವಣಾ ಆಯೋಗದ ಕಚೇರಿಗೆ ತೆರಳಿದಾಗ ಕೇವಲ ಮೂವರು ಪ್ರತಿನಿಧಿಗಳಿಗೆ ಮಾತ್ರ ಮಾತನಾಡಲು ಅವಕಾಶ ನೀಡಲಾಗುತ್ತಿದೆ ಎಂದು ಆಕ್ಷೇಪಿಸಿದ ಅವರು, ಚರ್ಚೆ ಸಾರ್ವಜನಿಕವಾಗಿ



ಮತ್ತು ಕ್ಯಾಮೆರಾಗಳ ಮುಂದೆ ನಡೆಯಬೇಕು ಎಂದು ಆಗ್ರಹಿಸಿದರು.

ಮೂರು ಜನರನ್ನು ಒಳಗೆ ಕರೆಸಿಕೊಂಡು ಅವರ ಮಾತು ಕೇಳಿ, ಬಳಿಕ ನಮ್ಮ ಪ್ರಶ್ನೆಗಳಿಗೆ ಉತ್ತರ ಸಿಗಲಿಲ್ಲ ಎಂದು ಹೇಳುವ ವ್ಯವಸ್ಥೆ ಸಾಕಾಗಿದೆ. ಚುನಾವಣಾ ಆಯೋಗ ತನ್ನ ಉತ್ತರವನ್ನು ಸಾರ್ವಜನಿಕವಾಗಿ ನೀಡಬೇಕು. ನಾವು ಹೇಳುತ್ತಿರುವುದು ತಪ್ಪಾಗಿದ್ದರೆ, ಅದು ಏಕೆ ತಪ್ಪು ಎಂಬುದನ್ನು ತರ್ಕಬದ್ಧವಾಗಿ ವಿವರಿಸಬೇಕು. ಕೇವಲ ನಿಯಮದಲ್ಲಿ ಇದೆ ಎಂಬ ಉತ್ತರ ನೀಡಿದರೆ ಸಾಲದು ಎಂದು ನೂರ್ ಶ್ರೀಧರ್ ಹೇಳಿದರು.

ಚುನಾವಣಾ ಆಯೋಗದ ಅಧಿಕಾರಿಗಳು ಸ್ಥಳಕ್ಕೆ ಬಾರದಿದ್ದರೂ ಹೋರಾಟಗಾರರು ಶಾಂತಿಯುತವಾಗಿ ಆಯೋಗದ ಕಚೇರಿಗೆ ತೆರಳಿ ತಮ್ಮ ಬೇಡಿಕೆಗಳನ್ನು ಮಂಡಿಸುವುದಾಗಿ ತಿಳಿಸಿದರು.

**ಅಗತ್ಯವಿದ್ದರೆ ಜೈಲಿಗೂ ಹೋಗಲು ಸಿದ್ಧ:** ಹೋರಾಟವನ್ನು ಮುಂದುವರಿಸುವ ಎಚ್ಚರಿಕೆ ನೀಡಿದ ನೂರ್ ಶ್ರೀಧರ್, ಬೇಡಿಕೆಗಳ ಕುರಿತು ಸ್ಪಷ್ಟ ನಿರ್ಧಾರವಾಗುವವರೆಗೆ ಪ್ರತಿಭಟನೆಯಿಂದ ಹಿಂದೆ ಸರಿಯುವುದಿಲ್ಲ ಎಂದು ಹೇಳಿದರು. ಒಂದುದಿನ ರಾಜ್ಯದ ಹಿತಕ್ಕಾಗಿ ಗಟ್ಟಿ ಯಾದ ತೀರ್ಮಾನ ಮಾಡೋಣ. ಅಗತ್ಯವಿದ್ದರೆ ಒಂದು ದಿನ ಜೈಲಿನಲ್ಲಿ ಕಳೆದರೂ ಏನೂ ಆಗುವುದಿಲ್ಲ. ನಮ್ಮ ಬೇಡಿಕೆಗಳ ಕುರಿತು ತೀರ್ಮಾನವಾಗುವವರೆಗೆ ನಾವು ಜೈಲಿಗೆ ಹೋಗಲೂ ಸಿದ್ಧರಿದ್ದೇವೆ ಎಂದು ಎಚ್ಚರಿಕೆ ನೀಡಿದರು. ಪ್ರತಿಭಟನಾಕಾರರನ್ನು ಬಂಧಿಸುವ ಪರಿಸ್ಥಿತಿ ಎದುರಾದರೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ಅವರು ತಿಳಿಸಿದರು. ಪೊಲೀಸ್ ಇಲಾಖೆ ಮತ್ತು ಸರ್ಕಾರಕ್ಕೂ ಈ ಕುರಿತು ಮಾಹಿತಿ ನೀಡಲಾಗಿದೆ ಎಂದು ಹೇಳಿದರು.

# ಬರ ಘೋಷಣೆ ಅವೈಜ್ಞಾನಿಕ, ಅಸಮರ್ಪಕ: ಬಿಜೆಪಿ ರೈತಮೋರ್ಚಾ ಗ್ರಾಮ ಚಲೋ ಹೋರಾಟಕ್ಕೆ ಸಿದ್ಧ - ನಡಹಳ್ಳಿ

**ವಿಜಯಪುರ, ಸೆ. 1:** ರಾಜ್ಯದ 239 ತಾಲೂಕುಗಳಲ್ಲಿಯೂ ಬರ ಇದೆ ಎಂದು ಒಪ್ಪಿಕೊಂಡ ಸರ್ಕಾರವೇ ಕೇವಲ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿರುವುದು ವಿಷಾದಕರ. ಸ್ವತಃ ಕಂದಾಯ ಸಚಿವರೇ ರಾಜ್ಯದಲ್ಲಿ ಶೇ. 30 ರಷ್ಟು ಮಳೆ ಕೊರತೆಯಾಗಿದೆ ಎಂದು ಹೇಳಿದ್ದಾರೆ. ಅಂಥದರಲ್ಲಿ ಕಾಟಾಚಾರಕ್ಕೆ, ಯಾವುದೇ ಮಾನದಂಡವಿಲ್ಲದೇ, ಬೇಕಾಬಿಟ್ಟಿಯಾಗಿ, ವೈಜ್ಞಾನಿಕವಾಗಿ ಸಮೀಕ್ಷೆ ನಡೆಸದೇ ಬರ ಘೋಷಣೆ ಮಾಡಿರುವುದು ಖಂಡನೀಯ ಎಂದು ಬಿಜೆಪಿ ರೈತ ಮೋರ್ಚಾದ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಹೇಳಿದರು.

ಇಡೀ ರಾಜ್ಯದಲ್ಲಿ ಸುಮಾರು 90 ಲಕ್ಷ ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. 84.4 ಲಕ್ಷ ಹೆಕ್ಟರ್ ಪ್ರದೇಶದಲ್ಲಿ ತೇವಾಂಶದ ಕೊರತೆಯಿಂದ ಬೆಳೆ ಹಾನಿಯಾಗುವ ಹಂತದಲ್ಲಿದೆ ಎಂದು ಕಂದಾಯ ಸಚಿವರೇ ಹೇಳಿದ್ದಾರೆ. ಒಟ್ಟು ಬಿತ್ತನೆ ಪ್ರದೇಶ 1.20 ಕೋಟಿ ಹೆಕ್ಟರ್ ಪೈಕಿ ಮುಂಗಾರಿಗೆ 90 ಲಕ್ಷ ಹೆಕ್ಟರ್ ಬೆಳೆ ಹಾನಿಯಾಗಿದೆ. ಆಶ್ಚರ್ಯ ಎಂದರೆ ಉತ್ತರ ಕರ್ನಾಟಕದ 91 ತಾಲೂಕು ಬರ ಎದುರಿಸುತ್ತಿದ್ದರೆ ಕೇವಲ 22 ತಾಲೂಕುಗಳಲ್ಲಿ ಬರ ಘೋಷಿಸಲಾಗಿದೆ. ಕಲಬುರಗಿ, ಶಿವಮೊಗ್ಗ ಜಿಲ್ಲೆಗಳಲ್ಲಿಯೂ ಬರ ಘೋಷಣೆ ಮಾಡಿಲ್ಲ. ಮಂಡ್ಯ, ತುಮಕೂರ, ಚಾಮರಾಜ ನಗರ, ಕೋಲಾರ, ಚಿಕ್ಕಬಳ್ಳಾಪುರ ಮುಂತಾದ ಕಡೆ ಬಹುತೇಕ ಘೋಷಣೆಯಾಗಿದೆ. ಇದು ಯಾವ ಮಾನದಂಡ ಎಂದು ಶನಿವಾರ ಸುದ್ದಿಗೋಷ್ಠಿಯಲ್ಲಿ ಪ್ರಶ್ನಿಸಿದರು.

ಬರ ಘೋಷಣೆ ವಿಚಾರದಲ್ಲಿ ಮಂತ್ರಿಗಳಿರುವ ಕ್ಷೇತ್ರಕ್ಕೆ ಹೆಚ್ಚು ಆದ್ಯತೆ ನೀಡಲಾಗಿದೆ. ರಾಜೀನಾಮೆ ಕೊಡುತ್ತೇನೆ ಎನ್ನುವವರು, ಸಿಎಂ, ಉಸ್ತುವಾರಿ ಸಚಿವರನ್ನು ಭೇಟಿಯಾಗದೇ ಇರುವ ಶಾಸಕರ ಕ್ಷೇತ್ರ ಕೈಬಿಡಲಾಗಿದೆ. ಅವರು ಬಂದು ಭೇಟಿ ಮಾಡಲಿ ಎಂಬ ಕಾರಣಕ್ಕಾಗಿಯೋ ಏನೋ ಗೊತ್ತಿಲ್ಲ ಎಂದು ಲೇವಡಿ ಮಾಡಿದರು.

**ಕೇಂದ್ರದ ಮೇಲೆ ಗೂಬೆ ಕೂರಿಸಬೇಡಿ:** ನಾವಿಂದು ಒಕ್ಕೂಟ ವ್ಯವಸ್ಥೆಯಲ್ಲಿದ್ದೇವೆ. ರಾಜ್ಯ ಸರ್ಕಾರ ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಿ ವರದಿ ನೀಡದೇ ಕೇಂದ್ರ ಸರ್ಕಾರ ಬರ ಘೋಷಿಸಲು ಆಗಲ್ಲ. ಮೊದಲು ರಾಜ್ಯ ಸರ್ಕಾರ ತನ್ನ ಪಾತ್ರ ನಿಭಾಯಿಸಲಿ. ಬಳಿಕ ಕೇಂದ್ರ ಸರ್ಕಾರ ಪರಿಹಾರ ಕೊಡಲಿದೆ. ಅದಕ್ಕೆ ಬಿಜೆಪಿ ಸಂಪೂರ್ಣ ಸಹಕಾರ ನೀಡಲಿದೆ. ಇದರಲ್ಲಿ ರಾಜಕೀಯ



ಮಾಡಲು ನಾವು ತಯಾರಿಲ್ಲ. ಅದಕ್ಕೂ ಮೊದಲು ರಾಜ್ಯ ಸರ್ಕಾರ ತನ್ನ ಜವಾಬ್ದಾರಿ ನಿಭಾಯಿಸಲಿ. ಬಳಿಕ ಕೇಂದ್ರ ಸರ್ಕಾರ ತಂಡ ಕಳುಹಿಸಿ ಪರಿಶೀಲನೆ ನಡೆಸಿ ಪರಿಹಾರ ನೀಡಲಿದೆ. ಈ ವರ್ಷವೇ ಪರಿಹಾರ ಬಿಡುಗಡೆ ಮಾಡಲಿದೆ. ಆದರೆ, ರಾಜ್ಯ ಸರ್ಕಾರ ತಯಾರಿಸಿದ ವರದಿಯೇ ಅವೈಜ್ಞಾನಿಕವಾಗಿದೆ ಎಂದರು.

ಮಾತೆತ್ತಿದರೆ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸೋದು ನಿಲ್ಲಿಸಿ. ಮಾನದಂಡ ಬದಲಾವಣೆ ಮಾಡಲಿ ಎನ್ನುವುದನ್ನು ಬಿಡಿ. ಮೊದಲು ನಿಮ್ಮ ಜವಾಬ್ದಾರಿ ಏನೆಂಬುದನ್ನು ಸಾಬೀತುಪಡಿಸಿ. ಈ ಹಿಂದೆ ಬಿಎಸ್‌ವೈ ಸಿಎಂ ಆಗಿದ್ದಾಗ ಕೇಂದ್ರದ ತಂಡ ಬರಲಿ ಎಂದು ಕಾಯುತ್ತಾ ಕೂರಲಿಲ್ಲ. 20 ಸಾವಿರ ಕೋಟಿ ತಕ್ಷಣಕ್ಕೆ ಪರಿಹಾರ ಬಿಡುಗಡೆಗೊಳಿಸಲಾಯಿತು. 19 ಲಕ್ಷ ಹೆಕ್ಟರ್ ಪ್ರದೇಶದ ಬೆಳೆ ಹಾನಿಗೆ ಕೇಂದ್ರದ ಹಣದ ಜೊತೆಗೆ 10 ಸೇರಿಸಿ 30 ದಿನದಲ್ಲಿ ಪರಿಹಾರ ನೀಡಲಾಯಿತು. ಈ ಸರ್ಕಾರ ಬಂದ ಮೇಲೆ ನಿಯಮಾವಳಿ ಬದಲಾವಣೆ ಮಾಡಿ ಎನ್ನುವುದನ್ನು ರೂಢಿಸಿಕೊಂಡಿದೆ. ಯುಪಿಎ ಸರ್ಕಾರ ಇದ್ದಾಗ ಗರಿಷ್ಠ ಪರಿಹಾರ 4800 ರೂಪಾಯಿ ಪ್ರತಿ ಎಕರೆಗೆ ನೀಡಲಾಗಿತ್ತು. ಆದರೆ, ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಕಾರಕ್ಕೆ ಬಂದ ಮೇಲೆ ಸಕಾಲಕ್ಕೆ ಸಮರ್ಪಕವಾಗಿ ಪರಿಹಾರ ನೀಡಿದೆ. ಸಂಸತ್ ಚುನಾವಣೆಗೆ ಮುನ್ನ ರಾಜ್ಯ ಸರ್ಕಾರ ನೀಡಿದ 4047 ಕೋಟಿ ಪರಿಹಾರ ಮೊತ್ತದಲ್ಲಿ 3454 ಕೋಟಿ ರೂಪಾಯಿ ಕೇಂದ್ರದ ಪಾಲು ಆಗಿತ್ತು. ಕೇವಲ 500ಕ್ಕೂ ಅಧಿಕ ಕೋಟಿ ಮಾತ್ರ ರಾಜ್ಯ ಸರ್ಕಾರ ಕೊಟ್ಟಿತ್ತು. ಆದರೆ ಯಡಿಯೂರಪ್ಪ ಅವರು 2019ರಲ್ಲಿ 20 ಸಾವಿರ ಕೋಟಿ ಪರಿಹಾರವನ್ನು ರಾಜಸ್ವ ಖಾತೆಯಿಂದ ಕೊಟ್ಟಿದ್ದರು ಎಂದು ನಡಹಳ್ಳಿ ತಿಳಿಸಿದರು.

**ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ಬರ:** 2023ರಲ್ಲಿ ಕಾಂಗ್ರೆಸ್ ಸರ್ಕಾರ ಬಂದಾಗ ದೊಡ್ಡಮಟ್ಟದಲ್ಲಿ ಬರಗಾಲ ಬಂತು. ಈ ಬಾರಿಯೂ ಬರ ಬಂದಿದೆ. ಆಗ 195 ತಾಲೂಕು ಬರ ಎಂದು ಘೋಷಿಸಲಾಗಿತ್ತು. ಆ ಸಂದರ್ಭದಲ್ಲಿ ಏಕಕಾಲಕ್ಕೆ ಘೋಷಣೆ ಮಾಡಲಾಗಿತ್ತು. ಆಗಲೂ ಇದೇ ಮಾನದಂಡ ಇದ್ದವು. ಆದರೆ ಈ ಬಾರಿ ನಿಷ್ಕಾಳಜಿ ಬೇಜವಾಬ್ದಾರಿಯಿಂದ ಮಾಹಿತಿ ಸಂಗ್ರಹಿಸದೇ ಬೇಕಾಬಿಟ್ಟಿಯಾಗಿ ಮಾನದಂಡ ಸರಿಯಾಗಿ ಪರಿಗಣಿಸದೇ 101 ತಾಲೂಕು ಬರ ಘೋಷಿಸಲಾಗಿದೆ ಎಂದರು.

2023ರಲ್ಲಿ ಇದೇ ಸರ್ಕಾರ 195 ತಾಲೂಕುಗಳನ್ನು ಘೋಷಣೆ ಮಾಡಿತ್ತು. ಆಗಲೂ ಇದೇ ನಿಯಮಾವಳಿ ಇದ್ದವಲ್ಲವೇ? ಸರ್ಕಾರ ಸಂಪೂರ್ಣವಾಗಿ ಬರಗಾಲ ತಾಲೂಕು ಗುರುತಿಸುವಲ್ಲಿ ವಿಫಲವಾಗಿದೆ. ಸಮೀಕ್ಷೆ ಅಸಮರ್ಪಕವಾಗಿದೆ. ಪೂರ್ವ ತಯಾರಿಯೂ ಇಲ್ಲ. ಬರ ಆರಂಭವಾಗಿ ಆಗಲೇ ಮೂರು ತಿಂಗಳಾಯಿತು. ಇಡೀ ರಾಜ್ಯದಲಿ ಸಿಎಂ ಒಂದು ವಿಡಿಯೋ ಸಂವಾದ ಮಾಡಿದ್ದು ಬಿಟ್ಟರೆ ಕಾಟಾಚಾರಕ್ಕ ಉಸ್ತುವಾರಿಗಳು ಒಂದು ಗ್ರಾಮಕ್ಕೆ ಹೋಗಿದ್ದು ಬಿಟ್ಟರೆ ಬರಕ್ಕೆ ಸಂಬಂಧಿಸಿದ ಒಂದೇ ಒಂದು ಸಭೆ ನಡೆಸಿಲ್ಲ. ಸಕಾಲಕ್ಕೆ ಕೆಡಿಪಿ ಸಭೆಗಳಾಗಿಲ್ಲ. ಜನರಿಗೆ ಭರವಸೆ ಕೊಡುವ ಕೆಲಸ ಮಾಡಿಲ್ಲ. ಘೋಷಿತ 101 ಬರಪೀಡಿತ ತಾಲೂಕುಗಳಲ್ಲಿಯೂ ಪೂರ್ವ ತಯಾರಿ ನಡೆಸಿಲ್ಲ. ಈಗಾಗಲೇ ರೈತರು ಮುಂಗಾರಿ ಬರಲ್ಲ ಎಂದು ಗೊತ್ತಾದ ತಕ್ಷಣ ಬೆಳೆ ತೆಗೆದಿದ್ದಾರೆ. ಶೇ.90 ರಷ್ಟು ಬೆಳೆ ತೆಗೆದು ಹಾಕಿದ್ದಾರೆ. ಇಂಥ ಸ್ಥಿತಿಯಲ್ಲಿ ಯಾವ ರೀತಿ ಬೆಳೆ ಸಮೀಕ್ಷೆ ಮಾಡುತ್ತೀರಿ. ಸರ್ಕಾರ ಬರುತ್ತದೆಂದು ಕಾಯ್ದುಕೊಂಡು ಕೂರಲಾಗುತ್ತದಾ ಎಂದು ಪ್ರಶ್ನಿಸಿದರು.

**ತಕ್ಷಣಕ್ಕೆ ಪರಿಹಾರ ಒದಗಿಸಿ:** ರಾಜ್ಯ ಸರ್ಕಾರ ಕೇಂದ್ರ ಮೇಲೆ ಗೂಬೆ ಕೂರಿಸುವುದನ್ನು ಬಿಟ್ಟು ತಕ್ಷಣಕ್ಕೆ ಸಂಕಷ್ಟದಲ್ಲಿರುವ ರೈತರ ನೆರವಿಗೆ ಸರ್ಕಾರ ಧಾವಿಸಬೇಕು. ರೈತರ ಸಾಲ ಮನ್ನಾ ಮಾಡಬೇಕು. ಬೆಳೆವಿಮೆ ಹಣ ತಕ್ಷಣಕ್ಕೆ ಪಾವತಿಸಬೇಕು. ರಾಜ್ಯದ ಬಜೆಟ್ ಗಾತ್ರಕ್ಕೆ ಅನುಗುಣವಾಗಿ ತಕ್ಷಣಕ್ಕೆ ಎಕರೆಗೆ 25 ಸಾವಿರ ರೂಪಾಯಿ ಪರಿಹಾರ ಕೊಡಬೇಕು. ರಾಜ್ಯ ಸರ್ಕಾರದ ಬಜೆಟ್ ಗಾತ್ರ ಸುಮಾರು 4.44 ಲಕ್ಷ ಕೋಟಿ ಇದೆ.

ಕೇಂದ್ರ ಸರ್ಕಾರದ ಅನುದಾನ ಸೇರಿ 50 ಸಾವಿರ ಪರಿಹಾರ ಕೊಡಬೇಕು. ತಕ್ಷಣಕ್ಕೆ ತನ್ನ 25 ಸಾವಿರ ಪರಿಹಾರ ಖಾತೆಗೆ ಜಮಾ ಮಾಡಬೇಕು. ಇದರಿಂದ ಹಿಂಗಾರಿಗಾದರೂ ಅನುಕೂಲ ವಾಗಲಿದೆ ಎಂದು ಆಗ್ರಹಿಸಿದ ನಡಹಳ್ಳಿ ಅವರು, ಪರಿಹಾರಕ್ಕಾಗಿ ರೈತ ಮೋರ್ಚಾದಿಂದ ಗ್ರಾಮ ಚಲೋ ಹೋರಾಟ ಹಮ್ಮಿಕೊಳ್ಳಲಾಗುವುದೆಂದು ತಿಳಿಸಿದರು.

# ಕಲಬುರಗಿ ಜಿಲ್ಲೆಯ ಶಾಲೆ ಬಿಟ್ಟಿದ್ದ 3065 ಮಕ್ಕಳು: ಇಲಾಖೆ ಶ್ರಮದಿಂದ ಪುನಃ ಶಿಕ್ಷಣದ ಮುಖ್ಯವಾಹಿನಿಗೆ ಬಂದ ಶೇ.85ರಷ್ಟು ಮಕ್ಕಳು

**ಕಲಬುರಗಿ, ಸೆ. 1:** ಬಡತನ, ಕುಟುಂಬದ ಆರ್ಥಿಕ ಸಂಕಷ್ಟ, ವಲಸೆ, ಬಾಲಕಾರ್ಮಿಕತೆ ಸೇರಿದಂತೆ ವಿವಿಧ ಕಾರಣಗಳಿಂದ ಶಾಲೆಯಿಂದ ದೂರವಾಗಿದ್ದ ಮಕ್ಕಳ ಬದುಕಿಗೆ ಶಿಕ್ಷಣದ ಬೆಳಕು ಮರಳಿ ತರುವಲ್ಲಿ ಜಿಲ್ಲೆಯ ಶಿಕ್ಷಣ ಇಲಾಖೆ ಗಮನಾರ್ಹ ಸಾಧನೆ ಮಾಡಿದೆ. ಕಳೆದ ಐದು ವರ್ಷಗಳಲ್ಲಿ ಶಿಕ್ಷಣದಿಂದ ಹೊರಗುಳಿದ 3065 ಮಕ್ಕಳನ್ನು ಗುರುತಿಸಿ, ಈ ಪೈಕಿ 2616 ಮಕ್ಕಳನ್ನು ಮತ್ತೆ ಶಾಲೆಗೆ ದಾಖಲಿಸುವ ಮೂಲಕ ಮಹತ್ತರ ಸಾಧನೆ ಮಾಡಲಾಗಿದೆ.



ಸಮಗ್ರ ಶಿಕ್ಷಣ ಕರ್ನಾಟಕದಡಿ, 2021-22ರಿಂದ 2025-26ರವರೆಗೆ ನಡೆಸಿದ ವಿಶೇಷ ದಾಖಲಾತಿ ಹಾಗೂ ಗುರುತಿಸುವಿಕೆ ಅಭಿಯಾನದ ಮೂಲಕ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪತ್ತೆ ಹಚ್ಚಲಾಗಿದೆ. ಬಳಿಕ ಮಕ್ಕಳ ಮನೆಗಳಿಗೆ ತೆರಳಿ ಪೋಷಕರೊಂದಿಗೆ ಸಮಾಲೋಚನೆ ನಡೆಸಿ, ಶಿಕ್ಷಣದ ಮಹತ್ವವನ್ನು ಮನವರಿಕೆ ಮಾಡಿಕೊಟ್ಟು, ಮಕ್ಕಳನ್ನು ಮರಳಿ ಶಾಲೆಗೆ ಸೇರಿಸಲಾಗಿದೆ. ಇದರ ಪರಿಣಾಮವಾಗಿ ಒಟ್ಟು ಗುರುತಿಸಲಾದ ಮಕ್ಕಳಲ್ಲಿ ಶೇ.85ರಷ್ಟು ಮಕ್ಕಳು ಶಿಕ್ಷಣದ ಮುಖ್ಯವಾಹಿನಿಗೆ ಮರಳಿದ್ದಾರೆ. ಕೋವಿಡ್ ನಂತರ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮತ್ತೆ ತರಗತಿಗೆ ಕರೆ ತರುವುದು ಇಲಾಖೆಗೆ ದೊಡ್ಡ ಸವಾಲಾಗಿತ್ತು.

ಆರಂಭಿಕ ವರ್ಷಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಶಿಕ್ಷಣದಿಂದ ದೂರವಾಗಿದ್ದರೆ, ನಂತರದ ವರ್ಷಗಳಲ್ಲಿ ಈ ಪ್ರಮಾಣ ಗಣನೀಯವಾಗಿ ಇಳಿಕೆ ಯಾಗಿದೆ.

2021-22ರಲ್ಲಿ 836 ಮಕ್ಕಳು ಗುರುತಿಸಲ್ಪಟ್ಟಿದ್ದರೆ, 2024-25ರಲ್ಲಿ ಈ ಸಂಖ್ಯೆ 340ಕ್ಕೆ ಇಳಿದಿತ್ತು. ಆದರೆ 2025-26ರಲ್ಲಿ ಮತ್ತೆ 908 ಮಕ್ಕಳು ಗುರುತಿಸಲ್ಪಟ್ಟಿರುವುದು ಶಾಲೆಯಿಂದ ಹೊರಗುಳಿಯು ವಿಕೆಯ ಸಮಸ್ಯೆ ಸಂಪೂರ್ಣವಾಗಿ ನಿವಾರಣೆಯಾಗಿಲ್ಲ ಎಂಬುದನ್ನು ತೋರಿಸಿದೆ. ಆರ್ಥಿಕ ಸಂಕಷ್ಟದ ಜತೆಗೆ ವಲಸೆ ಕುಟುಂಬಗಳ ಮ ಕ್ಕಳ ಶಿಕ್ಷಣ ನಿರಂತರತೆಯೂ ಇಲಾಖೆಗೆ ಸವಾಲಾಗಿದೆ.

> ಮೇಲ್ತರಗತಿಗಳಿಗೆ ಸಾಗುವ ಹಂತದಲ್ಲಿ ಕೆಲ ವಿದ್ಯಾರ್ಥಿಗಳು ಶಾಲೆಯಿಂದ ಹೊರಗುಳಿಯುತ್ತಿರುವುದು ಗಮನಕ್ಕೆ ಬಂದಿದೆ. ಇಂತಹ ಮಕ್ಕಳನ್ನು ಗುರುತಿಸಿ ಮತ್ತೆ ಶಿಕ್ಷಣದ ಮುಖ್ಯ ವಾಹಿನಿಗೆ ತರಲು ನಿರಂತರ ಜಾಗೃತಿ ಅಭಿ ಯಾನ ನಡೆಸಲಾಗುತ್ತಿದೆ. ಪೋಷಕರು, ಶಿಕ್ಷಕರು ಹಾಗೂ ಸಮುದಾಯದ ಸಹಕಾರ ದಿಂದ ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ದೊರೆಯುವಂತೆ ಇಲಾಖೆ ಗಮನ ಹರಿಸುತ್ತಿದೆ. –ಶಂಕ್ರಮ್ಮ ಢವಳಗಿ, ಡಿಡಿಪಿಐ, ಕಲಬುರಗಿ.



> ಶಿಕ್ಷಣದಿಂದ ದೂರವಾದ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವುದು ಮಾತ್ರವಲ್ಲ, ಅವರು ಮುಂದಿನ ದಿನಗಳಲ್ಲಿಯೂ ಶಾಲೆಯಲ್ಲೇ ಉಳಿದು ನಿರಂತರವಾಗಿ ವಿದ್ಯಾಭ್ಯಾಸ ಮಾಡುವಂತೆ ನೋಡಿಕೊಳ್ಳುವುದು ನಮ್ಮ ಉದ್ದೇಶ. ಇನ್ನೂ ಶಿಕ್ಷಣದ ಮುಖ್ಯವಾಹಿನಿಗೆ ಸೇರದ ಮಕ್ಕಳನ್ನು ಗುರುತಿಸಿ ಶಾಲಾ ವ್ಯಾಪ್ತಿಗೆ ಒಳಪಡಿಸಲಾಗುವುದು. –ಇಕ್ರಂ ಶರೀಫ್, ಜಿಲ್ಲಾಧಿಕಾರಿ, ಕಲಬುರಗಿ

ಕೆಲವು ಮಕ್ಕಳು ಮೇಲ್ತರಗತಿಗಳಿಗೆ ಸಾಗುವ ಹಂತದಲ್ಲಿ ಶಾಲೆ ತೊರೆಯುತ್ತಿರುವುದು ಗಮನಕ್ಕೆ ಬಂದಿದ್ದು, ಇಂತಹ ಮಕ್ಕಳ ಮೇಲೆ ವಿಶೇಷ ನಿಗಾ ವಹಿಸಲು ಇಲಾಖೆ ಮುಂದಾಗಿದೆ. ಶಾಲೆಗೆ ದಾಖಲಿಸುವುದಷ್ಟೇ ಅಲ್ಲದೆ, ಮರಳಿ ಶಾಲೆ ತೊರೆಯದಂತೆ ಮಕ್ಕಳ ಶೈಕ್ಷಣಿಕ ಪ್ರಗತಿ ಹಾಗೂ ಹಾಜರಾತಿ ಮೇಲೆ ನಿರಂತರ ಮೇಲ್ವಿಚಾರಣೆ ನಡೆಸುವುದು ಮುಂದಿನ ಗುರಿಯಾಗಿದೆ. ಇನ್ನೂ ಶಿಕ್ಷಣದ ಮುಖ್ಯವಾಹಿನಿಗೆ ಸೇರದಿರುವ ಮಕ್ಕಳನ್ನು ಗುರುತಿಸಿ, ಅವರನ್ನು ಶಾಲಾ ವ್ಯಾಪ್ತಿಗೆ ತರುವ ಕಾರ್ಯವೂ ಮುಂದುವರಿಯಲಿದೆ.

ಚಿತ್ತಾಪುರದಲ್ಲಿ ಅತಿಹೆಚ್ಚು ಶಾಲೆ ಬಿಟ್ಟವರು ಗೃಹ ಸಚಿವರ ಕ್ಷೇತ್ರ ಚಿತ್ತಾಪುರ ತಾಲೂಕಿನಲ್ಲಿ ಜಿಲ್ಲೆಯಲ್ಲಿ ಅತಿ ಹೆಚ್ಚು ಶಾಲೆಯಿಂದ ಹೊರಗುಳಿದ ಮಕ್ಕಳು ಪತ್ತೆಯಾಗಿ ದ್ದಾರೆ. ಇಲ್ಲಿ 1556 ಮಕ್ಕಳು ಗುರುತಿಸಲ್ಪಟ್ಟಿದ್ದು, 1365 ಮಕ್ಕಳನ್ನು ಮತ್ತೆ ಶಾಲೆಗೆ ಸೇರಿಸಲಾಗಿದೆ.

ಕಲಬುರಗಿ ಉತ್ತರದಲ್ಲಿ 466ರಲ್ಲಿ 412, ಆಳಂದದಲ್ಲಿ 279ಲ್ಲಿ 207, ಚಿಂಚೋಳಿಯಲ್ಲಿ 248ರಲ್ಲಿ 216 ಹಾಗೂ ಕಲಬುರಗಿ ದಕ್ಷಿಣದಲ್ಲಿ 208ರಲ್ಲಿ 172 ಮಕ್ಕಳನ್ನು ಮರಳಿ ಶಿಕ್ಷಣದ ಮುಖ್ಯವಾಹಿನಿಗೆ ತರಲಾಗಿದೆ. ಅಫಜಲಪುರದಲ್ಲಿ 84ರಲ್ಲಿ 65, ಜೇವರ್ಗಿಯಲ್ಲಿ 89ರಲ್ಲಿ 69 ಹಾಗೂ ಸೇಡಂನಲ್ಲಿ 135ರಲ್ಲಿ 110 ಮಕ್ಕಳನ್ನು ಶಾಲೆಗೆ ದಾಖಲಿಸಲಾಗಿದೆ.




ಮೈಸೂರು ದಸರಾ ಆನೆಗಳ ಮೊದಲ ತಂಡ ಮಂಗಳವಾರ ಮೈಸೂರಿನಲ್ಲಿ ಜಂಬೂ ಸವಾರಿಗಾಗಿ ಅಧಿಕೃತ ಮಾರ್ಗ ಪರಿಚಯವನ್ನು ಪ್ರಾರಂಭಿಸಿತು.

# ಕುಡಿವ ನೀರು, ಮೇವು ಬ್ಯಾಂಕ್‌ಗೆ ಆದ್ಯತೆ ನೀಡಿ: ಶಾಸಕ ಬಸನಗೌಡ ದದ್ದಲ್



**ರಾಯಚೂರು, ಸೆ. 1**: ಅಧಿಕಾರಿಗಳು ಬರ ನಿರ್ವಹಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಬರ ನಿರ್ವಹಣೆಯಲ್ಲಿ ಪ್ರಮುಖವಾಗಿ ಕುಡಿವ ನೀರು ಸಂಗ್ರಹ, ಮೇವು ಬ್ಯಾಂಕ್ ಸ್ಥಾಪನೆಗೆ ಆದ್ಯತೆ ನೀಡಬೇಕು. ಬೆಳೆ ನಷ್ಟಕ್ಕೆ ಪರಿಹಾರ ಒದಗಿಸಲು ರೈತರ ಬ್ಯಾಂಕ್ ಖಾತೆ, ಪಹಣಿ ಸೇರಿ ದಾಖಲೆಗಳನ್ನು ಸಂಗ್ರಹಿಸಬೇಕು ಎಂದು ಗ್ರಾಮೀಣ ಶಾಸಕ ದದ್ದಲ್ ಬಸನಗೌಡ ಸೂಚಿಸಿದರು.

ತಾಪಂ ಸಭಾಂಗಣದಲ್ಲಿ ಆಯೋಜಿಸಿದ್ದ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಮಾತನಾಡಿ, ರಾಯಚೂರು ತಾಲೂಕಿಗೆ 50 ಕೋಟಿ ರೂ. ಅನುದಾನ ನಿಗದಿಪಡಿಸಲಾಗಿದೆ. ಕುಡಿವ ನೀರಿನ ವ್ಯವಸ್ಥೆಗೆ 1ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಕುಡಿವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳಲ್ಲಿ ಹೊಸ ಬೋರ್‌ವೆಲ್ ಕೊರೆಸುವುದು, ಪೈಪ್‌ಲೈನ್ ಕಾಮಗಾರಿ ಕೈಗೊಳ್ಳಬೇಕು. ಅಗತ್ಯವಿದ್ದಲ್ಲಿ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆದು ನೀರು ಪೂರೈಸಬೇಕು. ಖಾಸಗಿ ಬೋರ್‌ವೆಲ್‌ಗಳ ಮೂಲಕ ನೀರು ಪೂರೈಸಿದ ಸಂದರ್ಭದಲ್ಲಿ ಬಿಲ್‌ಗಳನ್ನು ಪಡೆದು ಹಣ ಪಾವತಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಮುಂಗಾರು ಮಳೆ ಕೈಕೊಟ್ಟಿರುವುದರಿಂದ ರೈತರು ಬೆಳೆ ನಷ್ಟ ಅನುಭವಿಸಿದ್ದಾರೆ. ಕಂದಾಯ ಇಲಾಖೆ ಅಧಿಕಾರಿಗಳು ಪ್ರತಿಯೊಂದು ಗ್ರಾಮದ ರೈತರ ಜಮೀನುಗಳಿಗೆ ತೆರಳಿ ಬೆಳೆ ನಷ್ಟದ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಬೇಕು. ರಸ್ತೆ ಬದಿಯ ಜಮೀನುಗಳಿಗೆ ತೆರಳಿ ಮಾಹಿತಿ ಪಡೆಯದೆ, ಪ್ರತಿಯೊಬ್ಬ ರೈತರ ಜಮೀನಿಗೂ ಭೇಟಿ ನೀಡಿ ಸಮೀಕ್ಷೆ ನಡೆಸಬೇಕು.

ಹತ್ತಿ, ತೊಗರಿ ಹಾಗೂ ಸಜ್ಜೆ ಬೆಳೆಗಳು 58ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ನಷ್ಟವಾಗಿದೆ. ರೈತರಿಗೆ ಪ್ರತಿಎಕರೆಗೆ ಸೂಕ್ತ ಪರಿಹಾರ ಒದಗಿಸಲು ಕ್ರಮಕೈಗೊಳ್ಳಬೇಕು. ಗ್ರಾಪಂ ವ್ಯಾಪ್ತಿಯಲ್ಲಿ ವಿಬಿಜಿ ರಾಮ್ ಜಿ ಯೋಜನೆಯಡಿ ಕೆಲಸ ಒದಗಿಸಬೇಕು.

ರೈತರಿಗೆ ಅಗತ್ಯ ರಸಗೊಬ್ಬರವನ್ನು ಸಮರ್ಪಕವಾಗಿ ಪೂರೈಸಬೇಕು. ವಸತಿ ರಹಿತರಿಗೆ ನಿವೇಶನ ಒದಗಿಸುವ ಉದ್ದೇಶದಿಂದ ಪ್ರತಿ ವಿಧಾನಸಭೆ ಕ್ಷೇತ್ರಕ್ಕೆ 50ಸಾವಿರ ನಿವೇಶನಗಳ ಗುರಿ ನೀಡಲಾಗಿದೆ. ಈ ಕುರಿತು ಅಧಿಕಾರಿಗಳು ಮಾಹಿತಿ ಸಂಗ್ರಹಿಸಿ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

# ಬಿಜೆಪಿ ಪಾದಯಾತ್ರೆಯ ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಾಜಿ ಶಾಸಕ ಸೋಮಶೇಖರರೆಡ್ಡಿ



**ಬಳ್ಳಾರಿ ಸೆ 01**. ಜನಸಾಮಾನ್ಯರ ಸಮಸ್ಯೆಗಳು, ರೈತರ ಸಂಕಷ್ಟ, ಯುವಕರ ನಿರುದ್ಯೋಗ, ಅಭಿವೃದ್ಧಿ ಹಾಗೂ ಜನರ ಹಕ್ಕುಗಳಿಗಾಗಿ ಭಾರತೀಯ ಜನತಾ ಪಾರ್ಟಿ ಕರ್ನಾಟಕ ವತಿಯಿಂದ ಹಮ್ಮಿಕೊಳ್ಳಲಾಗು ತ್ತಿರುವ ಜನತೆಯ ಪಾದಯಾತ್ರೆಯ ವೇದಿಕೆ ಕಾರ್ಯಕ್ರಮದಲ್ಲಿ ಮಾಜಿ ನಗರ ಶಾಸಕರಾದ ಸೋಮಶೇಖರ ರೆಡ್ಡಿ ಅವರು ಭಾಗವಹಿಸಿದ್ದರು.

ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ರವರು, ಮಾಜಿ ಮುಖ್ಯಮಂತ್ರಿಗಳು ಸಂಸದ ರಾದ ಜಗದೀಶ್ ಶೆಟ್ಟರ್, ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ, ಆರ್ ಅಶೋಕ್ ರವರು, ಭೈರತಿ ಬಸವರಾಜು, ಸಂಸದರು-ಕರ್ನಾಟಕ ಬಿಜೆಪಿ ಉಸ್ತುವಾರಿಗಳಾದ ಸುಧಾಕರ್ ರೆಡ್ಡಿ, ಸಂಸದ ಗೋವಿಂದ ಕಾರಜೋಲ್, ಗಂಗಾವತಿ ಶಾಸಕ ಜನಾರ್ದನ್ ರೆಡ್ಡಿ, ಮಾಜಿ ಸಚಿವರು ಹಾಗೂ ಹಿರಿಯ ಮುಖಂಡ ಬಿ ಶ್ರೀರಾಮುಲು, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಿಟಿ ರವಿ, ಮಾಜಿ ಸಚಿವ ರಾಜುಗೌಡ, ಶಾಸಕ ಪಿ.ರಾಜೀವ್, ವಿಧಾನ ಪರಿಷತ್ ಸದಸ್ಯರು ಹಾಗೂ ಮುಖ್ಯ ಸಚೇತಕ ರವಿಕುಮಾರ್, ಶಾಸಕಕೃಷ್ಣ ನಾಯಕ್, ಎಲ್ಲಾ ಮಾಜಿ ಶಾಸಕರು ಹಾಗೂ ಎಂ.ಎಲ್.ಸಿ ಮತ್ತು ಸಚಿವರು ಇನ್ನಿತರ ಈ ಕಾರ್ಯಕ್ರದಲ್ಲಿ ಭಾಗವಹಿಸಿದರು.

## ಪಿಡಿಎ ಎಂಜಿನಿಯರಿಂಗ್ ಕಾಲೇಜ್ ಘಟಿಕೋತ್ಸವ

# ನಾಡಿನ ಅಭಿವೃದ್ಧಿಗೆ ಯುವಕರ ಜ್ಞಾನ ಪ್ರತಿಭೆ ಬಳಸಿ: ಡಾ.ಅಜಯಸಿಂಗ್ ಕರೆ

**ಕಲಬುರಗಿ, ಸೆ. 1:** ಯುವಜನತೆ ತಮ್ಮ ಜ್ಞಾನ ಮತ್ತು ಪ್ರತಿಭೆಯನ್ನು ಸಮಾಜ ಹಾಗೂ ದೇಶದ ಅಭಿವೃದ್ಧಿಗೆ ಬಳಸಿ, ದೇಶದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯಸಿಂಗ್ ಅವರು ಕರೆ ನೀಡಿದರು.

ಶಿಕ್ಷಣವು ಕೇವಲ ಪದವಿ ಪಡೆಯುವ ಸಾಧನವಲ್ಲ. ಅದು ಜ್ಞಾನ, ಕೌಶಲ್ಯ ಮತ್ತು ಜವಾಬ್ದಾರಿಯುತ ದೇಶದ ಭವಿಷ್ಯವನ್ನು ರೂಪಿಸುವ ಶಕ್ತಿಯಾಗಿದೆ ಎಂದು ಬಣ್ಣಿಸಿ, ಪದವಿ ಪಡೆದ ಎಲ್ಲ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಹಾರೈಸಿದ ಅವರು, ಅವರ ಮುಂದಿನ ವೃತ್ತಿಜೀವನ ಯಶಸ್ವಿಯಾಗಲಿ ಮತ್ತು ಸಮಾಜಕ್ಕೆ ನಿಮ್ಮ ಕೊಡುಗೆ ಮಹತ್ವದ್ದಾಗಿರಲಿ. ಜಾಗತಿಕ ಮಟ್ಟದಲ್ಲಿ ದೇಶವನ್ನು ಸ್ಪರ್ಧಿಸುವಂತಗುವಲ್ಲಿ ಯುವ ಜನತೆಯ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಈ ಮೂಲಕ ದೇಶದ ಅಭಿವೃದ್ಧಿಯಲ್ಲಿ ಯುವಕರ ಕೊಡುಗೆಯೇ ಮಹತ್ವದ್ದಾಗಿರಲಿದೆ. ಆದ್ದರಿಂದ ಕೇವಲ ಪರೀಕ್ಷೆ ಪಾಸ್ ಮಾಡಿದ್ದೇವೆಂದು ಬಹೆಮ್ಮೆಪಡದೇ, ದೇಶದ ಅಭಿವೃದ್ಧಿಗೆ ನಿಮ್ಮ ಕೊಡುಗೆ ನೀಡುವ ಮೂಲಕ ಇಡೀ ದೇಶವೇ ಹೆಮ್ಮೆ ಪಡುವಂತೆ ನೀವಾಗಬೇಕು. ನಿಮ್ಮಲ್ಲಿ ಆ ಸಾಮರ್ಥ್ಯವಿದೆ. ಅದನ್ನು ಸರಿಯಾದ ರೀತಿಯಲ್ಲಿ ಬಳಸಿಕೊಳ್ಳಬೇಕು ಎಂದು ಸಚಿವರು ಕಿವಿಮಾತು ಹೇಳಿದರು.




ಸಮಾರಂಭದಲ್ಲಿ 690 ಸ್ನಾತಕ ಮತ್ತು 39 ಸ್ನಾತಕೋತ್ತರ ಸೇರಿ ಒಟ್ಟು 729 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. 2024-25ನೇ ಶೈಕ್ಷಣಿಕ ಸಾಲಿನಲ್ಲಿ ಅಂತಿಮ ವರ್ಷದ ವಿದ್ಯಾರ್ಥಿಗಳಲ್ಲಿ ಅತಿ ಹೆಚ್ಚು ಗ್ರೇಡ್ ಪಾಯಿಂಟ್ ಪಡೆದ ಒಟ್ಟು 19 ವಿದ್ಯಾರ್ಥಿಗಳ ನಡುವೆ 35 ಚಿನ್ನದ ಪದಕಗಳನ್ನು ವಿತರಿಸಲಾಗುತ್ತಿದ್ದು, ಅದರಲ್ಲಿ ಕಂಪ್ಯೂಟರ್ ಸೈನ್ಸ್ ವಿಭಾಗದ ಅಬ್ದುಲ್ಲಾ ದಾನೀಶ್ ಅವರು ಏಳು ಚಿನ್ನದ ಪದಕಗಳನ್ನು, ಎಲೆಕ್ಟ್ರಿಕಲ್ ಇಂಜಿನಿಯಯಿರಿಂಗ ವಿಭಾಗದ ಪ್ರಜ್ವಲ್ ಜಿ. ಶಾಸ್ತ್ರೀ ಅವರು ಆರು ಚಿನ್ನದ ಪದಕಗಳನ್ನು, ಸಿವಿಲ್ ಇಂಜಿನಿಯರಿಂಗ್ ವಿಭಾಗದ ಅಭಿಷೇಕ, ಎಲೆಕ್ಟ್ರಾನಿಕ್ಸ್ ವಿಭಾಗದ ತಲ್ಹಾ ಸುಫಿಯಾನ್, ಮೆಕ್ಯಾನಿಕಲ್ ಇಂಜಿನಿಯಯಿರಿಂಗ್ ವಿಭಾಗದ ತಲ್ಹಾ ಅಮನ್ ಅಲಿ ಮತ್ತು ಮಾಹಿತಿ ತಂತ್ರಜ್ಞಾನ ವಿಭಾಗದ ಸಾಗರ್ ಅವರು ತಲಾ ಎರಡೆರೆಡು ಚಿನ್ನದ ಪದಕಗಳನ್ನು ವಿವಿಧ ವಿಭಾಗಗಳ 11 ವಿದ್ಯಾರ್ಥಿಗಳು ಕೂಡ ಚಿನ್ನದ ಪದಕಗಳನ್ನು ಪಡೆದರು. ಅದೇ ರೀತಿ ಸ್ನಾತಕೋತ್ತರ ಪದವಿಯಲ್ಲಿ ಮೂರು ಚಿನ್ನದ ಪದಗಳನ್ನು ಇಬ್ಬರ ನಡುವೆ ವಿತರಿಸಲಾಯಿತು.

# ಬಿಲ್ಡ್ ಟೆಕ್ ಎಕ್ಸ್ ಪೋ ಅಭಿಯಾನಕ್ಕೆ ಚಾಲನೆ




**ಕಲಬುರಗಿ, ಸೆ. 1**: ನಿರ್ಮಾಣ ಕ್ಷೇತ್ರದಲ್ಲಿ ಇಂದು ಆಧುನಿಕತೆ ಬಂದಿದೆ. ನಾವೀನ್ಯತೆಯೊಂದಿಗೆ ಹೊಸ ತಂತ್ರಜ್ಞಾನದ ಮೂಲಕ ಬಾಳಿಕೆಯ ಕಟ್ಟಡಗಳ ನಿರ್ಮಾಣ, ಸುಂದರ ಮತ್ತು ಬಾಳಿಕೆಯ ಕಟ್ಟಡಗಳಿಗೆ ಆದ್ಯತೆ ನೀಡಲು ಸಾಕಷ್ಟು ಉಪಕರಣಗಳು ಮತ್ತು ವಿಧಾನಗಳೂ ಇವೆ. ಇವೆಲ್ಲವುಗಳ ಪ್ರದರ್ಶನದ ಮೂಲಕ ನಿರ್ಮಾಣ ಕ್ಷೇತ್ರದದಲ್ಲಿ ನಾವಿನ್ಯತೆ ಕುರಿತು ಪ್ರದರ್ಶನ ನಡೆಯಲಿದೆ.

ನಗರದ ಸಾರ್ವಜನಿಕ ಉದ್ಯಾನದಲ್ಲಿರುವ ವೀರಶೈವ ಕಲ್ಯಾಣಮಂಟಪದಲ್ಲಿ ಸೆ.4ರಿಂದ 6ರವರೆಗೆ ಹಮ್ಮಿಕೊಳ್ಳಲಾಗಿರುವ ಕಟ್ಟಡ ನಿರ್ಮಾಣ ಸಾಮಗ್ರಿಗಳ, ಗೃಹಾಲಂಕಾರ ವಸ್ತು, ಪೀಠೋಪಕರಣಗಳ ಬೃಹತ್ ಪ್ರದರ್ಶನ 'ಬಿಲ್ಡ್ ಟೆಕ್ ಎಕ್ಸ್ ಪೋ'ದ ಪ್ರಚಾರ ಅಭಿಯಾನಕ್ಕೆ ಜೆ.ಎಚ್. ಮಿಶ್ರಾ ಹಾಗೂ ಮುರಳೀಧರ ಜಿ. ಕರಲಗಿಕರ್ ಅವರು ಚಾಲನೆ ನೀಡಿದರು.

ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಶನ್, ಜೆಎಸ್‌ಡಬ್ಲ್ಯು ನಿಯೋ ಸ್ಟೀಲ್ ಪ್ರಾಯೋಜಕತ್ವದಲ್ಲಿ ಈ ಬೃಹತ್ ಪ್ರದರ್ಶನ ನಡೆಯಲಿದೆ.

ಅಸೋಸಿಯೇಷನ್ ಅಧ್ಯಕ್ಷ ಜೆ.ಎಚ್. ಮಿಶ್ರಾ, ವೃತ್ತಿಪರ ಸಿವಿಲ್ ಇಂಜಿನಿಯರರ ರಾಜ್ಯ ಪರಿಷತ್ ಸದಸ್ಯ ಮುರಳೀಧರ ಜಿ. ಕರಲಗೀಕರ್ ಅವರು ವೀರಶೈವ ಕಲ್ಯಾಣ ಮಂಟಪ ಆವರಣದಲ್ಲಿ ಹಸಿರು ನಿಶಾನೆ ತೋರಿಸುವ ಮೂಲಕ ವಾಹನಗಳಿಗೆ ಚಾಲನೆ ನೀಡಿ, ಈ ಪ್ರದರ್ಶನ ಕೇವಲ ಗುತ್ತಿಗೆದಾರರಿಗೆ ಮಾತ್ರವಲ್ಲದೇ ಸಾರ್ವಜನಿಕರೂ ವೀಕ್ಷಿಸುವ ಮೂಲಕ ತಮ್ಮ ಕನಸಿನ ಮನೆಗಳಲ್ಲಿ ನಾವೀನ್ಯತೆ ಮೂಡಿಸಲು ಸಾಧ್ಯವಾಗಲಿದೆ ಎಂದರು.

# ಹಳ್ಳಿಹಳ್ಳಿಗೂ ಪರಿಷತ್ತಿನ ಕಾರ್ಯಚಟುವಟಿಕೆ ತಲುಪುತ್ತಿರುವುದು ಶ್ಲಾಘನೀಯ-ಇನ್‌ಸ್ಪೆಕ್ಟರ್ ಗಾಯತ್ರಿ

**ಬಳ್ಳಾರಿ ಸೆ 01**. ಹಳ್ಳಿಹಳ್ಳಿಗೂ ಪರಿಷತ್ತಿನ ಕಾರ್ಯಚಟುವಟಿಕೆಗಳು ತಲುಪುತ್ತಿರುವುದು ಶ್ಲಾಘನೀಯ ಎಂದು ಬಳ್ಳಾರಿಯ ಸೈಬರ್ ಕ್ರೈಂ ಇನ್‌ಸ್ಪೆಕ್ಟರ್ ಗಾಯತ್ರಿ ಅಭಿಪ್ರಾಯಪಟ್ಟರು.

ಕಸಾಪ ಜಿಲ್ಲಾ ಘಟಕವು ಹಂದಿಹಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಆಯೋಜಿಸಿದ್ದ ದಿ. ಪಟೇಲ ಬಸವರಾಜ ಸ್ಮಾರಕ ದತ್ತಿ ಹಾಗೂ ದಿ. ವೈ. ಲಿಂಗಾರೆಡ್ಡಿ ಮತ್ತು ಪಾರ್ವತಮ್ಮ ದತ್ತಿ ಕಾರ್ಯಕ್ರಮ ಹಾಗೂ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಹಿರಿಯ ರಂಗಕಲಾವಿದ ಪುರುಷೋತ್ತಮ ಹಂದ್ಯಾಳು ಅವರಿಗೆ ಪರಿಷತ್ತಿನ ಗೌರವ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಾ ಹಂದಿಹಾಳು ಗ್ರಾಮದ ಪ್ರತಿಭೆಗಳು ಸಮಾಜದ ವಿವಿಧ ಕ್ಷೇತ್ರಗಳಿಗೆ



ಅನುಪಮ ಕೊಡುಗೆ ನೀಡಿದ್ದಾರೆ. ಆ ಸಾಲಿನಲ್ಲಿ ರಂಗಭೂಮಿಯ ಚಟುವಟಿಕೆಗಳ ಮೂಲಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಪುರುಷೋತ್ತಮ ಹಂದ್ಯಾಳು ಗ್ರಾಮದ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದು ಗಾಯತ್ರಿ ನುಡಿದರು.

ಕುವೆಂಪು ಮಕ್ಕಳ ಸಾಹಿತ್ಯ ಕುರಿತು ವೀರಶೈವ ಕಾಲೇಜಿನ ಕನ್ನಡ ಉಪನ್ಯಾಸಕರಾದ ಡಾ. ನೀಲಮ್ಮ ವಿಶೇಷ ಉಪನ್ಯಾಸ ನೀಡಿದರು.

ದತ್ತಿ ದಾನಿಗಳಾದ ಖ್ಯಾತವೈದ್ಯ ಡಾ. ಅರವಿಂದ ಪಟೇಲ ಮಾತನಾಡಿ ತಮ್ಮ ತಂದೆಯವರ ಹೆಸರಿನಲ್ಲಿ ನೀಡಿದ ದತ್ತಿ ದಾನವು ಜ್ಞಾನದಾಸೋಹದ ಮೂಲಕ ಸಾರ್ಥಕ ಗೊಳ್ಳುತ್ತಿರುವುದು ಪರಿಷತ್ತಿನ ಬಗ್ಗೆ ಅತೀವ ಹೆಮ್ಮೆಮೂಡಿಸದೆ ಎಂದರು.

ವೇದಿಕೆಯಲ್ಲಿ ಕ.ಸಾ.ಪ ಜಿಲ್ಲಾ ಅಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ, ನಿವೃತ್ತ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಮಲ್ಲಿಕಾರ್ಜುನಯ್ಯ ಹಿರೇಮಠ ವೇದಿಕೆ ಉದ್ದೇಶಿಸಿ ಮಾತನಾಡಿದರು. ಮುಖ್ಯಗುರುಗಳಾದ ಶ್ರೀಮತಿ ಶಶಿರೇಖಾ ಎಸ್, ಕಸಾಪ ಜಿಲ್ಲಾ ಸಂಚಾಲಕ ಕಪ್ಪಗಲ್ಲು ಬಿ ಚಂದ್ರಶೇಖರಚಾರ್, ಕಥೆಗಾರ ವೀರೇಂದ್ರ ರಾವಿಹಾಳ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಪುರುಷೋತ್ತಮ ಹಂದ್ಯಾಳು ಮಾತನಾಡಿ ಪರಿಷತ್ತು ಸಾಹಿತಿ ಮತ್ತು ವಿವಿಧ ಕ್ಷೇತ್ರಗಳ ಕಲಾವಿದರಿಗೆ ಅವರ ಪ್ರತಿಭೆಯನ್ನು ಗುರುತಿಸಿ ಗೌರವಿಸುವ ಮೂಲಕ ಅವರನ್ನು ಪ್ರೋತ್ಸಾಹಿಸುತ್ತಿದೆ ಎಂದರು.

